


Volume : 9 | Issue : 159 | September : 09 : 2026 : Wednesday
ಸಂಪುಟ : 9 | ಸಂಚಿಕೆ : 159 | ಸೆಪ್ಟಂಬರ್ : 09 : 2026 : ಬುಧವಾರ

www.VIKRAMAVAHINI.com

—— ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ ——

# ವಿಕ್ರಮ ವಾಹಿನಿ

ಪುಟ 4 | ₹2 | ಕನ್ನಡ ದಿನಪತ್ರಿಕೆ

VIKRAMA VAHINI

PRGI NO: KARKAN/2018/78481




'ಹನುಮಾನ್ ಅಂಶ್' ಚಿತ್ರಕ್ಕೆ ಪ್ರೀತಿ ಜಿಂಟಾ ಮೆಚ್ಚುಗೆ: ಚಿತ್ರಮಂದಿರದಲ್ಲಿ ಸಿನಿಮಾ ವೀಕ್ಷಿಸಿದ ನಟಿ ಪ್ರೀತಿ ಜಿಂಟಾ, 'ಸೀತಾ ರಾಮ್' ಎಂದು ಮೆಚ್ಚುಗೆ ವ್ಯಕ್ತಪಡಿಸಿ, ಅಭಿಮಾನಿಗಳು ಚಿತ್ರವನ್ನು ತಪ್ಪದೇ ಚಿತ್ರಮಂದಿರದಲ್ಲೇ ವೀಕ್ಷಿಸುವಂತೆ ಕರೆ ನೀಡಿದರು.

ಅಲ್ಪಸಂಖ್ಯಾತರ ಸಮಸ್ಯೆಗಳಿಗೆ ಸ್ಪಂದಿಸಿ: ಸಿಎಂ ಸೂಚನೆ ಪುಟ 2

'ಪ್ರಜಾಪ್ರಭುತ್ವದಲ್ಲಿ ಹೋರಾಟ ಪ್ರತಿಯೊಬ್ಬರ ಹಕ್ಕು; ಇದು ಜನಪರ ಹೋರಾಟ' ಪುಟ 4


# ಮತ್ತೆ ತಮಿಳುನಾಡಿಗೆ ನೀರು ಬಿಡುಗಡೆ ಆದೇಶ

## ಕರ್ನಾಟಕದ ಆಕ್ಷೇಪದ ನಡುವೆಯೂ ಕಾವೇರಿ ನಿರ್ವಹಣಾ ಪ್ರಾಧಿಕಾರದ ಸೂಚನೆ; ನಿಯಂತ್ರಣ ಸಮಿತಿ ಆದೇಶ ಎತ್ತಿಹಿಡಿದ ಪ್ರಾಧಿಕಾರ

● ವಿಕ್ರಮ ವಾಹಿನಿ | ಬೆಂಗಳೂರು

ಕಾವೇರಿ ನೀರು ಹಂಚಿಕೆ ವಿಚಾರದಲ್ಲಿ ಕರ್ನಾಟಕಕ್ಕೆ ಮತ್ತೊಂದು ಹಿನ್ನಡೆಯಾಗಿದ್ದು, ತಮಿಳುನಾಡಿಗೆ ಪ್ರತಿದಿನ 6 ಸಾವಿರ ಕ್ಯೂಸೆಕ್ ಕಾವೇರಿ ನೀರು ಹರಿಸುವಂತೆ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ (ಸಿಡಬ್ಲ್ಯುಎಂಎ) ಸೂಚಿಸಿದೆ.

ತಮಿಳುನಾಡಿಗೆ ನಿತ್ಯ 6 ಸಾವಿರ ಕ್ಯೂಸೆಕ್ ನೀರು ಹರಿಸುವಂತೆ ಕಾವೇರಿ ನೀರು ನಿಯಂತ್ರಣ ಸಮಿತಿ (ಸಿಡಬ್ಲ್ಯುಆರ್‌ಸಿ) ನೀಡಿದ್ದ ಸೂಚನೆಯನ್ನು ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರದ ಸಭೆ ಎತ್ತಿಹಿಡಿದಿದೆ. ಪ್ರಾಧಿಕಾರದ ಅಧ್ಯಕ್ಷ ಎಸ್.ಕೆ. ಹಲ್ದಾರ್ ಅವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಈ ಕುರಿತು ತೀರ್ಮಾನ ಕೈಗೊಳ್ಳಲಾಗಿದೆ.



ಸಭೆಯಲ್ಲಿ ಕರ್ನಾಟಕದ ಅಧಿಕಾರಿಗಳು ರಾಜ್ಯದ ಜಲಾಶಯಗಳಲ್ಲಿನ ನೀರಿನ ಲಭ್ಯತೆ, ಒಳಹರಿವಿನ ಪ್ರಮಾಣ, ಕುಡಿಯುವ ನೀರಿನ ಅಗತ್ಯ ಹಾಗೂ ರೈತರ ಪರಿಸ್ಥಿತಿಯನ್ನು ವಿವರಿಸಿದರು. ರಾಜ್ಯದ ಜಲಾಶಯಗಳಲ್ಲಿ ನಿರೀಕ್ಷಿತ ಪ್ರಮಾಣದಲ್ಲಿ ನೀರು ಲಭ್ಯವಿಲ್ಲದ ಹಿನ್ನೆಲೆಯಲ್ಲಿ ಹೆಚ್ಚುವರಿ ನೀರನ್ನು ತಮಿಳುನಾಡಿಗೆ ಹರಿಸುವುದು ಕಷ್ಟಕರವಾಗಲಿದೆ ಎಂದು ಕರ್ನಾಟಕದ ಪರವಾಗಿ ವಾದ ಮಂಡಿಸಲಾಯಿತು.

ಆದಾಗ್ಯೂ, ಕರ್ನಾಟಕದ ಆಕ್ಷೇಪವನ್ನು ಪರಿಗಣಿಸಿದರೂ, ಸಿಡಬ್ಲ್ಯುಆರ್‌ಸಿ ನೀಡಿದ್ದ ನಿತ್ಯ 6 ಸಾವಿರ ಕ್ಯೂಸೆಕ್ ನೀರು ಹರಿಸುವ ಸೂಚನೆಯನ್ನು ಮುಂದುವರಿಸಲು ಸಿಡಬ್ಲ್ಯುಎಂಎ ನಿರ್ಧರಿಸಿದೆ. ಇದರಿಂದ ಕಾವೇರಿ ನೀರು ಹಂಚಿಕೆ ವಿಚಾರದಲ್ಲಿ ರಾಜ್ಯದ ಮೇಲೆ ಮತ್ತಷ್ಟು ನೀರು ಬಿಡುಗಡೆ ಒತ್ತಡ ಎದುರಾದಂತಾಗಿದೆ.

ಸಭೆಯಲ್ಲಿ ತಮಿಳುನಾಡಿನ ಅಧಿಕಾರಿಗಳು ವರ್ಚ್ಯುಯಲ್ ಮೂಲಕ ಭಾಗವಹಿಸಿದ್ದರು. ಕರ್ನಾಟಕದ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತಾ ಕೂಡ ಆನ್‌ಲೈನ್ ಮೂಲಕ ಸಭೆಯಲ್ಲಿ ಪಾಲ್ಗೊಂಡು ರಾಜ್ಯದ ಜಲಾಶಯಗಳ ಸ್ಥಿತಿ ಹಾಗೂ ನೀರಿನ ಅಗತ್ಯತೆ ಕುರಿತು ಕರ್ನಾಟಕದ ನಿಲುವನ್ನು ಪ್ರಾಧಿಕಾರದ ಗಮನಕ್ಕೆ ತಂದರು.

ಕಾವೇರಿ ಜಲಾನಯನ ಪ್ರದೇಶದಲ್ಲಿ ಸುರಿದ ಮಳೆ, ಜಲಾಶಯಗಳ ಒಳಹರಿವು, ನೀರಿನ ಸಂಗ್ರಹ, ಕುಡಿಯುವ ನೀರಿನ ಬೇಡಿಕೆ ಹಾಗೂ ಎರಡೂ ರಾಜ್ಯಗಳ ನೀರಿನ ಅಗತ್ಯತೆ ಸೇರಿದಂತೆ ವಿವಿಧ ಅಂಶಗಳ ಕುರಿತು ಸಭೆಯಲ್ಲಿ ಚರ್ಚೆ ನಡೆಯಿತು. ಈ ಎಲ್ಲ ವಿಚಾರಗಳ ನಡುವೆಯೂ ತಮಿಳುನಾಡಿಗೆ ನಿತ್ಯ 6 ಸಾವಿರ ಕ್ಯೂಸೆಕ್ ನೀರು ಹರಿಸುವ ಸೂಚನೆಯನ್ನು ಮುಂದುವರಿಸಿರುವುದು ಕರ್ನಾಟಕದಲ್ಲಿ ಮತ್ತೆ ಆತಂಕಕ್ಕೆ ಕಾರಣವಾಗಿದೆ.

ಪ್ರಾಧಿಕಾರದ ಸೂಚನೆಯಂತೆ ನೀರು ಬಿಡುಗಡೆ ಮಾಡಿದರೆ ರಾಜ್ಯದ ಜಲಾಶಯಗಳ ನೀರಿನ ಸಂಗ್ರಹದ ಮೇಲೆ ಪರಿಣಾಮ ಬೀರುವ ಸಾಧ್ಯತೆ ಇದೆ. ಮುಂದಿನ ದಿನಗಳಲ್ಲಿ ಕುಡಿಯುವ ನೀರಿನ ಅಗತ್ಯತೆ ಹಾಗೂ ರೈತರ ಹಿತಾಸಕ್ತಿಯನ್ನು ಗಮನದಲ್ಲಿಟ್ಟುಕೊಂಡು ರಾಜ್ಯ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ಎಂಬುದು ಕುತೂಹಲ ಮೂಡಿಸಿದೆ.

■ ಸುದ್ದಿ ಚುಟುಕು

## ಮಂಗಳೂರು ಜೈಲಿನಲ್ಲಿ 10 ಮೊಬೈಲ್‌ಗಳ ಪತ್ತೆ

● ವಿಕ್ರಮ ವಾಹಿನಿ | ಮಂಗಳೂರು

ಬೆಂಗಳೂರಿನ ಪರಪ್ಪನ ಅಗ್ರಹಾರ ಜೈಲಿನ ಬಳಿಕ ಮಂಗಳೂರು ಜಿಲ್ಲಾ ಕಾರಾಗೃಹದ ಮೇಲೂ ಪೊಲೀಸರು ದಿಢೀರ್ ದಾಳಿ ನಡೆಸಿದ್ದು, ಒಂಬತ್ತು ವಿಚಾರಣಾಧೀನ ಕೈದಿಗಳಿಂದ 10 ಸ್ಮಾರ್ಟ್‌ಫೋನ್‌ಗಳನ್ನು ವಶಪಡಿಸಿಕೊಂಡಿದ್ದಾರೆ.

ನಿಷೇಧಿತ ಮೊಬೈಲ್‌ಗಳನ್ನು ಕೈದಿಗಳು ಬಳಸುತ್ತಿದ್ದಾರೆ ಎಂಬ ಖಚಿತ ಮಾಹಿತಿ ಆಧರಿಸಿ ಜೈಲಿನ ಎ–ಬ್ಲಾಕ್‌ನಲ್ಲಿ ಶೋಧ ನಡೆಸಲಾಗಿದೆ. ಈ ವೇಳೆ 10 ಸ್ಮಾರ್ಟ್‌ಫೋನ್‌ಗಳು ಪತ್ತೆಯಾಗಿವೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ರಿಫತ್ ಅಲಿ, ಇಬ್ರಾಹಿಂ ಖಲೀಲ್, ಅಸ್ಫಾಕ್ ಅಲಿಯಾಸ್ ಜುಟ್ಟು ಅಸ್ಫಾಕ್, ಅರ್ಷದ್, ದಾವೂದ್ ಪರ್ವೇಜ್, ನಜ್ರತ್ ಅಲಿ, ಶಿಫಾನ್, ಅಬ್ದುಲ್ ಸಾದಿಕ್ ಹಾಗೂ ಅರ್ಫಜ್ ಅವರಿಂದ ಮೊಬೈಲ್‌ಗಳನ್ನು ವಶಪಡಿಸಿಕೊಳ್ಳಲಾಗಿದೆ. ಇವರಲ್ಲಿ ಕೆಲವರು ಕೊಲೆ ಪ್ರಕರಣ, ಇನ್ನು ಕೆಲವರು ಮಾದಕವಸ್ತು ಸಾಗಾಟ ಹಾಗೂ ಕೋಕಾ ಕಾಯ್ದೆಯಡಿ ದಾಖಲಾಗಿರುವ ಪ್ರಕರಣಗಳ ಆರೋಪಿಗಳಾಗಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ಅಕ್ರಮವಾಗಿ ಜೈಲಿನೊಳಗೆ ಮೊಬೈಲ್ ಬಳಕೆ ಮಾಡಿರುವ ಆರೋಪದಡಿ ಬರ್ಕೆ ಪೊಲೀಸ್ ಠಾಣೆಯಲ್ಲಿ ಭಾರತೀಯ ನ್ಯಾಯ ಸಂಹಿತೆ ಹಾಗೂ ಕರ್ನಾಟಕ ಕಾರಾಗೃಹ ಕಾಯ್ದೆಯ ಸಂಬಂಧಿತ ಸೆಕ್ಷನ್‌ಗಳ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ.

ವಶಪಡಿಸಿಕೊಂಡ ಮೊಬೈಲ್‌ಗಳಿಗೆ ಸಿಮ್‌ಗಳನ್ನು ಪೂರೈಸಿದವರು ಯಾರು, ಜೈಲಿನೊಳಗೆ ಅವು ಹೇಗೆ ಪ್ರವೇಶಿಸಿದವು ಹಾಗೂ ಅವುಗಳನ್ನು ಯಾವ ಉದ್ದೇಶಕ್ಕೆ ಬಳಸಲಾಗುತ್ತಿತ್ತು ಎಂಬುದರ ಕುರಿತು ಬರ್ಕೆ ಪೊಲೀಸರು ತನಿಖೆ ನಡೆಸುತ್ತಿದ್ದಾರೆ.

## ಖರ್ಗೆ ಟ್ರಸ್ಟ್ ಜಮೀನು: ಹೈಕೋರ್ಟ್ ರಿಲೀಫ್

● ವಿಕ್ರಮ ವಾಹಿನಿ | ಬೆಂಗಳೂರು

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಕುಟುಂಬದ ಸಿದ್ಧಾರ್ಥ ವಿಹಾರ ಟ್ರಸ್ಟ್‌ಗೆ ನಿಯಮಬಾಹಿರವಾಗಿ ನಿವೇಶನ ಮಂಜೂರು ಮಾಡಲಾಗಿದೆ ಎಂಬ ಆರೋಪಕ್ಕೆ ಸಂಬಂಧಿಸಿದ ಖಾಸಗಿ ದೂರಿನ ವಿಚಾರಣೆಯನ್ನು ಮುಂದುವರಿಸಲು ಹೈಕೋರ್ಟ್ ಸೂಚಿಸಿದೆ. ಖಾಸಗಿ ದೂರಿನ ಪ್ರಮಾಣಪತ್ರದಲ್ಲಿ ತಾಂತ್ರಿಕ ದೋಷಗಳಿವೆ ಎಂಬ ಕಾರಣಕ್ಕೆ ಲೋಕಾಯುಕ್ತ ತನಿಖೆಗೆ ಪ್ರಕರಣವನ್ನು ವಹಿಸದೆ ವಿಚಾರಣಾ ನ್ಯಾಯಾಲಯವೇ ಸ್ವತಃ ವಿಚಾರಣೆಗೆ ಮುಂದಾಗುವುದು ಸೂಕ್ತವಲ್ಲ ಎಂದು ನ್ಯಾಯಮೂರ್ತಿ ಎಂ. ನಾಗಪ್ರಸನ್ನ ಅವರ ಏಕಸದಸ್ಯ ಪೀಠ ಅಭಿಪ್ರಾಯಪಟ್ಟಿದೆ. 2ನೇ ಪುಟಕ್ಕೆ...

## ಪ್ರಜ್ವಲ್ ರೇವಣ್ಣ 2 ದಿನ ಪೊಲೀಸ್ ಕಸ್ಟಡಿಗೆ

● ವಿಕ್ರಮ ವಾಹಿನಿ | ಬೆಂಗಳೂರು

ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹದಲ್ಲಿ ಮೊಬೈಲ್ ಸೇರಿದಂತೆ ಇತರ ವಸ್ತುಗಳನ್ನು ಹೊಂದಿದ್ದ ಆರೋಪಕ್ಕೆ ಸಂಬಂಧಿಸಿದ ಪ್ರಕರಣದಲ್ಲಿ ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಅವರನ್ನು ಎರಡು ದಿನಗಳ ಕಾಲ ಪೊಲೀಸ್ ಕಸ್ಟಡಿಗೆ ನೀಡಿ 42ನೇ ಎಸಿಎಂಎಂ ನ್ಯಾಯಾಲಯ ಆದೇಶಿಸಿದೆ.

ಪ್ರಕರಣಕ್ಕೆ ಸಂಬಂಧಿಸಿದಂತೆ ಪ್ರಜ್ವಲ್ ರೇವಣ್ಣ ಅವರನ್ನು ಬಾಡಿ ವಾರೆಂಟ್ ಮೂಲಕ ವಶಕ್ಕೆ ಪಡೆದು ವಿಚಾರಣೆ ನಡೆಸಲು ಪೊಲೀಸರು ನ್ಯಾಯಾಲಯದ ಅನುಮತಿ ಕೋರಿದ್ದರು. ಪ್ರಕರಣದಲ್ಲಿ ಪ್ರತಾಪ್ ಎ1 ಹಾಗೂ ಪ್ರಜ್ವಲ್ ರೇವಣ್ಣ ಎ2 ಆರೋಪಿಯಾಗಿದ್ದು, ತನಿಖೆಗೆ ಅಗತ್ಯವಿರುವ ಹಿನ್ನೆಲೆಯಲ್ಲಿ ಇಬ್ಬರನ್ನೂ ಕಸ್ಟಡಿಗೆ ಪಡೆಯುವಂತೆ ಪೊಲೀಸರು ಮನವಿ ಮಾಡಿದ್ದರು.

ವಾದ ಆಲಿಸಿದ ನ್ಯಾಯಾಲಯವು ಪ್ರಜ್ವಲ್ ರೇವಣ್ಣ ಅವರನ್ನು ಎರಡು ದಿನಗಳ ಕಾಲ ಪೊಲೀಸ್ ಕಸ್ಟಡಿಗೆ ಒಪ್ಪಿಸಿದೆ. ಪ್ರಕರಣದ ತನಿಖೆಯ ಭಾಗವಾಗಿ ಮೊಬೈಲ್ ಬಳಕೆ ಹಾಗೂ ಜೈಲಿನೊಳಗೆ ನಿಷೇಧಿತ ವಸ್ತುಗಳು ಪತ್ತೆಯಾದ ಕುರಿತು ವಿಚಾರಣೆ ನಡೆಯಲಿದೆ.

ಜೈಲಿನಲ್ಲಿ ಪ್ರಜ್ವಲ್ ರೇವಣ್ಣ ಅವರ ಬಳಿ ಮೊಬೈಲ್, ಪೆನ್‌ಡ್ರೈವ್ ಹಾಗೂ ನೋಟ್‌ಬುಕ್ ಪತ್ತೆಯಾಗಿದ್ದ ಹಿನ್ನೆಲೆಯಲ್ಲಿ ಪರಪ್ಪನ ಅಗ್ರಹಾರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ವಶಪಡಿಸಿಕೊಂಡ ಮೊಬೈಲ್ ಹಾಗೂ ಪೆನ್‌ಡ್ರೈವ್‌ಗಳನ್ನು ತಾಂತ್ರಿಕ ಪರಿಶೀಲನೆಗಾಗಿ ರಿಟ್ರೀವಲ್‌ಗೆ ಕಳುಹಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

# ಮೋದಿ ಕಾರ್ಯಕ್ರಮಕ್ಕೆ ನಕಲಿ ಅಧಿಕಾರಿ ಎಂಟ್ರಿ!

**ಮುಂಬೈನ ಬಿಕೆಸಿಯ ನೀತಾ ಅಂಬಾನಿ ಸಾಂಸ್ಕೃತಿಕ ಕೇಂದ್ರದಲ್ಲಿ ಪ್ರಧಾನಿ ಮೋದಿ ಕಾರ್ಯಕ್ರಮಕ್ಕೂ ಮುನ್ನ ಭದ್ರತಾಲೋಪ ನಡೆದಿದೆ. ತಾನು ಪಿಎಂಒ ಅಧಿಕಾರಿ ಎಂದು ಹೇಳಿಕೊಂಡ 24 ವರ್ಷದ ರೋಹನ್ ಪಾರೇಖ್‌ನ ಗುರುತಿನ ಚೀಟಿ ನಕಲಿ ಎಂಬುದು ಪತ್ತೆಯಾಗಿದ್ದು, ಆತನೊಂದಿಗೆ ಇದ್ದ ಅಂಗರಕ್ಷಕನ ಬಳಿ ಬಂದೂಕು ಪತ್ತೆಯಾಗಿದೆ. ಇಬ್ಬರನ್ನೂ ವಶಕ್ಕೆ ಪಡೆದಿರುವ ಮುಂಬೈ ಅಪರಾಧ ವಿಭಾಗ ತನಿಖೆ ಕೈಗೊಂಡಿದೆ.**

● ವಿಕ್ರಮ ವಾಹಿನಿ | ಮುಂಬೈ

ಪ್ರಧಾನಿ ನರೇಂದ್ರ ಮೋದಿ ಭಾಗವಹಿಸಲಿದ್ದ ಕಾರ್ಯಕ್ರಮಕ್ಕೂ ಮುನ್ನ ಮುಂಬೈನ ಬಾಂದ್ರಾ–ಕುರ್ಲಾ ಕಾಂಪ್ಲೆಕ್ಸ್‌ನಲ್ಲಿರುವ ನೀತಾ ಅಂಬಾನಿ ಸಾಂಸ್ಕೃತಿಕ ಕೇಂದ್ರದಲ್ಲಿ ಭದ್ರತಾಲೋಪದ ಘಟನೆ ನಡೆದಿದೆ. ಅನುಮಾನಾಸ್ಪದವಾಗಿ ಓಡಾಡುತ್ತಿದ್ದ ಇಬ್ಬರನ್ನು ಪೊಲೀಸರು ವಶಕ್ಕೆ ಪಡೆದು ವಿಚಾರಣೆ ನಡೆಸಿದ್ದಾರೆ.

ಬಂಧಿತರಲ್ಲಿ 24 ವರ್ಷದ ರೋಹನ್ ಪಾರೇಖ್ ಎಂಬಾತ ತಾನು ಪ್ರಧಾನಮಂತ್ರಿ ಕಚೇರಿ (ಪಿಎಂಒ) ಅಧಿಕಾರಿ ಎಂದು ಪರಿಚಯಿಸಿಕೊಂಡಿದ್ದ. ಆದರೆ ಆತನ ಗುರುತಿನ ಚೀಟಿ ಪರಿಶೀಲಿಸಿದಾಗ ಅದು ನಕಲಿ ಎಂಬುದು ಪತ್ತೆಯಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಆತನೊಂದಿಗೆ ಬಂದಿದ್ದ ಅಂಗರಕ್ಷಕನನ್ನು ಕೂಡ ಪೊಲೀಸರು ವಶಕ್ಕೆ ಪಡೆದಿದ್ದು, ಆತನ ಬಳಿ ಬಂದೂಕು ಪತ್ತೆಯಾಗಿದೆ. ಕಾರ್ಯಕ್ರಮದ ಸ್ಥಳದಲ್ಲಿ ಅನುಮಾನಾಸ್ಪದವಾಗಿ ಓಡಾಡುತ್ತಿದ್ದುದನ್ನು ಗಮನಿಸಿದ



ಭದ್ರತಾ ಸಿಬ್ಬಂದಿ ಪೊಲೀಸರಿಗೆ ಮಾಹಿತಿ ನೀಡಿದ ಬಳಿಕ ಇಬ್ಬರನ್ನೂ ವಶಕ್ಕೆ ಪಡೆಯಲಾಗಿದೆ.

ಘಟನೆಯ ಬೆನ್ನಲ್ಲೇ ತನಿಖೆಯನ್ನು ಮುಂಬೈ ಅಪರಾಧ ವಿಭಾಗಕ್ಕೆ ವಹಿಸಲಾಗಿದ್ದು, ಇಬ್ಬರ ಹಿನ್ನೆಲೆ ಹಾಗೂ ಕಾರ್ಯಕ್ರಮದ ಸ್ಥಳಕ್ಕೆ ಪ್ರವೇಶಿಸಿದ ಉದ್ದೇಶದ ಕುರಿತು ತೀವ್ರ ವಿಚಾರಣೆ ನಡೆಯುತ್ತಿದೆ. ಪ್ರಧಾನಿ ಕಾರ್ಯಕ್ರಮಕ್ಕೆ ಕೆಲವೇ ಗಂಟೆಗಳ ಮುನ್ನ ಘಟನೆ ನಡೆದಿರುವ ಹಿನ್ನೆಲೆಯಲ್ಲಿ ಭದ್ರತಾ ಪಡೆಗಳು ಕಟ್ಟೆಚ್ಚರ ವಹಿಸಿವೆ.

ಪ್ರಧಾನಿ ಮೋದಿ ಅವರು ಮಂಗಳವಾರ ಸಂಜೆ 5.45ಕ್ಕೆ ಮುಂಬೈನಲ್ಲಿ ನಡೆಯಲಿರುವ 'ಗ್ಲೋಬಲ್ ಫಿನ್‌ಟೆಕ್ ಫೆಸ್ಟ್–2026'ರ ಏಳನೇ ಆವೃತ್ತಿಯನ್ನು ಉದ್ಘಾಟಿಸಲಿದ್ದಾರೆ.

## ಡಿ.ಕೆ. ಶಿವಕುಮಾರ್ ಆರೋಗ್ಯದಲ್ಲಿ ಏರುಪೇರು

● ವಿಕ್ರಮ ವಾಹಿನಿ | ಬೆಂಗಳೂರು

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಆರೋಗ್ಯದಲ್ಲಿ ಬುಧವಾರ ವಿಧಾನಸೌಧದಲ್ಲಿ ಅಲ್ಪ ವ್ಯತ್ಯಾಸ ಕಾಣಿಸಿಕೊಂಡ ಹಿನ್ನೆಲೆಯಲ್ಲಿ ವೈದ್ಯರು ಸ್ಥಳಕ್ಕೆ ಧಾವಿಸಿ ತಪಾಸಣೆ ನಡೆಸಿ ಚಿಕಿತ್ಸೆ ನೀಡಿದರು. ಸದ್ಯ ಅವರ ಆರೋಗ್ಯ ಸ್ಥಿರವಾಗಿದ್ದು, ರಕ್ತದೊತ್ತಡ ಸಹಜ ಸ್ಥಿತಿಗೆ ಮರಳಿದೆ ಎಂದು ತಿಳಿದುಬಂದಿದೆ.

ವಿಧಾನಸೌಧದ ಮೂರನೇ ಮಹಡಿಯಲ್ಲಿರುವ ಮುಖ್ಯಮಂತ್ರಿಗಳ ಕಚೇರಿಯಲ್ಲಿ ಕೆಲಸದಲ್ಲಿ ನಿರತರಾಗಿದ್ದ ವೇಳೆ ಶಿವಕುಮಾರ್ ಅವರಿಗೆ ಅಲ್ಪ ಸುಸ್ತು ಕಾಣಿಸಿಕೊಂಡಿತ್ತು. ಕೂಡಲೇ ವಿಧಾನಸೌಧದ ವೈದ್ಯರನ್ನು ಕರೆಸಲಾಗಿದ್ದು, ತಪಾಸಣೆ ನಡೆಸಿದಾಗ ರಕ್ತದೊತ್ತಡದಲ್ಲಿ ಏರುಪೇರು ಕಂಡುಬಂದಿದೆ.

ವೈದ್ಯರ ಸಲಹೆಯಂತೆ ಕೆಲಕಾಲ ವಿಶ್ರಾಂತಿ ಪಡೆದ ಬಳಿಕ ಅವರ ಆರೋಗ್ಯದಲ್ಲಿ ಚೇತರಿಕೆ ಕಂಡುಬಂದಿದೆ. ಯಾವುದೇ ಗಂಭೀರ ಸಮಸ್ಯೆ ಇಲ್ಲ ಎಂದು ಮೂಲಗಳು ತಿಳಿಸಿವೆ.

ಕಳೆದ ಕೆಲ ದಿನಗಳಿಂದ ರಾಜ್ಯದ ವಿವಿಧೆಡೆ ಪ್ರವಾಸ, ಸಭೆ ಹಾಗೂ ಕಾರ್ಯಕ್ರಮಗಳಲ್ಲಿ ನಿರಂತರವಾಗಿ ಭಾಗವಹಿಸುತ್ತಿರುವ ಹಿನ್ನೆಲೆಯಲ್ಲಿ ದಣಿವಿನಿಂದ ರಕ್ತದೊತ್ತಡದಲ್ಲಿ ವ್ಯತ್ಯಾಸ ಉಂಟಾಗಿರಬಹುದು ಎಂದು ತಿಳಿದುಬಂದಿದೆ.

## ಟ್ರಂಪ್‌ಗೆ ಭಾರತೀಯ ಮೂಲದ ಮತದಾರರಿಂದ ಶಾಕ್

● ವಿಕ್ರಮ ವಾಹಿನಿ | ವಾಷಿಂಗ್ಟನ್

ಅಮೆರಿಕದ ಮಧ್ಯಂತರ ಚುನಾವಣೆಗೂ ಮುನ್ನ ಬಿಡುಗಡೆಯಾಗಿರುವ ಹೊಸ ಸಮೀಕ್ಷೆಯೊಂದು ಅಧ್ಯಕ್ಷ ಡೊನಾಲ್ಡ್ ಟ್ರಂಪ್ ನೇತೃತ್ವದ ರಿಪಬ್ಲಿಕನ್ ಪಕ್ಷಕ್ಕೆ ಆತಂಕ ಮೂಡಿಸುವ ಅಂಶಗಳನ್ನು ಬಹಿರಂಗಪಡಿಸಿದೆ. ಭಾರತೀಯ–ಅಮೆರಿಕನ್ ಮತದಾರರಲ್ಲಿ ಹೆಚ್ಚಿನವರು ಡೆಮಾಕ್ರಟಿಕ್ ಪಕ್ಷದ ಅಭ್ಯರ್ಥಿಗಳನ್ನು ಬೆಂಬಲಿಸುವ ಒಲವು ಹೊಂದಿದ್ದಾರೆ ಎಂದು ಸಮೀಕ್ಷೆ ತಿಳಿಸಿದೆ.



ಏಷ್ಯನ್ ಅಮೆರಿಕನ್ ಮತ್ತು ಪೆಸಿಫಿಕ್ ಐಲ್ಯಾಂಡರ್ ಮತದಾರರ ಕುರಿತಾಗಿ ನಡೆಸಲಾದ ಸಮೀಕ್ಷೆಯಲ್ಲಿ, ಭಾರತೀಯ–ಅಮೆರಿಕನ್ ಮತದಾರರಲ್ಲಿ ಕೇವಲ ಶೇ.18ರಷ್ಟು ಮಂದಿ ರಿಪಬ್ಲಿಕನ್ ಅಭ್ಯರ್ಥಿಗಳನ್ನು ಬೆಂಬಲಿಸುವುದಾಗಿ ತಿಳಿಸಿದ್ದಾರೆ. ಸೆನೆಟ್ ಚುನಾವಣೆಯಲ್ಲಿ ರಿಪಬ್ಲಿಕನ್ ಅಭ್ಯರ್ಥಿಗಳಿಗೆ ಬೆಂಬಲ ಶೇ.22ರಷ್ಟಿದೆ ಎಂದು ವರದಿ ಹೇಳಿದೆ.

APIVote ನಡೆಸಿದ ಸಮೀಕ್ಷೆಯಲ್ಲಿ ಒಟ್ಟು 2,066 ನೋಂದಾಯಿತ ಮತದಾರರನ್ನು ಒಳಪಡಿಸಲಾಗಿದ್ದು, ಅವರಲ್ಲಿ 242 ಮಂದಿ ಭಾರತೀಯ–ಅಮೆರಿಕನ್ನರು ಸೇರಿದ್ದಾರೆ. ಏಷ್ಯನ್ ಅಮೆರಿಕನ್ ಮತ್ತು ಪೆಸಿಫಿಕ್ ಐಲ್ಯಾಂಡರ್ ಮತದಾರರಲ್ಲಿ ಶೇ.90ಕ್ಕೂ ಹೆಚ್ಚು ಮಂದಿ ಈ ಬಾರಿ ಮತ ಚಲಾಯಿಸುವ ಉದ್ದೇಶ ಹೊಂದಿರುವುದಾಗಿ ತಿಳಿಸಿದ್ದಾರೆ.

**16 ಮಿಲಿಯನ್ ಮತದಾರರು**

2026ರಲ್ಲಿ ಅಮೆರಿಕದಲ್ಲಿ ಸುಮಾರು 16 ಮಿಲಿಯನ್ ಏಷ್ಯನ್ ಅಮೆರಿಕನ್ ಹಾಗೂ ಪೆಸಿಫಿಕ್ ಐಲ್ಯಾಂಡರ್ ಮತದಾರರು ಮತ ಚಲಾಯಿಸಲು ಅರ್ಹರಾಗಲಿದ್ದಾರೆ ಎಂದು ಸಮೀಕ್ಷೆ ನಡೆಸಿದ ಸಂಸ್ಥೆಯ ಅಂದಾಜು ತಿಳಿಸಿದೆ. ಈ ಸಮುದಾಯದ ಮತಗಳು ಮಧ್ಯಂತರ ಚುನಾವಣೆಯಲ್ಲಿ ನಿರ್ಣಾಯಕ ಪಾತ್ರ ವಹಿಸುವ ಸಾಧ್ಯತೆ ಇದೆ. ನವೆಂಬರ್ 3ರಂದು ನಡೆಯಲಿರುವ ಮಧ್ಯಂತರ ಚುನಾವಣೆಯಲ್ಲಿ ಪ್ರತಿನಿಧಿಗಳ ಸಭೆಯ 435 ಸ್ಥಾನಗಳು ಹಾಗೂ ಸೆನೆಟ್‌ನ 35 ಸ್ಥಾನಗಳಿಗೆ ಚುನಾವಣೆ ನಡೆಯಲಿದೆ. ಜೊತೆಗೆ ಹಲವು ರಾಜ್ಯ ಮತ್ತು ಸ್ಥಳೀಯ ಹುದ್ದೆಗಳಿಗೂ ಮತದಾನ ನಡೆಯಲಿದೆ.

ಭಾರತೀಯ ಮೂಲದ ಮತದಾರರು ಡೆಮಾಕ್ರಟಿಕ್ ಅಭ್ಯರ್ಥಿಗಳತ್ತ ತೋರಿಸುತ್ತಿರುವ ಒಲವು ಚುನಾವಣಾ ಫಲಿತಾಂಶದ ಮೇಲೆ ಯಾವ ರೀತಿಯ ಪರಿಣಾಮ ಬೀರಲಿದೆ ಎಂಬುದು ಇದೀಗ ಕುತೂಹಲ ಮೂಡಿಸಿದೆ.

# 108 ಆಂಬ್ಯುಲೆನ್ಸ್ ನಿರ್ವಹಣೆಗೆ ಖಾಸಗಿ ಸಂಸ್ಥೆಗಳಿಗೆ ಅವಕಾಶ

● ವಿಕ್ರಮ ವಾಹಿನಿ | ಬೆಂಗಳೂರು

ರಾಜ್ಯದ 108 ಆಂಬ್ಯುಲೆನ್ಸ್ ಸೇವೆಯ ನಿರ್ವಹಣೆಯನ್ನು ಖಾಸಗಿ ಸಂಸ್ಥೆಗಳಿಗೆ ವಹಿಸಲು ಸರ್ಕಾರ ನಿರ್ಧರಿಸಿದೆ ಎಂದು ಆರೋಗ್ಯ ಸಚಿವ ಯು.ಟಿ. ಖಾದರ್ ತಿಳಿಸಿದ್ದಾರೆ. ಸೇವೆಯ ನಿರ್ವಹಣೆಗೆ ಹೊಸ ನೀತಿ ರೂಪಿಸಲಾಗುತ್ತಿದ್ದು, ಅದನ್ನು ಖಾಸಗಿ ಸಂಸ್ಥೆಗಳ ಮೂಲಕ ಜಾರಿಗೊಳಿಸಲು ಮುಖ್ಯಮಂತ್ರಿ ಸೇರಿದಂತೆ ಸಚಿವ ಸಂಪುಟ ಒಪ್ಪಿಗೆ ನೀಡಿದೆ ಎಂದು ಅವರು ಹೇಳಿದ್ದಾರೆ.

108 ಆಂಬ್ಯುಲೆನ್ಸ್ ಸೇವೆಯನ್ನು ಹೆಚ್ಚು ಪರಿಣಾಮಕಾರಿಯಾಗಿ ನಿರ್ವಹಿಸುವ ಉದ್ದೇಶದಿಂದ ಹೊಸ ನೀತಿ ರೂಪಿಸಲಾಗುತ್ತಿದೆ. ಇದರ ಅನ್ವಯ ಸೇವೆಯ ನಿರ್ವಹಣೆಯ ಹೊಣೆಯನ್ನು ಖಾಸಗಿ ಸಂಸ್ಥೆಗಳಿಗೆ ವಹಿಸಲಾಗುವುದು ಎಂದು ತಿಳಿಸಿದ್ದಾರೆ.

ಹೊಸ ವ್ಯವಸ್ಥೆಯಲ್ಲಿ ಆಂಬ್ಯುಲೆನ್ಸ್‌ಗಳ ಕಾರ್ಯಾಚರಣೆ ಹಾಗೂ ಚಾಲಕರ ಕಾರ್ಯಕ್ಷಮತೆಗೆ ನಿರ್ದಿಷ್ಟ ಮಾನದಂಡಗಳನ್ನು ನಿಗದಿಪಡಿಸುವ ಸಾಧ್ಯತೆಯಿದೆ.

ವಿಶೇಷವಾಗಿ ತುರ್ತು ಕರೆ ಸ್ವೀಕರಿಸಿದ ಬಳಿಕ ನಿಗದಿತ ಸಮಯದೊಳಗೆ ರೋಗಿಯನ್ನು ಆಸ್ಪತ್ರೆಗೆ ತಲುಪಿಸುವ ಜವಾಬ್ದಾರಿ ಚಾಲಕರ ಮೇಲಿರಲಿದೆ. ನಿಗದಿತ ಸಮಯ ಮೀರಿದಲ್ಲಿ ದಂಡ ವಿಧಿಸುವ ನಿಯಮ ಜಾರಿಗೆ ಬರಲಿದೆ ಎಂದು ತಿಳಿದುಬಂದಿದೆ.




**ರಾಜ್ಯದ 108 ಆಂಬ್ಯುಲೆನ್ಸ್ ಸೇವೆಯ ನಿರ್ವಹಣೆಯನ್ನು ಖಾಸಗಿ ಸಂಸ್ಥೆಗಳಿಗೆ ವಹಿಸಲು ಸರ್ಕಾರ ಮುಂದಾಗಿದೆ. ಹೊಸ ನೀತಿಗೆ ಸಚಿವ ಸಂಪುಟ ಒಪ್ಪಿಗೆ ನೀಡಿದ್ದು, ತುರ್ತು ಕರೆ ಬಳಿಕ ನಿಗದಿತ ಸಮಯದಲ್ಲಿ ರೋಗಿಗಳನ್ನು ಆಸ್ಪತ್ರೆಗೆ ತಲುಪಿಸುವ ಜವಾಬ್ದಾರಿ ಸೇರಿದಂತೆ ಹಲವು ಮಾನದಂಡ ಜಾರಿಗೆ ಬರಲಿವೆ. ಖಾಸಗೀಕರಣ ವಿರೋಧಿಸಿ 108 ಸಿಬ್ಬಂದಿ ಪ್ರತಿಭಟನೆಗೆ ಸಿದ್ಧತೆ ನಡೆಸಿದ್ದು, ಸರ್ಕಾರದ ನಿರ್ಧಾರಕ್ಕೆ ತೀವ್ರ ವಿರೋಧ ವ್ಯಕ್ತವಾಗಿದೆ.**

ಇದರಿಂದ 108 ಸೇವೆಯ ತ್ವರಿತತೆ ಮತ್ತು ಕಾರ್ಯನಿರ್ವಹಣೆಯ ಮೇಲ್ವಿಚಾರಣೆಗೆ ಹೆಚ್ಚಿನ ಒತ್ತು ನೀಡಲು ಸರ್ಕಾರ ಮುಂದಾಗಿದೆ. ಆದರೆ, ಸೇವೆಯ ನಿರ್ವಹಣೆಯನ್ನು ಖಾಸಗಿ ಸಂಸ್ಥೆಗಳಿಗೆ ವಹಿಸುವ ನಿರ್ಧಾರಕ್ಕೆ 108 ಆಂಬ್ಯುಲೆನ್ಸ್ ಸಿಬ್ಬಂದಿಯಿಂದ ವಿರೋಧ ವ್ಯಕ್ತವಾಗಿದೆ.

ಖಾಸಗೀಕರಣದಿಂದ ತಮ್ಮ ಉದ್ಯೋಗ ಭದ್ರತೆ, ವೇತನ, ಸೇವಾ ಷರತ್ತುಗಳು ಹಾಗೂ ಭವಿಷ್ಯದ ಕುರಿತು ಆತಂಕ ಎದುರಾಗಿದೆ ಎಂದು ಸಿಬ್ಬಂದಿ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಸರ್ಕಾರದ ನಿರ್ಧಾರವನ್ನು ವಿರೋಧಿಸಿ ಪ್ರತಿಭಟನೆ ನಡೆಸಲು ಸಿಬ್ಬಂದಿ ಸಿದ್ಧತೆ ನಡೆಸಿದ್ದಾರೆ.

ಈ ಹಿಂದೆ ಆರೋಗ್ಯ ಸಚಿವರಾಗಿದ್ದ ದಿನೇಶ್ ಗುಂಡೂರಾವ್ ಅವರ ಅವಧಿಯಲ್ಲಿ 108 ಆಂಬ್ಯುಲೆನ್ಸ್ ಸೇವೆಯನ್ನು ಸರ್ಕಾರವೇ ನಿರ್ವಹಿಸುವುದಾಗಿ ಹೇಳಲಾಗಿತ್ತು. ಇದೀಗ ಸೇವೆಯ ನಿರ್ವಹಣೆಯನ್ನು ಖಾಸಗಿ ಸಂಸ್ಥೆಗಳಿಗೆ ವಹಿಸಲು ಸರ್ಕಾರ ಮುಂದಾಗಿರುವುದು ರಾಜಕೀಯ ಹಾಗೂ ಆಡಳಿತಾತ್ಮಕ ವಲಯದಲ್ಲಿ ಚರ್ಚೆಗೆ ಕಾರಣವಾಗಿದೆ.

# ಕೆಪಿಎಸ್‌ಸಿ ಹಗರಣದ ವಿರುದ್ಧ ಹೋರಾಟ ನಡೆಸಲಿ; ವಿಜಯೇಂದ್ರಗೆ ಯತ್ನಾಳ್ ಸವಾಲು

● ವಿಕ್ರಮ ವಾಹಿನಿ | ವಿಜಯಪುರ

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರನ್ನು ರಾಜ್ಯಾಧ್ಯಕ್ಷ ಸ್ಥಾನದಿಂದ ಬದಲಾಯಿಸುವುದು ಖಚಿತವಾದ ಬಳಿಕವೇ ಪಾದಯಾತ್ರೆ ನಿಗದಿಯಾಗಿದೆ ಎಂದು ವಿಜಯಪುರ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ವ್ಯಂಗ್ಯವಾಡಿದರು.

ವಿಜಯಪುರದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ವಿಧಾನಸಭೆಯಲ್ಲಿ ನಡೆದ ವಿವಿಧ ಹೋರಾಟಗಳ ಸಂದರ್ಭದಲ್ಲಿ ಬಿಜೆಪಿ ನಾಯಕರು ಸದನದ ಬಾವಿಗಿಳಿದು ಪ್ರತಿಭಟನೆ ನಡೆಸಿದ್ದರು. ಆರ್. ಅಶೋಕ್, ಸುನೀಲ್ ಕುಮಾರ್ ಸೇರಿದಂತೆ ಹಲವು ನಾಯಕರು ಹೋರಾಟದಲ್ಲಿ ಭಾಗವಹಿಸಿದ್ದರು. ಆದರೆ ವಿಜಯೇಂದ್ರ ಐದು ನಿಮಿಷವೂ ಬಾವಿಯಲ್ಲಿ ನಿಲ್ಲಲಿಲ್ಲ ಎಂದು ಟೀಕಿಸಿದರು.

ಈಗ ಪಾದಯಾತ್ರೆ ನಡೆಸುವ ಮೂಲಕ ತಮ್ಮ ಅಸ್ತಿತ್ವವನ್ನು ತೋರಿಸಿಕೊಳ್ಳಲು ಹಾಗೂ 'ಹೀರೋ' ಆಗಲು ವಿಜಯೇಂದ್ರ ಪ್ರಯತ್ನಿಸುತ್ತಿದ್ದಾರೆ ಎಂದು ಯತ್ನಾಳ್ ಆರೋಪಿಸಿದರು. ರಾಜ್ಯಾಧ್ಯಕ್ಷ ಸ್ಥಾನ ಕಳೆದುಕೊಳ್ಳುವ ಭಯದಿಂದಲೇ ಪಾದಯಾತ್ರೆ ನಡೆಸಲಾಗುತ್ತಿದೆ ಎಂದು ಅವರು ವ್ಯಂಗ್ಯವಾಡಿದರು.



ಪಾದಯಾತ್ರೆಯಿಂದ ಯಾರಿಗೆ ಲಾಭ, ಯಾರಿಗೆ ನಷ್ಟವಾಗಲಿದೆ ಎಂಬುದು ಮುಂದಿನ ದಿನಗಳಲ್ಲಿ ಗೊತ್ತಾಗಲಿದೆ. ನಿಜವಾಗಿಯೂ ಜನರ ಸಮಸ್ಯೆಗಳಿಗಾಗಿ ಹೋರಾಟ ನಡೆಸುವ ಉದ್ದೇಶವಿದ್ದರೆ, ಕೆಪಿಎಸ್‌ಸಿ ಹಗರಣದ ವಿರುದ್ಧ ಹೋರಾಟ ನಡೆಸಲಿ ಎಂದು ಯತ್ನಾಳ್ ಸವಾಲು ಹಾಕಿದರು. ವಿಜಯೇಂದ್ರ ಅವರ ಪಾದಯಾತ್ರೆಯ ಉದ್ದೇಶ ಹಾಗೂ ಬಿಜೆಪಿಯೊಳಗಿನ ಸಂಘಟನಾ ಬೆಳವಣಿಗೆಗಳ ಕುರಿತು ಯತ್ನಾಳ್ ನೀಡಿರುವ ಹೇಳಿಕೆ ಇದೀಗ ಪಕ್ಷದೊಳಗೆ ಮತ್ತಷ್ಟು ಚರ್ಚೆಗೆ ಕಾರಣವಾಗಿದೆ.

ಪಕ್ಷದ ಸಂಘಟನಾ ವಿಚಾರಗಳು ಹಾಗೂ ರಾಜ್ಯ ಸರ್ಕಾರದ ವಿರುದ್ಧದ ಹೋರಾಟವನ್ನು ಮುಂದಿಟ್ಟುಕೊಂಡು ಪಾದಯಾತ್ರೆ ನಡೆಸಲಾಗುತ್ತಿದೆ ಎಂದು ಬಿಜೆಪಿ ನಾಯಕರು ಹೇಳುತ್ತಿರುವ ಸಂದರ್ಭದಲ್ಲಿ ಯತ್ನಾಳ್ ಅವರ ಟೀಕೆ ಪಕ್ಷದೊಳಗಿನ ಭಿನ್ನಮತವನ್ನು ಮತ್ತೊಮ್ಮೆ ಬಹಿರಂಗಪಡಿಸಿದೆ.

## ದರ್ಶನ್‌ಗೆ ಹೈ ರಿಲೀಫ್

● ವಿಕ್ರಮ ವಾಹಿನಿ | ಬೆಂಗಳೂರು

ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ನಟ ದರ್ಶನ್‌ಗೆ ಹೈಕೋರ್ಟ್ ತಾತ್ಕಾಲಿಕ ರಿಲೀಫ್ ನೀಡಿದೆ. ಪ್ರಕರಣದ ಎ14 ಆರೋಪಿ ಪ್ರದೋಷ್ ಅವರನ್ನು ಮಾಫಿ ಸಾಕ್ಷಿಯನ್ನಾಗಿ ಮಾಡಲು 59ನೇ ಸೆಷನ್ಸ್ ನ್ಯಾಯಾಲಯ ನೀಡಿದ್ದ ಆದೇಶವನ್ನು ಹೈಕೋರ್ಟ್ ರದ್ದುಪಡಿಸಿದೆ.



ನ್ಯಾಯಮೂರ್ತಿ ಎಂ. ನಾಗಪ್ರಸನ್ನ ಅವರ ಪೀಠವು ದರ್ಶನ್ ಸಲ್ಲಿಸಿದ್ದ ಅರ್ಜಿಯನ್ನು ಭಾಗಶಃ ಪುರಸ್ಕರಿಸಿ ಈ ಆದೇಶ ನೀಡಿದೆ.

ಪ್ರದೋಷ್ ಅವರನ್ನು ಮಾಫಿ ಸಾಕ್ಷಿಯನ್ನಾಗಿ ಮಾಡಿರುವುದನ್ನು ಪ್ರಶ್ನಿಸಿ ದರ್ಶನ್ ಹೈಕೋರ್ಟ್ ಮೊರೆ ಹೋಗಿದ್ದರು.

ಆದರೆ ಪ್ರದೋಷ್ ಅವರ ಮಾಫಿ ಸಾಕ್ಷಿ ಹೇಳಿಕೆ ದಾಖಲಿಸುವುದಕ್ಕೆ ಹೈಕೋರ್ಟ್ ತಡೆ ನೀಡಿಲ್ಲ. ಬದಲಿಗೆ ವಿಚಾರಣಾ ನ್ಯಾಯಾಲಯವು ಪ್ರಕರಣವನ್ನು ಮತ್ತೊಮ್ಮೆ ಪರಿಶೀಲಿಸಿ ಹೊಸದಾಗಿ ಆದೇಶ ಹೊರಡಿಸುವಂತೆ ಸೂಚಿಸಿದೆ.

ಈ ಪ್ರಕ್ರಿಯೆಗೆ ಪ್ರತ್ಯೇಕವಾಗಿ ವಿಚಾರಣೆ ನಡೆಸುವ ಅಗತ್ಯವಿಲ್ಲ ಎಂದು ಸ್ಪಷ್ಟಪಡಿಸಿರುವ ನ್ಯಾಯಾಲಯ, ಒಂದು ವಾರದೊಳಗೆ ಮರು ಆದೇಶ ನೀಡುವಂತೆ ಸೂಚಿಸಿದೆ.

### ಸವಿ ವಾಹಿನಿ

ಪ್ರಯತ್ನ ಮಾಡಿ ಸೋಲು ಪರವಾಗಿಲ್ಲ ಪ್ರಯತ್ನ ಮಾಡದೆ ಸೋಲ್ದರೆ ಆ ವಿಧಿಯೂ ಸಹ ಸಹಕರಿಸುವುದಿಲ್ಲ.

### ದಿನ ಪಂಚಾಂಗ

ಸೆಪ್ಟಂಬರ್, 09-2026, ಬುಧವಾರ ವರ್ಷ ಋತು, ಶ್ರಾವಣ ಮಾಸ, ಬಹುಳ ಪಕ್ಷ.
ತ್ರಯೋದಶಿ ತಿಥಿ ಬೆ-11:56
ಆಶ್ಲೇಷ ನಕ್ಷತ್ರ ಮ-03:48
ರಾಹುಕಾಲ ಮ-12:16-01:48
ಮಾಸ ಶಿವರಾತ್ರಿ, ಅನಧ್ಯಯನ ಚತುಷ್ಟಯ, ವರವಿ, ಇಳಕಲ್ಲು ರಥ, ಮೈಸೂರು ಲಕ್ಷ್ಮಿನಾರಾಯಣ ಉತ್ಸವ, ಹುಬ್ಬಳ್ಳಿ ರಥ, ಕುರಡಗಿ ವರ ವೀರಭದ್ರೇಶ್ವರ ಜಾತ್ರೆ, ಹರ್ತಿ ಬಸವೇಶ್ವರ ರಥ, ಬಳ್ಳಾರಿ । ಎತ್ತಿನಬೂದಿಹಾಳ ಕಟ್ಟೇಬಸವೇಶ್ವರ ಗಂಗೆ ತರುವುದು, ಅಬ್ಬಿಗೇರಿ ಕಂಠಿಬಸವೇಶ್ವರ ಜಾತ್ರೆ

# ಅಲ್ಪಸಂಖ್ಯಾತರ ಸಮಸ್ಯೆಗಳಿಗೆ ಸ್ಪಂದಿಸಿ: ಸಿಎಂ ಸೂಚನೆ

● ವಿಕ್ರಮ ವಾಹಿನಿ । ಬೆಂಗಳೂರು

"ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳು ತಮ್ಮ ವ್ಯಾಪ್ತಿಯಲ್ಲಿ ಅಲ್ಪಸಂಖ್ಯಾತ ಸಮುದಾಯಗಳ ಸಮಸ್ಯೆಗಳನ್ನು ಆಲಿಸಿ ಸ್ಪಂದಿಸಬೇಕು" ಎಂದು ಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು.

ವಿಧಾನಸೌಧದಲ್ಲಿ ಮಂಗಳವಾರ ನಡೆದ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಪ್ರಗತಿ ಪರಿಶೀಲನೆ ನಡೆಸಿ ಮಾತನಾಡಿದರು.

"ಅಲ್ಪಸಂಖ್ಯಾತರ ಶಿಕ್ಷಣಕ್ಕೆ ಹೆಚ್ಚು ಒತ್ತು ನೀಡಬೇಕೆಂದು ಸೂಚಿಸಿದರು. ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ರೇಷ್ಮೆ ಕೃಷಿ ಯೋಜನೆಯಡಿ ನೀಡಲಾಗುತ್ತಿರುವ ಸಹಾಯಧನ, ಸಾಲ ಸೌಲಭ್ಯದ ಕುರಿತಂತೆ ಚರ್ಚಿಸಿದ ಮುಖ್ಯಮಂತ್ರಿಗಳು, ರೇಷ್ಮೆ ಕೃಷಿಕರೊಂದಿಗೆ ಸಮಾಲೋಚಿಸಿ ಯೋಜನೆ ಪುನಃ ರೂಪಿಸುವಂತೆ" ಸೂಚಿಸಿದರು.

"ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ಬರುವ ಎಲ್ಲ ನಿಗಮ ಮಂಡಳಿಗಳ ಅಧ್ಯಕ್ಷರು ರಾಜ್ಯಾದ್ಯಂತ ಪ್ರವಾಸ ಮಾಡಿ, ಸಮುದಾಯಗಳ ಸಮಸ್ಯೆಗಳನ್ನು ಆಲಿಸಬೇಕು. ಆಯವ್ಯಯದಲ್ಲಿ ಘೋಷಿಸಲಾದ ಮೌಲಾನಾ ಆಜಾದ್ ಶಾಲೆಗಳನ್ನು ಕೆಪಿಎಸ್ ಮಾದರಿಯಲ್ಲಿ ಉನ್ನತೀಕರಣ, ಮಹಿಳಾ ಕಾಲೇಜು ಪ್ರಾರಂಭ ಮತ್ತಿತರ ಯೋಜನೆಗಳನ್ನು ತ್ವರಿತವಾಗಿ ಪ್ರಾರಂಭಿಸಲು" ಸೂಚಿಸಿದರು.



ಸಿಎಂ ಡಿ.ಕೆ. ಶಿವಕುಮಾರ್ ಅವರ ಅಧ್ಯಕ್ಷತೆಯಲ್ಲಿ ಮಂಗಳವಾರ ವಿಧಾನಸೌಧದ ಸಮಿತಿ ಕೊಠಡಿಯಲ್ಲಿ 'ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಪರಿಶೀಲನಾ ಸಭೆ' ನಡೆಯಿತು. ಆರೋಗ್ಯ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವ ಯು.ಟಿ.ಖಾದರ್, ಬಿಡಿಎ ಅಧ್ಯಕ್ಷ ಹಾಗೂ ಶಾಸಕ ಎನ್.ಎ. ಹ್ಯಾರಿಸ್, ಕೆಎಂಡಿಸಿ ಅಧ್ಯಕ್ಷ ಬಿ.ಕೆ. ಅಲ್ತಾಫ್ ಖಾನ್, ಶಾಸಕರುಗಳಾದ ರಹೀಂ ಖಾನ್, ಆಸೀಫ್ (ರಾಜು) ಸೇಠ್, ಯಾಸಿರ್ ಅಹ್ಮದ್ ಖಾನ್ ಪಠಾಣ್, ಸರ್ಕಾರದ ಕಾರ್ಯದರ್ಶಿ ಮನೋಜ್ ಜೈನ್ ಹಾಗೂ ಮತ್ತಿತರ ಅಧಿಕಾರಿಗಳು ಉಪಸ್ಥಿತರಿದ್ದರು.

**ಶಿಕ್ಷಣ, ಹಾಸ್ಟೆಲ್ ವ್ಯವಸ್ಥೆ ಪರಿಶೀಲನೆಗೆ ಸಮಿತಿ**

"ರಾಜ್ಯಸಭಾ ಸದಸ್ಯ ಮನ್ಸೂರ್ ಖಾನ್ ಅಧ್ಯಕ್ಷತೆಯಲ್ಲಿ ಅಲ್ಪಸಂಖ್ಯಾತರ ಶಿಕ್ಷಣ ಕುರಿತಂತೆ ಸಮಿತಿ ರಚಿಸಲಾಗಿದೆ. ಅಂತೆಯೇ ಹಾಸ್ಟೆಲ್ ಗಳಲ್ಲಿ ನೀಡುವ ಭೋಜನ ವ್ಯವಸ್ಥೆಯನ್ನು ಸುಧಾರಿಸುವ ನಿಟ್ಟಿನಲ್ಲಿ ಉತ್ತರ ಕರ್ನಾಟಕ ಭಾಗದಲ್ಲಿ ಶಾಸಕ ಯಾಸಿರ್ ಪಠಾಣ್ ಅಧ್ಯಕ್ಷತೆಯ ಸಮಿತಿ ಹಾಗೂ ದಕ್ಷಿಣ ಭಾಗದಲ್ಲಿ ಶಾಸಕಿ ಬಿಲ್ಕಿಸ್ ಬಾನು ಅಧ್ಯಕ್ಷತೆಯ ಸಮಿತಿ ಪ್ರವಾಸ ಮಾಡಿ ವರದಿ ಸಲ್ಲಿಸಿದೆ. ಇದರ ಆಧಾರದಲ್ಲಿ ಕ್ರಮ ವಹಿಸಲಾಗುವುದು.

ಈ ಸಂದರ್ಭದಲ್ಲಿ ಆಯ್ದ ಹಾಸ್ಟೆಲ್ ಗಳಲ್ಲಿ ವಿದ್ಯಾರ್ಥಿಗಳೇ ನಡೆಸುವ ಮೆಸ್ ಅನ್ನು ಪ್ರಾಯೋಗಿಕವಾಗಿ ಅನುಷ್ಠಾನಗೊಳಿಸಲು ತೀರ್ಮಾನಿಸಲಾಗಿದೆ ಇಲಾಖೆಯು ರೂಪಿಸಿರುವ ಉತ್ತಮ ಯೋಜನೆಗಳನ್ನು ಕಾಲಮಿತಿಯಲ್ಲಿ ಅನುಷ್ಠಾನಗೊಳಿಸುವಂತೆ ಸೂಚಿಸಿದರು.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ, ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಸಚಿವ ಯು.ಟಿ. ಖಾದರ್, ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕ ವ್ಯವಹಾರಗಳ ಸಚಿವ ರಿಜ್ವಾನ್ ಅರ್ಷದ್, ಬಿಡಿಎ ಅಧ್ಯಕ್ಷ ಎನ್ ಎ ಹ್ಯಾರಿಸ್, ಮಾಜಿ ಸಚಿವ ರಹೀಂ ಖಾನ್, ವಕ್ಫ್ ಮಂಡಳಿ ಅಧ್ಯಕ್ಷ ಅಲಿ ಬಾಬಾ ಹುಸೇನಿ, ಅಲ್ಪಸಂಖ್ಯಾತರ ಆಯೋಗ ಅಧ್ಯಕ್ಷ ಯು. ನಿಸಾರ್ ಅಹ್ಮದ್, ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ಅಧ್ಯಕ್ಷ ಅಲ್ತಾಫ್ ಖಾನ್, ಕ್ರಿಶ್ಚಿಯನ್ ಅಭಿವೃದ್ಧಿ ನಿಗಮದ ಅಧ್ಯಕ್ಷ ಪ್ರೊ. ಜಾಫೆಟ್, ಹಜ್ ಸಮಿತಿ ಅಧ್ಯಕ್ಷ ಟಿಪ್ಪು, ಮುಖ್ಯಮಂತ್ರಿಯವರ ಆರ್ಥಿಕ ಸಲಹೆಗಾರ ಎಲ್.ಕೆ. ಅತೀಕ್, ಆರ್ಥಿಕ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿ ರಿತೇಶ್ ಕುಮಾರ್ ಸಿಂಗ್, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಕಾರ್ಯದರ್ಶಿ ಮನೋಜ್ ಜೈನ್ ಸಭೆಯಲ್ಲಿ ಭಾಗವಹಿಸಿದ್ದರು.

### ಆಧ್ಯಾತ್ಮ

## ಗಂಗೆಯನ್ನು ಅಶುದ್ಧಗೊಳಿಸಿದ್ದು ಔರಂಗಜೇಬನ ಕೃತ್ಯಕ್ಕಿಂತಲೂ ಹೀನ



● ವಿಕ್ರಮ ವಾಹಿನಿ । ಗೋಕರ್ಣ

ಗಂಗೆಯನ್ನು ಸೇವಿಸಿದರೆ ನರಕದ ವೈತರಣಿ ನದಿಯಿಂದ ತಪ್ಪಿಸಿಕೊಳ್ಳಬಹುದು ಎಂಬ ಮಾತಿದ್ದು, ನಾವಿಂದು ನಾಗರೀಕತೆಯ ಹೆಸರಿನಲ್ಲಿ ಗಂಗಾ ನದಿಯನ್ನೇ ವೈತರಣಿ ನದಿಯಾಗಿ ಪರಿವರ್ತಿಸಿದ್ದೇವೆ. ಗಂಗೆಯನ್ನು ಅಶುದ್ಧಗೊಳಿಸಿರುವುದು ಔರಂಗಜೇಬನ ಹೇಯ ಕೃತ್ಯಗಳಿಗಿಂತಲೂ ಹೀನ ಕೃತ್ಯ ಎಂದು ಶ್ರೀರಾಮಚಂದ್ರಾಪುರ ಮಠದ ಜಗದ್ಗುರು ಶಂಕರಾಚಾರ್ಯ ಶ್ರೀಶ್ರೀ ರಾಘವೇಶ್ವರ ಭಾರತೀ ಮಹಾಸ್ವಾಮಿಗಳು ಹೇಳಿದರು.

ಗೋಕರ್ಣದ ಅಶೋಕೆಯ ಮೂಲಮಠದ ಪರಿಸರದಲ್ಲಿ ನಡೆಯುತ್ತಿರುವ 'ಅನ್ನಬ್ರಹ್ಮ ಚಾತುರ್ಮಾಸ್ಯ'ದ ಧರ್ಮಸಭೆಯಲ್ಲಿ 08.09.2026 ರಂದು 'ಅನ್ನಂ ಬ್ರಹ್ಮ' ಮಾಲಿಕೆಯಲ್ಲಿ ನದಿ ನೀರಿನ ಕುರಿತಾಗಿ ಪ್ರವಚನ ಅನುಗ್ರಹಿಸಿದ ಶ್ರೀಗಳು, ಹರಿದ್ವಾರದ ನಂತರ ಗಂಗಾ ನದಿಯ ಸ್ವರೂಪವೇ ಬದಲಾಗಿದ್ದು, ಮನುಷ್ಯನ ಮಲಮೂತ್ರಗಳ ಕಾಲುವೆಗಳನ್ನು ನದಿಗೆ ಸೇರಿಸಿ ಗಂಗೆಯನ್ನು ಅಶುದ್ಧ ಗೊಳಿಸಲಾಗಿದೆ. ಇದು ದೇಶಕ್ಕೆ, ಸೃಷ್ಟಿಗೆ ಹಾಗೂ ಮುಂದಿನ ಪೀಳಿಗೆಗೆ ಮಾಡಿದ ಅಪಚಾರ. ಚರಿತ್ರೆಯಲ್ಲಿ ಮುಂದಿನ ಪೀಳಿಗೆ ಈ ತಪ್ಪನ್ನು ಕ್ಷಮಿಸುವುದಿಲ್ಲ. ಇದು ಗಂಗೆಯ ಮೂಲಕ ಸೃಷ್ಟಿಯ ಚಕ್ರಕ್ಕಾಗುತ್ತಿರುವ ಅನ್ಯಾಯ ಎಂದು ಖೇದ ವ್ಯಕ್ತಪಡಿಸಿದರು.

ಗಂಗೆಯ ನೀರು ದೇಹವನ್ನು ಒಮ್ಮೆ ಪ್ರವೇಶಿಸಿದರೆ ಅದು ಒಂದು ವರ್ಷಗಳ ಕಾಲ ದೇಹದಲ್ಲಿ ಇರುತ್ತದೆ ಎಂಬ ಮಾತಿದೆ. ಗಂಗೆಗೆ ತ್ರಿದೋಷಗಳ ಏರುಪೇರುಗಳನ್ನು ನಿವಾರಿಸುವ ಶಕ್ತಿಯಿದ್ದು, ಮಂದಾಗ್ನಿಯನ್ನು ಪರಿಹರಿಸಿ, ಅಗ್ನಿ ಪ್ರಜ್ವಾಲನೆಯನ್ನು ಮಾಡುತ್ತದೆ ಎಂದು ಆಯುರ್ವೇದ ಆಚಾರ್ಯರು ಪ್ರತಿಪಾದಿಸಿದ್ದಾರೆ.

ಹಿಂದೆ ರಾಜ ಮಹಾರಾಜರು ದೊಡ್ಡ ದೊಡ್ಡ ಬೆಳ್ಳಿಯ ಪಾತ್ರೆಗಳಲ್ಲಿ ಗಂಗೆಯನ್ನು ಸಂಗ್ರಹಿಸಿ ಇಟ್ಟುಕೊಳ್ಳುತ್ತಿದ್ದರು. ಸರಿಯಾಗಿ ಸಂಗ್ರಹಿಸಿಟ್ಟಾಗ ಗಂಗಾ ಜಲ ನೂರು ವರ್ಷವಾದರೂ ಏನೂ ಆಗದು. ನಮ್ಮ ಸಂಸ್ಕೃತಿಯಲ್ಲಿ ಗಂಗಾ ನದಿಗೆ ವಿಶೇಷ ಸ್ಥಾನವಿದೆ ಎಂದು ಗಂಗೆಯ ಮಹತ್ವವನ್ನು ವಿವರಿಸಿದರು.

ಗಂಗೆಯ ಕುರಿತಾಗಿ ಅನೇಕ ಆಧುನಿಕ ಸಂಶೋಧನೆಗಳು ನಡೆದಿದ್ದು, ಗಂಗೆಯಲ್ಲಿ ವಿಶೇಷ ಸೂಕ್ಷ್ಮಾಣುಗಳಿವೆ, ಗಂಗಾ ನದಿಯ ನೀರಿಗೆ ಹಾನಿಕಾರಕ ಸೂಕ್ಷ್ಮಾಣುಗಳನ್ನು ನಾಶಪಡಿಸುವ ಶಕ್ತಿಯಿದೆ ಎಂದು ಸಂಶೋಧನೆಗಳು ದೃಢಪಡಿಸಿವೆ.

ಗಂಗೆ ಸ್ವಯಂ ಶುದ್ಧೀಕರಣ ಗುಣವಿದ್ದು, ತನ್ನನ್ನು ತಾನು ಶುದ್ಧೀಕರಿಸಿಕೊಳ್ಳುತ್ತದೆ. ಗಂಗಾ ಜಲವು ದೇಹವನ್ನು ಪ್ರವೇಶಿಸಿದಾಗ ದೇಹದಲ್ಲಿರುವ ಹಾನಿಕಾರಕ ಸೂಕ್ಷ್ಮಾಣುಗಳನ್ನು ನಾಶಪಡಿಸಿ, ಕರುಳಿನಲ್ಲಿರುವ ಒಳ್ಳೆಯ ಸೂಕ್ಷ್ಮಾಣುಗಳನ್ನು ರಕ್ಷಿಸುತ್ತದೆ ಎಂದು ಆಧುನಿಕ ಸಂಶೋಧನೆಗಳು ದೃಢೀಕರಿಸಿದ್ದು, ಆಯುರ್ವೇದದ ಮಾತುಗಳನ್ನು ಇವು ಸಮರ್ಥಿಸುತ್ತದೆ ಎಂದು ಪ್ರತಿಪಾದಿಸಿದರು.

ಶ್ರೀಕಂಠ ಶರ್ಮಾ ಮಡೋಡಿ ಕುಟುಂಬದವರು ಗುರುಭಿಕ್ಷಾ ಸೇವೆ ಸಮರ್ಪಿಸಿದರು. ದಿನಪ್ರಧಾನರಾಗಿ ನಿಡುವಾಜೆ ರಾಮ ಭಟ್ ಉಪಸ್ಥಿತರಿದ್ದರು.



ಬಿಜೆಪಿ ರಾಷ್ಟ್ರೀಯ ಸಂಘಟನಾ ಪ್ರಧಾನ ಕಾರ್ಯದರ್ಶಿ ಬಿ.ಎಲ್. ಸಂತೋಷ್ ಜಿ ಅವರು ಕಟಕ್‌ನಲ್ಲಿರುವ ನೇತಾಜಿ ಸುಭಾಷ್ ಚಂದ್ರ ಬೋಸ್ ಅವರ ಜನ್ಮಸ್ಥಳಕ್ಕೆ ಮಂಗಳವಾರ ಭೇಟಿ ನೀಡಿ ಗೌರವ ನಮನ ಸಲ್ಲಿಸಿದರು. ಬಳಿಕ ಅಲ್ಲಿನ ವಸ್ತುಸಂಗ್ರಹಾಲಯವನ್ನು ವೀಕ್ಷಿಸಿದರು. ಈ ಭೇಟಿ ಸ್ಮರಣೀಯ ಅನುಭವ ನೀಡಿತು ಎಂದು ಅವರು ತಿಳಿಸಿದ್ದಾರೆ.

## ಸಂಚಾರ ದಟ್ಟಣೆ, ಸುರಕ್ಷತೆ ಆಧರಿಸಿ ನಿರ್ಧಾರ: ಪ್ರಿಯಾಂಕ್ ಖರ್ಗೆ

● ವಿಕ್ರಮ ವಾಹಿನಿ । ಬೆಂಗಳೂರು

ನಗರದಲ್ಲಿ ರಸ್ತೆ ಸುರಕ್ಷತೆ ಹೆಚ್ಚಿಸಿ ಸಂಚಾರ ಸುಗಮಗೊಳಿಸುವ ಉದ್ದೇಶದಿಂದ ಪ್ರಮುಖ ಐದು ಫ್ಲೈಓವರ್ ಹಾಗೂ ಎಲಿವೇಟೆಡ್ ಕಾರಿಡಾರ್‌ಗಳಲ್ಲಿ ವಿವಿಧ ವಾಹನಗಳ ಸಂಚಾರಕ್ಕೆ ವಿಧಿಸಿರುವ ನಿರ್ಬಂಧಗಳನ್ನು ಹಂತ ಹಂತವಾಗಿ ಜಾರಿಗೊಳಿಸಲಾಗುವುದು ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಬಿಐಎಸ್, ಪೀಣ್ಯ ಹಾಗೂ ಡಬಲ್ ಡೆಕ್ಕರ್ ಫ್ಲೈಓವರ್‌ಗಳಲ್ಲಿ ನಿರ್ಬಂಧ ಜಾರಿಯಾದ ಬಳಿಕ ಸಂಚಾರ ಸುಗಮವಾಗಿ ನಡೆಯುತ್ತಿರುವುದು ಸಂಚಾರ ಪೊಲೀಸರ ಪರಿಶೀಲನೆಯಲ್ಲಿ ಕಂಡುಬಂದಿದೆ. ಆದರೆ ವಿಮಾನ ನಿಲ್ದಾಣ ರಸ್ತೆಯ ಸಂಜೀವನಗರ ಕ್ರಾಸ್‌ನಿಂದ ವಿದ್ಯಾಶಿಲ್ಪ ಜಂಕ್ಷನ್‌ವರೆಗಿನ ಎಲಿವೇಟೆಡ್ ಕಾರಿಡಾರ್‌ನಲ್ಲಿ ಸರಕು ವಾಹನ, ದ್ವಿಚಕ್ರ ವಾಹನ ಹಾಗೂ ಆಟೋರಿಕ್ಷಾಗಳನ್ನು ಕೆಳರಸ್ತೆಗೆ ತಿರುಗಿಸುವುದರಿಂದ ದಟ್ಟಣೆ ಉಂಟಾಗುತ್ತಿರುವುದು ಗಮನಕ್ಕೆ ಬಂದಿದೆ.

ಈ ಹಿನ್ನೆಲೆಯಲ್ಲಿ ಮೊದಲ ಹಂತದಲ್ಲಿ ಅಧಿಸೂಚಿತ ಸಮಯದಲ್ಲಿ ಸರಕು ಸಾಗಣೆ ವಾಹನಗಳ ಮೇಲಿನ ನಿರ್ಬಂಧ ಮುಂದುವರಿಯಲಿದೆ. ಸದ್ಯಕ್ಕೆ ದ್ವಿಚಕ್ರ ವಾಹನ ಮತ್ತು ಆಟೋರಿಕ್ಷಾಗಳಿಗೆ ಕಾರಿಡಾರ್‌ನಲ್ಲಿ ಸಂಚರಿಸಲು ಅವಕಾಶ ನೀಡಲಾಗುವುದು. ದ್ವಿಚಕ್ರ ವಾಹನ ಸವಾರರು ಎಡ ಲೇನ್‌ನಲ್ಲಿ ಸಂಚರಿಸಿ, ಲೇನ್ ಶಿಸ್ತು ಪಾಲಿಸುವಂತೆ ಹಾಗೂ ಗಂಟೆಗೆ 60 ಕಿ.ಮೀ. ವೇಗ ಮೀರದಂತೆ ಪೊಲೀಸರು ಸೂಚಿಸಿದ್ದಾರೆ.

ಸೆ.11ರಿಂದ ಎಲೆಕ್ಟ್ರಾನಿಕ್ ಸಿಟಿ ಎಲಿವೇಟೆಡ್ ಕಾರಿಡಾರ್‌ನಲ್ಲೂ ಇದೇ ಮಾದರಿಯಲ್ಲಿ ಮೊದಲ ಹಂತದ ನಿರ್ಬಂಧ ಜಾರಿಯಾಗಲಿದ್ದು, ಸರಕು ವಾಹನಗಳ ಸಂಚಾರ ನಿರ್ಬಂಧಿಸಲಾಗುತ್ತದೆ. ದ್ವಿಚಕ್ರ ವಾಹನಗಳಿಗೆ ಸದ್ಯ ಅವಕಾಶ ಮುಂದುವರಿಯಲಿದೆ.

ನಿರ್ಬಂಧಗಳ ಪರಿಣಾಮವನ್ನು ನಿರಂತರವಾಗಿ ಪರಿಶೀಲಿಸಿ, ಸಂಚಾರ ಹರಿವು, ರಸ್ತೆ ಸುರಕ್ಷತೆ ಹಾಗೂ ಕೆಳಮಟ್ಟದ ರಸ್ತೆಗಳ ಮೇಲಿನ ಪರಿಣಾಮವನ್ನು ಆಧರಿಸಿ ಉಳಿದ ನಿರ್ಬಂಧಗಳನ್ನು ಹಂತ ಹಂತವಾಗಿ ಜಾರಿಗೊಳಿಸಲಾಗುವುದು. ಸಾರ್ವಜನಿಕರಿಗೆ ಕನಿಷ್ಠ ಅನಾನುಕೂಲವಾಗುವ ರೀತಿಯಲ್ಲಿ ಸಂಚಾರ ವ್ಯವಸ್ಥೆಯಲ್ಲಿ ಬದಲಾವಣೆ ಮಾಡಲಾಗುವುದು ಎಂದು ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

## ಸ್ಯಾಂಕಿ ಕೆರೆಗೆ ಲೋಕಾಯುಕ್ತ ತಂಡ ಭೇಟಿ: ಮಾಲಿನ್ಯ ಕುರಿತು ಸಮಗ್ರ ವರದಿ ಸಲ್ಲಿಸಲು ತೀರ್ಮಾನ

● ವಿಕ್ರಮ ವಾಹಿನಿ । ಬೆಂಗಳೂರು

"ಸೇವ್ ಸ್ಯಾಂಕಿ ಟ್ಯಾಂಕ್ ಇನಿಶಿಯೇಟಿವ್" ಕಾರ್ಯಕ್ರಮದಡಿ ವಾಯ್ಸ್ ಆಫ್ ಸದಾಶಿವನಗರ ಸಂಘಟನೆಯಿಂದ ಸ್ಯಾಂಕಿಕೆರೆ ಉಳಿಸಿ ಅಭಿಯಾನ ಕೈಗೊಂಡು ಕೆರೆ ಮಾಲೀನ್ಯ ನಿಯಂತ್ರಣಕ್ಕಾಗಿ ನಿರಂತರ ಹೋರಾಟ ಮಾಡಿದ ಹಿನ್ನೆಲೆಯಲ್ಲಿ ಸ್ವಯಂ ಪ್ರೇರಿತವಾಗಿ ದೂರು ದಾಖಲಿಸಿಕೊಂಡಿದ್ದ ಲೋಕಾಯುಕ್ತ ಅಧಿಕಾರಿಗಳ ತಂಡ ಇಂದು ಕೆರೆ ಆವರಣಕ್ಕೆ ಭೇಟಿ ನೀಡಿ ಪರಿಶೀಲಿಸಿತು.

ಲೋಕಾಯುಕ್ತ ಎಸ್.ಪಿ, ಮಹಾಂತೇಶ್ವರ ಎಸ್ ಜಿದ್ದಿ, ಮುಖ್ಯ ಅಭಿಂತರರಾದ ಬಿ.ವಿ. ರಮೇಶ್ ನೇತೃತ್ವದ ಮಾಲೀನ್ಯಕ್ಕೆ ಕಾರಣಗಳು, ಅಧಿಕಾರಿಗಳ ನಿರ್ಲಕ್ಷ್ಯ, ಕೆರೆ ಅಭಿವೃದ್ಧಿ ಪ್ರಾಧಿಕಾರದ ಪಾತ್ರ ಮತ್ತಿತರೆ ವಿಷಯಗಳನ್ನು ಲೋಕಾಯುಕ್ತ ಅಧಿಕಾರಿಗಳು ಕಲೆ ಹಾಕಿದರು.

ಬಳಿಕ ಮಾತನಾಡಿದ ಮುಖ್ಯ ಅಭಿಯಂತರರಾದ ಬಿ.ವಿ. ರಮೇಶ್, ಕೆರೆ ಮಾಲೀನ್ಯ ಸಮಸ್ಯೆ ಕುರಿತು ಖುದ್ದಾಗಿ ಪರಿಶೀಲಿಸಲಾಗಿದೆ. ಈ ಬಗ್ಗೆ ಸಮಗ್ರ ವರದಿ ಸಲ್ಲಿಸಲಾಗುವುದು ಎಂದು ಹೇಳಿದರು.

ವಾಯ್ಸ್ ಆಫ್ ಸದಾಶಿವನಗರ ಸಂಘದ ಸದಸ್ಯರಾದ ಶಿಲ್ಪಾ ಜತ್ತಿ ಮಾತನಾಡಿ, ಕೆರೆ ಒಳಚರಂಡಿ ನೀರು ಹರಿಯುವುದನ್ನು ತಡೆಗಟ್ಟಲು ಬೆಂಗಳೂರು ಜಲಮಂಡಳಿ ಸೂಕ್ತ ರೀತಿಯಲ್ಲಿ ಪ್ರಯತ್ನ ಕೈಗೊಂಡಿದ್ದು, ಇದು ಮತ್ತೆ ಪುನರಾರ್ತನೆಯಾಗಬಾರದು. ಕೆರೆ ಸಂಪೂರ್ಣವಾಗಿ ಕಾಂಕ್ರೀಟೀಕರಣಗೊಳಿಸಿದ್ದು, ಇಲ್ಲಿ ನೀರು ಇಂಗಲು ಸಾಧ್ಯವಾಗದ ಪರಿಸ್ಥಿತಿ ಇದೆ. ಕೆರೆ ಅಭಿವೃದ್ಧಿ ಕುರಿತ ತಜ್ಞರ ತಂಡದ ಅಭಿಪ್ರಾಯ ಪಡೆದು ಸೂಕ್ತ ಕ್ರಮಗಳನ್ನು ಕೈಗೊಳ್ಳಬೇಕು.

ಕೆರೆ ಪುನಶ್ಚೇತನಕ್ಕೆ ನೂರಾರು ಕೋಟಿ ರೂ ವೆಚ್ಚ ಮಾಡಿದ್ದು, ಕಾಂಕ್ರಿಟೀಕರಣ ಬಿಟ್ಟರೆ ಬೇರೆ ಅಭಿವೃದ್ಧಿಯಾಗಿಲ್ಲ. ಈ ಕಾಮಗಾರಿಯನ್ನು ಯಾರಿಗೆ ವಹಿಸಿದ್ದರೂ ಸಹ ಕಾಮಗಾರಿ ಹಣ ಪಾವತಿ ಮಾಡಬಾರದು. ತನಿಖೆ ನಂತರವೇ ಮುಂದಿನ ಕ್ರಮ ಕೈಗೊಳ್ಳಬೇಕು ಎಂದರು.

ಕಾಡು ಮಲ್ಲೇಶ್ವರ ಗೆಳೆಯರ ಬಳಗದ ಅಧ್ಯಕ್ಷ ಬಿ.ಕೆ. ಶಿವರಾಂ ಮಾತನಾಡಿ, ಸ್ಯಾಂಕಿ ಕೆರೆ ಮಲ್ಲೇಶ್ವರಂ, ಯಶವಂತಪುರ, ಹೆಬ್ಬಾಳ ಭಾಗದ ಪ್ರಮುಖ ಜಲ ಮೂಲವಾಗಿದ್ದು, ಕೆರೆ ಉಳಿಸಿದರೆ ಜಲ ಮೂಲ ಉಳಿಸಲು ಸಾಧ್ಯ. ಅವೈಜ್ಞಾನಿಕ ಕಾಮಗಾರಿಯಿಂದ ಮಳೆ ನೀರು ಕೆರೆ ಸೇರುತ್ತಿಲ್ಲ. ಎಲ್ಲಾ ಕಾಲುವೆಗಳು ಮುಚ್ಚಿದ್ದು, ಹೂಳು ತೆಗೆದಿಲ್ಲ. ಹೀಗಾಗಿ ಕೆರೆ ನೀರು ನಿಂತಲ್ಲೇ ಕೊಳೆಯುತ್ತಿದ್ದು, ಈ ಬಗ್ಗೆ ಕೆರೆ ಪ್ರಾಧಿಕಾರದವರು ಸೂಕ್ತ ಕ್ರಮ ತೆಗೆದುಕೊಳ್ಳಬೇಕು ಎಂದು ಒತ್ತಾಯಿಸಿದರು.

ಅಭಿಯಾನದ ಸ್ವಯಂ ಸೇವಕ ಡಾ. ಮನು ಮತ್ತಿತರರು ಪಾಲ್ಗೊಂಡಿದ್ದರು.

## ಖರ್ಗೆ ಟ್ರಸ್ಟ್ ಜಮೀನು: ಹೈಕೋರ್ಟ್ ರಿಲೀಫ್

1ನೇ ಪುಟದಿಂದ

ಪ್ರಮಾಣಪತ್ರವು ಸುಪ್ರೀಂ ಕೋರ್ಟ್ ಮಾರ್ಗಸೂಚಿಗಳಿಗೆ ಅನುಗುಣವಾಗಿಲ್ಲ ಎಂಬ ಕಾರಣ ನೀಡಿ ಜನಪ್ರತಿನಿಧಿಗಳ ಸೆಷನ್ಸ್ ನ್ಯಾಯಾಲಯ ಪ್ರಕರಣದ ವಿಚಾರಣೆಗೆ ಮುಂದಾಗಿತ್ತು.

ಇದನ್ನು ಪ್ರಶ್ನಿಸಿ ದೂರುದಾರ ವಿಜಯರಾಘವ ಮರಾಠೆ ಸಲ್ಲಿಸಿದ್ದ ಕ್ರಿಮಿನಲ್ ಅರ್ಜಿಯ ತೀರ್ಪನ್ನು ನ್ಯಾಯಪೀಠ ಪ್ರಕಟಿಸಿದೆ.

ದೂರು ಮೇಲ್ನೋಟಕ್ಕೆ ತನಿಖೆಗೆ ಯೋಗ್ಯವಾಗಿದೆ ಎಂಬುದನ್ನು ಸೆಷನ್ಸ್ ನ್ಯಾಯಾಲಯ ಒಪ್ಪಿಕೊಂಡಿದ್ದರೂ, ಪ್ರಮಾಣಪತ್ರದಲ್ಲಿನ ದೋಷವನ್ನು ಮುಂದಿಟ್ಟುಕೊಂಡು ವಿಚಾರಣೆಗೆ ಮುಂದಾಗಿರುವುದು ಕಾನೂನಾತ್ಮಕವಾಗಿ ಸರಿಯಲ್ಲ ಎಂದು ಅರ್ಜಿದಾರರ ಪರ ಹಿರಿಯ ವಕೀಲೆ ಲಕ್ಷ್ಮಿ ಐಯ್ಯಂಗಾರ್ ವಾದಿಸಿದ್ದರು.

ಈ ಹಿನ್ನೆಲೆಯಲ್ಲಿ ಪ್ರಕರಣವನ್ನು ಜನಪ್ರತಿನಿಧಿಗಳ ಸೆಷನ್ಸ್ ನ್ಯಾಯಾಲಯಕ್ಕೆ ಹಿಂದಿರುಗಿಸಿ, ದೂರು ಕುರಿತ ಮುಂದಿನ ಕಾನೂನು ಕ್ರಮ ಕೈಗೊಳ್ಳುವಂತೆ ಹೈಕೋರ್ಟ್ ನಿರ್ದೇಶಿಸಿದೆ.

## ಮೆಟ್ರೋ ಸಂಪರ್ಕಕ್ಕೆ 200 ಎಸಿ ಮಿನಿ ಬಸ್

● ವಿಕ್ರಮ ವಾಹಿನಿ । ಬೆಂಗಳೂರು

ನಗರದಲ್ಲಿ ಸಾರ್ವಜನಿಕ ಸಾರಿಗೆ ಬಳಕೆ ಹೆಚ್ಚಿಸುವ ಉದ್ದೇಶದಿಂದ ಬಿಎಂಟಿಸಿ 200 ಹೊಸ ಎಸಿ ಮಿನಿ ಬಸ್‌ಗಳನ್ನು ಮೆಟ್ರೋ ಫೀಡರ್ ಸೇವೆಗೆ ಮೀಸಲಿಡಲು ಮುಂದಾಗಿದೆ. ಕೇಂದ್ರದ ಪಿಎಂ ಇ-ಡ್ರೈವ್ ಯೋಜನೆಯಡಿ ಸೇರ್ಪಡೆಯಾಗಲಿರುವ 4,500 ಎಲೆಕ್ಟ್ರಿಕ್ ಬಸ್‌ಗಳ ಪೈಕಿ ಈ ಬಸ್‌ಗಳನ್ನು ನಿಯೋಜಿಸಲಾಗುತ್ತದೆ.

ಈ ಮಿನಿ ಬಸ್‌ಗಳು ಮೆಟ್ರೋ ನಿಲ್ದಾಣಗಳ ಸುತ್ತಮುತ್ತಲಿನ ಐದು ಕಿ.ಮೀ ವ್ಯಾಪ್ತಿಯಲ್ಲಿ ಸಂಚರಿಸಿ, ಬಡಾವಣೆಗಳ ಒಳಭಾಗದಿಂದ ಪ್ರಯಾಣಿಕರನ್ನು ನಿಲ್ದಾಣಗಳಿಗೆ ಸಂಪರ್ಕಿಸಲಿವೆ. ಐಟಿ-ಬಿಟಿ ಕಂಪನಿಗಳ ಬೇಡಿಕೆಯಂತೆ ಉದ್ಯೋಗಿಗಳಿಗಾಗಿ ಹೆಚ್ಚುವರಿ ಎಸಿ ಬಸ್‌ಗಳ ಸೇವೆ ಒದಗಿಸುವ ಯೋಜನೆಯೂ ಇದೆ.

ಇದೇ ವೇಳೆ ಓಲಾ, ಊಬರ್ ಸೇರಿದಂತೆ ಆಪ್ ಆಧಾರಿತ ವಾಣಿಜ್ಯ ವಾಹನಗಳಲ್ಲೂ 'ನಮ್ಮ ಬಿಎಂಟಿಸಿ ಮೊಬೈಲ್ ಆಪ್ 2.0' ಲಭ್ಯವಾಗುವಂತೆ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ. ಪ್ರಯಾಣಿಕರು ಸಮೀಪದ ಬಸ್ ನಿಲ್ದಾಣ, ಮಾರ್ಗ ಹಾಗೂ ಬಸ್‌ಗಳ ನೈಜ ಸಮಯದ ಮಾಹಿತಿಯನ್ನು ಪಡೆಯಬಹುದಾಗಿದೆ.

ಇದರ ಜತೆಗೆ, ಮೆಟ್ರೋ ಮತ್ತು ಬಿಎಂಟಿಸಿ ಸೇವೆಗಳ ನಡುವೆ ಉತ್ತಮ ಸಮನ್ವಯ ಸಾಧಿಸಿ ಪ್ರಯಾಣಿಕರಿಗೆ ತಡೆರಹಿತ ಸಂಪರ್ಕ ಕಲ್ಪಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. ಈ ಯೋಜನೆಯಿಂದ ಖಾಸಗಿ ವಾಹನಗಳ ಅವಲಂಬನೆ ಕಡಿಮೆಯಾಗಿ ನಗರ ಸಂಚಾರ ದಟ್ಟಣೆ ತಗ್ಗುವ ನಿರೀಕ್ಷೆಯಿದೆ.

## ಮರಳು ಮಾಫಿಯಾಗೆ ಬಲಿಯಾಗುತ್ತಿರುವ ಐತಿಹಾಸಿಕ ಶಿಲಾಶಾಸನಗಳು

● ವಿಕ್ರಮ ವಾಹಿನಿ । ಮುಳಬಾಗಲು

ತಾಲ್ಲೂಕಿನ ಐತಿಹಾಸಿಕ ಕುರುಡುಮಲೆ ಗ್ರಾಮದಲ್ಲಿರುವ ಪುರಾತನ ಶಿಲಾಶಾಸನಗಳು ಹಾಗೂ ವೀರಗಲ್ಲುಗಳು ನಿರ್ಲಕ್ಷ್ಯಕ್ಕೆ ಒಳಗಾಗುತ್ತಿದ್ದು, ಮರಳು ಮಾಫಿಯಾದಿಂದ ಅವುಗಳ ಅಸ್ತಿತ್ವಕ್ಕೆ ಧಕ್ಕೆ ಉಂಟಾಗುತ್ತಿದೆ ಎಂಬ ಆತಂಕ ವ್ಯಕ್ತವಾಗಿದೆ.

ಕುರುಡುಮಲೆ ರಾಜ್ಯದಲ್ಲಷ್ಟೇ ಅಲ್ಲದೆ ನೆರೆಯ ಆಂಧ್ರಪ್ರದೇಶ ಹಾಗೂ ತಮಿಳುನಾಡಿನಲ್ಲೂ ಪ್ರಸಿದ್ಧವಾಗಿದ್ದು, ಇಲ್ಲಿನ ಏಕಶಿಲೆಯ 18 ಅಡಿ ಎತ್ತರದ ವಿನಾಯಕ ಮೂರ್ತಿ ಪ್ರಮುಖ ಆಕರ್ಷಣೆಯಾಗಿದೆ. ಇದೇ ಗ್ರಾಮದಲ್ಲಿ ಹುಟ್ಟುವ ಕೌಂಡಿನ್ಯ ನದಿ ರಾಜ್ಯದ ಗಡಿ ದಾಟಿ ಆಂಧ್ರಪ್ರದೇಶದ ಪಲಮನೇರು ಮೂಲಕ ತಮಿಳುನಾಡಿನತ್ತ ಹರಿಯುತ್ತದೆ.

ಕುರುಡುಮಲೆ ವಿನಾಯಕ ದೇವಾಲಯದ ಜೀರ್ಣೋದ್ಧಾರ ಹಾಗೂ ಅಭಿವೃದ್ಧಿಗೆ ಹಿಂದಿನ ಕಾಲದಿಂದಲೂ ಸುತ್ತಮುತ್ತಲಿನ ಗ್ರಾಮಸ್ಥರು ದೇಣಿಗೆ ನೀಡುತ್ತಿದ್ದರು. ದೇಣಿಗೆ ನೀಡಿದವರ ನೆನಪಿಗಾಗಿ ಅವರ ಹೆಸರು ಹಾಗೂ ವಿವರಗಳನ್ನು ಶಿಲಾಶಾಸನಗಳಲ್ಲಿ ದಾಖಲಿಸುವ ಪದ್ಧತಿಯಿತ್ತು. ಹೀಗಾಗಿ ಇಲ್ಲಿ ಹಲವು ಐತಿಹಾಸಿಕ ಶಾಸನಗಳು ಇಂದಿಗೂ ಮಹತ್ವದ ದಾಖಲೆಗಳಾಗಿವೆ.

ಕುರುಡುಮಲೆ ಗ್ರಾಮದ ಶಾಸನ ತಜ್ಞ ಪ್ರೊ. ಕೆ.ಆರ್. ನರಸಿಂಹನ್ ಅವರು ವಿನಾಯಕ ರಥೋತ್ಸವದ ಹಿನ್ನೆಲೆಯಲ್ಲಿ ಮತ್ತಷ್ಟು ಐತಿಹಾಸಿಕ ಮಾಹಿತಿಯನ್ನು ಸಂಗ್ರಹಿಸುವ ಉದ್ದೇಶದಿಂದ ಮಂಗಳವಾರ ಶಿಡ್ಲಘಟ್ಟ ಗ್ರಾಮಕ್ಕೆ ಭೇಟಿ ನೀಡಿದಾಗ, ಹಲವು ಶಾಸನಗಳ ನಡುವೆ ಪ್ರಮುಖವಾಗಿದ್ದ ಎರಡು ಶಾಸನಗಳ ಕಲ್ಲುಗಳನ್ನು ತೆರವುಗೊಳಿಸಿರುವುದು ಕಂಡುಬಂದು




ಆಘಾತಕ್ಕೊಳಗಾದರು.

ಈ ವಿಷಯವನ್ನು ವಕೀಲ ಹಾಗೂ ಹಿರಿಯ ಪತ್ರಕರ್ತ ಮಂಡಿಕಲ್ ಪುರುಷೋತ್ತಮ್ ಅವರ ಗಮನಕ್ಕೆ ತಂದಿದ್ದು, ಅವರು ಶಿಡ್ಲಘಟ್ಟದ ವಕೀಲ ಹಾಗೂ ಬೆಂಗಳೂರು ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯ ಎಸ್.ಎಂ. ಮುನಿಶಾಮಿಗೌಡ ಅವರೊಂದಿಗೆ ಚರ್ಚಿಸಿದರು.

ವಿಷಯಕ್ಕೆ ತಕ್ಷಣ ಸ್ಪಂದಿಸಿದ ಮುನಿಶಾಮಿಗೌಡ ಅವರು ಗ್ರಾಮದ ಶಿಲಾಶಾಸನಗಳು ಹಾಗೂ ವೀರಗಲ್ಲುಗಳನ್ನು ಸಂರಕ್ಷಿಸಲು ಅಗತ್ಯ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದ್ದಾರೆ.

ಐತಿಹಾಸಿಕ ಮಹತ್ವ ಹೊಂದಿರುವ ಶಾಸನಗಳು ಹಾಗೂ ವೀರಗಲ್ಲುಗಳನ್ನು ಸಂರಕ್ಷಿಸಲು ಸಂಬಂಧಪಟ್ಟ ಪುರಾತತ್ವ ಇಲಾಖೆ ಮತ್ತು ಸ್ಥಳೀಯ ಆಡಳಿತ ತುರ್ತು ಕ್ರಮ ಕೈಗೊಳ್ಳಬೇಕು ಎಂದು ಸ್ಥಳೀಯರು ಆಗ್ರಹಿಸಿದ್ದಾರೆ.

## ಪೊಲೀಸ್ ಸಿಬ್ಬಂದಿಯ ಆರೋಗ್ಯಕ್ಕೆ 'ಪ್ರಾಜೆಕ್ಟ್ ಖುಷಿ'

● ವಿಕ್ರಮ ವಾಹಿನಿ । ಬೆಂಗಳೂರು

ಪೊಲೀಸ್ ಸಿಬ್ಬಂದಿಯ ದೈಹಿಕ ಹಾಗೂ ಮಾನಸಿಕ ಆರೋಗ್ಯ ಮತ್ತು ಕ್ಷೇಮಾಭಿವೃದ್ಧಿಗೆ ಒತ್ತು ನೀಡುವ ಉದ್ದೇಶದಿಂದ ಬೆಂಗಳೂರು ನಗರ ಪೊಲೀಸರು 'ಪ್ರಾಜೆಕ್ಟ್ ಖುಷಿ' ಎಂಬ ವ್ಯವಸ್ಥಿತ ಆರೋಗ್ಯ ಕಾರ್ಯಕ್ರಮ ಆರಂಭಿಸಿದ್ದಾರೆ ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಮೊದಲ ಹಂತದಲ್ಲಿ ಎಲೆಕ್ಟ್ರಾನಿಕ್ ಸಿಟಿ ಪೊಲೀಸ್ ವಿಭಾಗದ 600 ಸಿಬ್ಬಂದಿಯನ್ನು ಕಾರ್ಯಕ್ರಮದ ವ್ಯಾಪ್ತಿಗೆ ತರಲಾಗುತ್ತಿದ್ದು, ಪ್ರತಿ ಬ್ಯಾಚ್‌ಗೆ ಮೂರು ತಿಂಗಳ ಅವಧಿಯಲ್ಲಿ ಆರೋಗ್ಯ ತಪಾಸಣೆ, ತಜ್ಞರ ಮಾರ್ಗದರ್ಶನ ಹಾಗೂ ಡಿಜಿಟಲ್ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತದೆ. ಪೌಷ್ಟಿಕಾಂಶ, ದೈಹಿಕ ಚಟುವಟಿಕೆ, ಉತ್ತಮ ನಿದ್ರೆ, ಒತ್ತಡ ನಿರ್ವಹಣೆ ಹಾಗೂ ಮುಂಜಾಗ್ರತಾ ಆರೋಗ್ಯ ಆರೈಕೆಗೆ ಕಾರ್ಯಕ್ರಮದಲ್ಲಿ ಆದ್ಯತೆ ನೀಡಲಾಗುವುದು.

ಈ ಹಿಂದೆ ನಡೆಸಿದ ಪ್ರಾಯೋಗಿಕ ಕಾರ್ಯಕ್ರಮದಲ್ಲಿ ಶೇ.61ರಷ್ಟು ಮಂದಿಯಲ್ಲಿ ರಕ್ತದಲ್ಲಿನ ಸಕ್ಕರೆ ಪ್ರಮಾಣ ಕಡಿಮೆಯಾಗಿದ್ದು, ಶೇ.70ರಷ್ಟು ಮಂದಿ ವಿಟಮಿನ್ ಬಿ12 ಕೊರತೆಯಿಂದ ಚೇತರಿಸಿಕೊಂಡಿದ್ದಾರೆ. ಶೇ.59ರಷ್ಟು ಮಂದಿ ದೇಹದ ತೂಕವನ್ನೂ ಇಳಿಸಿಕೊಂಡಿದ್ದಾರೆ.

ಇದರಿಂದ ನಿರಂತರ ಹಾಗೂ ವೈಜ್ಞಾನಿಕ ಆರೋಗ್ಯ ಕಾರ್ಯಕ್ರಮಗಳು ಪೊಲೀಸ್ ಸಿಬ್ಬಂದಿಯ ಆರೋಗ್ಯದ ಮೇಲೆ ಉತ್ತಮ ಪರಿಣಾಮ ಬೀರುತ್ತವೆ ಎಂಬುದು ದೃಢಪಟ್ಟಿದೆ ಎಂದು ಸಚಿವರು ಹೇಳಿದ್ದಾರೆ.



ಪೊಲೀಸ್ ಸಿಬ್ಬಂದಿಯ ಆರೋಗ್ಯವೇ ಸದೃಢ ಪೊಲೀಸ್ ವ್ಯವಸ್ಥೆಯ ಬೆನ್ನೆಲುಬಾಗಿದ್ದು, ದೈಹಿಕ ಆರೋಗ್ಯದ ಜತೆಗೆ ಮಾನಸಿಕ ಕ್ಷೇಮ ಹಾಗೂ ಒತ್ತಡ ನಿರ್ವಹಣೆಗೂ ಆದ್ಯತೆ ನೀಡುವುದು ಅಗತ್ಯ. 'ಪ್ರಾಜೆಕ್ಟ್ ಖುಷಿ' ಪೊಲೀಸ್ ಪಡೆಯನ್ನು ಮತ್ತಷ್ಟು ಆರೋಗ್ಯಕರ ಹಾಗೂ ಸವಾಲುಗಳನ್ನು ಎದುರಿಸುವಲ್ಲಿ ಸದೃಢಗೊಳಿಸಲಿದೆ ಎಂದು ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಮುಂದಿನ ಹಂತಗಳಲ್ಲಿ ಕಾರ್ಯಕ್ರಮವನ್ನು ನಗರದ ಇತರ ಪೊಲೀಸ್ ವಿಭಾಗಗಳಿಗೂ ವಿಸ್ತರಿಸುವ ಉದ್ದೇಶವಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಪೊಲೀಸ್ ಸಿಬ್ಬಂದಿಯಲ್ಲಿ ಆರೋಗ್ಯದ ಬಗ್ಗೆ ಜಾಗೃತಿ ಮೂಡಿಸುವ ಜತೆಗೆ, ನಿಯಮಿತ ಆರೋಗ್ಯ ತಪಾಸಣೆಗೆ ಹೆಚ್ಚಿನ ಒತ್ತು ನೀಡಲಾಗುವುದು ಎಂದು ಅವರು ಹೇಳಿದ್ದಾರೆ.

ಈ ಉಪಕ್ರಮಕ್ಕೆ ಸಹಭಾಗಿತ್ವ ನೀಡಿರುವ ಹ್ಯಾಪಿಯೆಸ್ಟ್ ಹೆಲ್ತ್, ಟೈಟಾನ್ ಕಂಪನಿ ಲಿಮಿಟೆಡ್ ಹಾಗೂ ಬೆಂಗಳೂರು ಇಂದಿರಾನಗರ ರೋಟರಿ ಟ್ರಸ್ಟ್‌ಗೆ ಸಚಿವರು ಕೃತಜ್ಞತೆ ಸಲ್ಲಿಸಿದ್ದಾರೆ.

PRGI NO: KARKAN/2018/78481


# ಬೆಂಗಳೂರಿನಲ್ಲಿ 180 ನಕ್ಷತ್ರ ಆಮೆ ವಶ

● ವಿಕ್ರಮ ವಾಹಿನಿ | ಬೆಂಗಳೂರು

ನಗರದಲ್ಲಿ ಕಂದಾಯ ಗುಪ್ತಚರ ನಿರ್ದೇಶನಾಲಯ (ಡಿಆರ್‌ಐ) ಅಧಿಕಾರಿಗಳು ಕಾರ್ಯಾಚರಣೆ ನಡೆಸಿ, ಅಕ್ರಮವಾಗಿ ಸಾಗಿಸಲಾಗುತ್ತಿದ್ದ 180 ನಕ್ಷತ್ರ ಆಮೆಗಳನ್ನು ವಶಪಡಿಸಿಕೊಂಡಿದ್ದಾರೆ.

ಖಚಿತ ಮಾಹಿತಿ ಆಧರಿಸಿ ಗಾಂಧಿನಗರದಲ್ಲಿ ದಾಳಿ ನಡೆಸಿದ ಅಧಿಕಾರಿಗಳು, ಟ್ರಾಲಿ ಬ್ಯಾಗ್‌ನಲ್ಲಿ ಸಾಗಿಸುತ್ತಿದ್ದ ಆಮೆಗಳನ್ನು ಪತ್ತೆಹಚ್ಚಿ ಜಪ್ತಿ ಮಾಡಿದ್ದಾರೆ. ಆಮೆಗಳನ್ನು ತಲಾ 10 ಸಾವಿರಕ್ಕೆ ಮಾರಾಟ ಮಾಡಲು ಯತ್ನಿಸಲಾಗುತ್ತಿತ್ತು ಎನ್ನಲಾಗಿದ್ದು, ಈ ಸಂಬಂಧ ಓರ್ವ ವ್ಯಕ್ತಿಯನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಲಾಗುತ್ತಿದೆ.

ಕಲಾಸಿಪಾಳ್ಯದಿಂದ ನಕ್ಷತ್ರ ಆಮೆಗಳನ್ನು ತಂದು ಮಾರಾಟಕ್ಕೆ ನೀಡಲಾಗಿತ್ತು ಎಂದು ಪ್ರಾಥಮಿಕ ತನಿಖೆಯಲ್ಲಿ ತಿಳಿದುಬಂದಿದೆ. ನಕ್ಷತ್ರ ಆಮೆಗಳನ್ನು ಮನೆಯಲ್ಲಿ ಇಟ್ಟುಕೊಂಡರೆ ಅದೃಷ್ಟ ಬರುತ್ತದೆ ಎಂದು ನಂಬಿಸಿ ಮಾರಾಟಕ್ಕೆ ಯತ್ನಿಸಲಾಗುತ್ತಿತ್ತು ಎನ್ನಲಾಗಿದೆ.

ಈ ಸಂಬಂಧ ವನ್ಯಜೀವಿ ಸಂರಕ್ಷಣಾ ಕಾಯ್ದೆಯಡಿ ಪ್ರಕರಣ ದಾಖಲಿಸಿಕೊಂಡಿರುವ ಅಧಿಕಾರಿಗಳು, ಆಮೆಗಳನ್ನು ಎಲ್ಲಿಂದ ತರಲಾಗಿತ್ತು ಹಾಗೂ ಅಕ್ರಮ ಸಾಗಾಟದ ಹಿಂದೆ ಯಾರಿದ್ದಾರೆ ಎಂಬುದರ ಕುರಿತು ತನಿಖೆ ಮುಂದುವರಿಸಿದ್ದಾರೆ.

## ರೀಲ್ಸ್‌ಗಾಗಿ 30 ಅಡಿ ಎತ್ತರದಿಂದ ಜಿಗಿದು ಎರಡೂ ಕಾಲು ಮುರಿತ

● ವಿಕ್ರಮ ವಾಹಿನಿ | ಝಾನ್ಸಿ

ರೀಲ್ಸ್‌ಗಾಗಿ 30 ಅಡಿ ಎತ್ತರದಿಂದ ಡ್ಯಾಂಗೆ ಜಿಗಿದ ವ್ಯಕ್ತಿಯೊಬ್ಬ ಬಂಡೆಗಳ ಮೇಲೆ ಬಿದ್ದು ಎರಡೂ ಕಾಲುಗಳ ಮೂಳೆ ಮುರಿತಕ್ಕೊಳಗಾದ ಘಟನೆ ಉತ್ತರ ಪ್ರದೇಶದ ಝಾನ್ಸಿಯ ಪಹುಜ್ ಡ್ಯಾಂನಲ್ಲಿ ನಡೆದಿದೆ.

38 ವರ್ಷದ ಪುಷ್ಪೇಂದ್ರ ಸ್ನೇಹಿತರೊಂದಿಗೆ ರೀಲ್ಸ್ ಚಿತ್ರೀಕರಿಸಲು ಡ್ಯಾಂಗೆ ತೆರಳಿದ್ದ. ಸಾಹಸಮಯ ದೃಶ್ಯಕ್ಕಾಗಿ ವೀಕ್ಷಣಾ ಸ್ಥಳದ ರೈಲಿಂಗ್ ದಾಟಿ ಜಿಗಿದಾಗ ನೀರಿನ ಆಳವನ್ನು ಅಂದಾಜಿಸಲಾಗದೆ ಕೆಳಗಿದ್ದ ಬಂಡೆಗಳ ಮೇಲೆ ಬಿದ್ದಿದ್ದಾನೆ.

ಗಾಯಗೊಂಡು ನೀರಿನಿಂದ ಹೊರಬರಲಾಗದೆ ಪರದಾಡುತ್ತಿದ್ದ ಆತನನ್ನು ಸ್ಥಳೀಯರು ರಕ್ಷಿಸಿ ಆಸ್ಪತ್ರೆಗೆ ದಾಖಲಿಸಿದ್ದಾರೆ. ವೈದ್ಯಕೀಯ ಪರೀಕ್ಷೆಯಲ್ಲಿ ಎರಡೂ ಕಾಲುಗಳ ಮೂಳೆ ಮುರಿದಿರುವುದು ದೃಢಪಟ್ಟಿದೆ.

## ನೀರಿನ ಸಂಪ್‌ಗೆ ಬಿದ್ದು ಒಂದೂವರೆ ವರ್ಷದ ಮಗು ಸಾವು

● ವಿಕ್ರಮ ವಾಹಿನಿ | ಕೊಯಮತ್ತೂರು

ಮನೆಯ ಎದುರು ಆಟವಾಡುತ್ತಿದ್ದ ಒಂದೂವರೆ ವರ್ಷದ ಮಗು ಸರಿಯಾಗಿ ಮುಚ್ಚದ ನೀರಿನ ಸಂಪ್‌ಗೆ ಆಕಸ್ಮಿಕವಾಗಿ ಬಿದ್ದು ಉಸಿರುಗಟ್ಟಿ ಮೃತಪಟ್ಟಿರುವ ಹೃದಯವಿದ್ರಾವಕ ಘಟನೆ ತಮಿಳುನಾಡಿನ ಕೊಯಮತ್ತೂರಿನಲ್ಲಿ ನಡೆದಿದೆ.

ರತ್ನಗಿರಿ ಬಳಿಯ ವೌಸಿ ನಗರ ನಿವಾಸಿಗಳಾದ ವೇಣುಗೋಪಾಲ್ ಮತ್ತು ಕಲೈವಾಣಿ ದಂಪತಿಯ ಪುತ್ರ ಧನ್ವಂತ್ ಮೃತ ಬಾಲಕ. ಸೋಮವಾರ ಎಂದಿನಂತೆ ಮನೆಯ ಮುಂಭಾಗದಲ್ಲಿ ಆಟವಾಡುತ್ತಿದ್ದ ಬಾಲಕ, ನೀರಿನ ಸಂಪ್ ಮೇಲೆ ಹಾಕಲಾಗಿದ್ದ ಟಿನ್ ಶೀಟ್ ಸರಿಯಾಗಿ ಮುಚ್ಚದ ಕಾರಣ ಆಕಸ್ಮಿಕವಾಗಿ ಒಳಗೆ ಬಿದ್ದಿದ್ದಾನೆ ಎನ್ನಲಾಗಿದೆ.

ಮಗು ಕಾಣಿಸದ ಹಿನ್ನೆಲೆಯಲ್ಲಿ ಪೋಷಕರು ಹಾಗೂ ನೆರೆಹೊರೆಯವರು ಹುಡುಕಾಟ ನಡೆಸಿದ್ದಾರೆ. ಬಳಿಕ ಮನೆಯ ನೆಲಮಹಡಿಯಲ್ಲಿದ್ದ ನೀರಿನ ಸಂಪ್ ಪರಿಶೀಲಿಸಿದಾಗ, ಬಾಲಕ ಪ್ರಜ್ಞಾಹೀನ ಸ್ಥಿತಿಯಲ್ಲಿ ಪತ್ತೆಯಾಗಿದ್ದಾನೆ. ಕೂಡಲೇ ಆಸ್ಪತ್ರೆಗೆ ಕರೆದೊಯ್ದರೂ ವೈದ್ಯರು ಮಗು ಮೃತಪಟ್ಟಿರುವುದಾಗಿ ತಿಳಿಸಿದ್ದಾರೆ.

ಮಾಹಿತಿ ಪಡೆದ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ, ಶವವನ್ನು ಮರಣೋತ್ತರ ಪರೀಕ್ಷೆಗೆ ಕಳುಹಿಸಿದ್ದಾರೆ. ತಂದೆ ವೇಣುಗೋಪಾಲ್ ನೀಡಿದ ದೂರಿನ ಆಧಾರದ ಮೇಲೆ ಪ್ರಕರಣ ದಾಖಲಿಸಿಕೊಂಡು ತನಿಖೆ ಮುಂದುವರಿಸಿದ್ದಾರೆ. ಸಂಪ್ ಸರಿಯಾಗಿ ಮುಚ್ಚದಿರುವುದೇ ಘಟನೆಗೆ ಕಾರಣವಾಗಿರಬಹುದು ಎಂದು ಪೊಲೀಸರು ತಿಳಿಸಿದ್ದಾರೆ. ಮಗುವಿನ ದುರಂತ ಸಾವು ವೌಸಿ ನಗರ ಪ್ರದೇಶದಲ್ಲಿ ತೀವ್ರ ದುಃಖಕ್ಕೆ ಕಾರಣವಾಗಿದೆ.



ಸಿಎಂ ಡಿ ಕೆ ಶಿವಕುಮಾರ್ ಅವರು ಯಶವಂತಪುರ ಎಪಿಎಂಸಿ ಮಾರುಕಟ್ಟೆಗೆ ಮಂಗಳವಾರ ಬೆಳಗ್ಗೆ ಹಠಾತ್ ಭೇಟಿ ನೀಡಿ ಹಣ್ಣು, ತರಕಾರಿ ಪೂರೈಸುವ ರೈತರು, ಮಾರಾಟಗಾರರ ಅಹವಾಲುಗಳನ್ನು ಆಲಿಸಿದರು.

# ರ್‍ಯಾಲಿಗೆ ಅನುಮತಿ ನಿರಾಕರಿಸಿದರೆ ಜನಾಕ್ರೋಶ: ರವಿಕುಮಾರ್

● ವಿಕ್ರಮ ವಾಹಿನಿ | ಬಳ್ಳಾರಿ

ಸೆ.10ರಂದು ಬಳ್ಳಾರಿ ಮುನ್ಸಿಪಲ್ ಮೈದಾನದಲ್ಲಿ ನಡೆಯಲಿರುವ ಬಿಜೆಪಿ ರ್‍ಯಾಲಿಗೆ ಅನುಮತಿ ನೀಡಬೇಕು. ಇಲ್ಲವಾದರೆ ರಾಜ್ಯವ್ಯಾಪಿ ಬೃಹತ್ ಜನಾಕ್ರೋಶವನ್ನು ಸರ್ಕಾರ ಎದುರಿಸಬೇಕಾಗುತ್ತದೆ ಎಂದು ವಿಧಾನ ಪರಿಷತ್ ಸದಸ್ಯ ರವಿಕುಮಾರ್ ಎಚ್ಚರಿಕೆ ನೀಡಿದರು.

ಲಿಂಗಸುಗೂರು-ಬಳ್ಳಾರಿ ಬಿಜೆಪಿ ಪಾದಯಾತ್ರೆ ಇದೀಗ ಕೇವಲ ಪಕ್ಷದ ಕಾರ್ಯಕ್ರಮವಾಗಿ ಉಳಿದಿಲ್ಲ. ಅದು ಜನಾಂದೋಲನವಾಗಿ ರೂಪುಗೊಂಡಿದ್ದು, ದಿನದಿಂದ ದಿನಕ್ಕೆ ಜನರ ಭಾಗವಹಿಸುವಿಕೆ ಹೆಚ್ಚುತ್ತಿದೆ ಎಂದು ಅವರು ಹೇಳಿದರು.

ರ್‍ಯಾಲಿಗೆ ಅನುಮತಿ ನೀಡದಂತೆ ರಾಜ್ಯ ಸರ್ಕಾರವು ಬಳ್ಳಾರಿ ಜಿಲ್ಲಾಡಳಿತದ ಮೇಲೆ ಒತ್ತಡ ಹೇರುತ್ತಿದೆ ಎಂಬ ಅನುಮಾನವಿದೆ.

2022ರ ಅಕ್ಟೋಬರ್ 15ರಂದು ಕಾಂಗ್ರೆಸ್ ಪ್ರತಿಪಕ್ಷದಲ್ಲಿದ್ದಾಗ ರಾಹುಲ್ ಗಾಂಧಿ, ಮಲ್ಲಿಕಾರ್ಜುನ ಖರ್ಗೆ, ಸಿದ್ದರಾಮಯ್ಯ, ಡಿ.ಕೆ. ಶಿವಕುಮಾರ್ ಸೇರಿದಂತೆ ಹಲವು ನಾಯಕರು ಭಾಗವಹಿಸಿದ್ದ ಬೃಹತ್ ಸಮಾವೇಶಕ್ಕೆ ಅಂದಿನ ಬಿಜೆಪಿ ಸರ್ಕಾರ ಅನುಮತಿ ನೀಡಿತ್ತು. ಒಂದೇ ಕಾನೂನಿನಡಿ ಬೇರೆ ಬೇರೆ ಮಾನದಂಡ ಅನುಸರಿಸುವುದು ಸರಿಯಲ್ಲ ಎಂದು ರವಿಕುಮಾರ್ ಹೇಳಿದರು.



ಬಿಜೆಪಿ ರ್‍ಯಾಲಿಯನ್ನು ಶಾಲಾ ಅವಧಿ ಮುಗಿದ ಬಳಿಕ ಸಂಜೆ ನಡೆಸಲು ಉದ್ದೇಶಿಸಿದ್ದು, ವಿದ್ಯಾರ್ಥಿಗಳಿಗೆ ಯಾವುದೇ ತೊಂದರೆಯಾಗುವುದಿಲ್ಲ. ಹೀಗಾಗಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಮಧ್ಯಪ್ರವೇಶಿಸಿ ರ್‍ಯಾಲಿಗೆ ಅನುಮತಿ ನೀಡುವಂತೆ ಜಿಲ್ಲಾಡಳಿತಕ್ಕೆ ಸೂಚಿಸಬೇಕು ಎಂದು ಆಗ್ರಹಿಸಿದರು.

ಸಾರ್ವಜನಿಕ ಸಭೆ ಹಾಗೂ ರ್‍ಯಾಲಿ ನಡೆಸುವುದು ರಾಜಕೀಯ ಪಕ್ಷಗಳ ಸಾಂವಿಧಾನಿಕ ಹಕ್ಕು. ಈ ಹಕ್ಕನ್ನು ನಿರ್ಬಂಧಿಸುವ ಪ್ರಯತ್ನ ನಡೆದರೆ ಸರ್ಕಾರ ರಾಜ್ಯ ಹಿಂದೆಂದೂ ಕಂಡಿರದ ಜನಾಂದೋಲನವನ್ನು ಎದುರಿಸಬೇಕಾಗುತ್ತದೆ ಎಂದು ರವಿಕುಮಾರ್ ಎಚ್ಚರಿಸಿದರು.

# ಒತ್ತಡ ನಿವಾರಣೆಗೆ ಹಬ್ಬ, ಧಾರ್ಮಿಕ ಆಚರಣೆಗಳು ಸಹಕಾರಿ: ಖಂಡ್ರೆ

● ವಿಕ್ರಮ ವಾಹಿನಿ | ಭಾಲ್ಕಿ (ಬೀದರ್)

ಧಾವಂತದ ಬದುಕಿನಲ್ಲಿ ಹೆಚ್ಚುತ್ತಿರುವ ಮಾನಸಿಕ ಒತ್ತಡವನ್ನು ನಿವಾರಿಸುವಲ್ಲಿ ಹಬ್ಬ, ಉತ್ಸವ ಹಾಗೂ ಧಾರ್ಮಿಕ ಆಚರಣೆಗಳು ಪ್ರಮುಖ ಪಾತ್ರ ವಹಿಸುತ್ತವೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಬೀದರ್ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ. ಖಂಡ್ರೆ ಹೇಳಿದರು.

ಭಾಲ್ಕಿ ಗಡಿ ಗಣೇಶ ಮಂದಿರದಲ್ಲಿ ನೂತನ ಗಣೇಶ ಮೂರ್ತಿ ಪ್ರತಿಷ್ಠಾಪನಾ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಪೂಜೆ ಸಲ್ಲಿಸಿದ ಬಳಿಕ ಮಾತನಾಡಿದ ಅವರು, ಹಬ್ಬ-ಉತ್ಸವಗಳಲ್ಲಿ ಬಂಧುಗಳು, ಸ್ನೇಹಿತರು ಒಂದೆಡೆ ಸೇರಿ ಸಂತೋಷದಿಂದ ಕಾಲ ಕಳೆಯುವುದರಿಂದ ಒತ್ತಡ ಕಡಿಮೆಯಾಗುತ್ತದೆ. ಇಂತಹ ಆಚರಣೆಗಳು ಸಾಮಾಜಿಕ ಬಾಂಧವ್ಯವನ್ನು ಗಟ್ಟಿಗೊಳಿಸುವುದರ ಜೊತೆಗೆ ಪರಸ್ಪರ ಸಹಕಾರ ಮತ್ತು ಸೌಹಾರ್ದವನ್ನು ಬೆಳೆಸುತ್ತವೆ ಎಂದರು.

ಸ್ವಾತಂತ್ರ್ಯ ಸಂಗ್ರಾಮದ ಸಂದರ್ಭದಲ್ಲಿ ಬ್ರಿಟಿಷರು ಜನರು ಒಂದೆಡೆ ಸೇರಲು ನಿರ್ಬಂಧ ಹೇರಿದ್ದಾಗ, ಸಾರ್ವಜನಿಕ ಗಣೇಶೋತ್ಸವಗಳು ಜನರನ್ನು ಒಗ್ಗೂಡಿಸುವ ಮತ್ತು ಅವರಲ್ಲಿ ಸ್ವಾತಂತ್ರ್ಯದ ಕಿಚ್ಚು



ಹಚ್ಚುವಲ್ಲಿ ಮಹತ್ವದ ಪಾತ್ರ ವಹಿಸಿದ್ದವು ಎಂದು ಅವರು ಸ್ಮರಿಸಿದರು.

ಭಾರತವು ಧಾರ್ಮಿಕ ಆಚರಣೆಯ ಸ್ವಾತಂತ್ರ್ಯ ಹೊಂದಿರುವ ರಾಷ್ಟ್ರವಾಗಿದ್ದು, ‘ಅನೇಕತೆಯಲ್ಲಿ ಏಕತೆ’ ಎಂಬ ಪರಿಕಲ್ಪನೆಯನ್ನು ವಿಶ್ವಕ್ಕೆ ಮಾದರಿಯಾಗಿ ತೋರಿಸಿದೆ. ಸ್ವಧರ್ಮದಲ್ಲಿ ನಿಷ್ಠೆ ಹೊಂದುವುದರ ಜೊತೆಗೆ ಪರಧರ್ಮದ ಬಗ್ಗೆ ಗೌರವ ಬೆಳೆಸಿಕೊಳ್ಳಬೇಕು. ಯಾವುದೇ ಧಾರ್ಮಿಕ ಆಚರಣೆ ದ್ವೇಷ ಅಥವಾ ಹಗೆತನಕ್ಕೆ ಕಾರಣವಾಗಬಾರದು. ಎಲ್ಲರೂ ಸೋದರತ್ವದಿಂದ ಸಹಬಾಳ್ವೆ ನಡೆಸಬೇಕು ಎಂದು ಕರೆ ನೀಡಿದರು.

ಗಣೇಶನು ವಿಘ್ನ ನಿವಾರಕನಾಗಿದ್ದು, ದೇವರ ಆರಾಧನೆಯೊಂದಿಗೆ ಪ್ರತಿಯೊಬ್ಬರೂ ತಮ್ಮ ಕರ್ತವ್ಯವನ್ನು ಪ್ರಾಮಾಣಿಕತೆ ಮತ್ತು ನಿಷ್ಠೆಯಿಂದ ನಿರ್ವಹಿಸಬೇಕು ಎಂದು ಸಚಿವರು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಬಸವರಾಜ ವಂಕೆ, ಧರ್ಮೇಂದ್ರ ವಂಕೆ, ಕಪಿಲ್ ಕಲ್ಯಾಣೆ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಮಹಿಳೆ ಅನುಮಾನಾಸ್ಪದ ಸಾವು; ಪ್ರಿಯಕರ ಶಬ್ಬೀರ್ ನಾಪತ್ತೆ

● ವಿಕ್ರಮ ವಾಹಿನಿ | ಚಿಕ್ಕಬಳ್ಳಾಪುರ

ತಾಲೂಕಿನ ಚೊಕ್ಕಹಳ್ಳಿ ಗ್ರಾಮದಲ್ಲಿ ಬಾಡಿಗೆ ಮನೆಯಲ್ಲಿ ವಾಸಿಸುತ್ತಿದ್ದ ಚೈತ್ರಾ ಎಂಬ ಮಹಿಳೆ ನೇಣು ಬಿಗಿದ ಸ್ಥಿತಿಯಲ್ಲಿ ಅನುಮಾನಾಸ್ಪದವಾಗಿ ಮೃತಪಟ್ಟಿರುವ ಘಟನೆ ನಡೆದಿದೆ.

ಚೈತ್ರಾ ಸುಮಾರು ಎಂಟು ವರ್ಷಗಳ ಹಿಂದೆ ಪತಿಯಿಂದ ದೂರವಾಗಿ ಮಕ್ಕಳೊಂದಿಗೆ ಪ್ರತ್ಯೇಕವಾಗಿ ವಾಸಿಸುತ್ತಿದ್ದರು ಎನ್ನಲಾಗಿದೆ. ಘಟನೆ ಬಳಿಕ ಅಸ್ವಸ್ಥ ಸ್ಥಿತಿಯಲ್ಲಿದ್ದ ಚೈತ್ರಾ ಅವರನ್ನು ಅಕ್ಕಪಕ್ಕದವರ ಸಹಾಯದಿಂದ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆದರೆ ಚಿಕಿತ್ಸೆ ಫಲಿಸದೆ ಮೃತಪಟ್ಟಿದ್ದಾರೆ ಎಂದು ತಿಳಿದುಬಂದಿದೆ.



ಚೈತ್ರಾ ಅವರೊಂದಿಗೆ ಆತ್ಮೀಯವಾಗಿದ್ದ ಕೋಲಾರ ಮೂಲದ ಶಬ್ಬೀರ್ ಎಂಬಾತ ಘಟನೆ ಬಳಿಕ ನಾಪತ್ತೆಯಾಗಿದ್ದಾನೆ. ಆತನ ವಿರುದ್ಧ ಹಲ್ಲೆ ಹಾಗೂ ಕೊಲೆ ಆರೋಪಗಳನ್ನು ಕುಟುಂಬಸ್ಥರು ಮಾಡಿದ್ದು, ಪ್ರಕರಣದ ಕುರಿತು ಪೊಲೀಸರು ತನಿಖೆ ನಡೆಸುತ್ತಿದ್ದಾರೆ.

ಮಹಿಳೆ ಮೃತಪಟ್ಟಿರುವ ಮಾಹಿತಿ ತಿಳಿದು ನಂದಿಗಿರಿಧಾಮ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಸಾವಿಗೆ ನಿಖರ ಕಾರಣವೇನು ಹಾಗೂ ಶಬ್ಬೀರ್ ನಾಪತ್ತೆಯಾಗಿರುವುದಕ್ಕೆ ಕಾರಣವೇನು ಎಂಬುದರ ಕುರಿತು ತನಿಖೆ ಮುಂದುವರಿದಿದೆ.



ಕೋಲಾರದಲ್ಲಿ ಶ್ರೀ ಗಾಯತ್ರಿ ಸೇವಾ ಪ್ರತಿಷ್ಠಾನದ ಅಧ್ಯಕ್ಷ ವೇದ ಬ್ರಹ್ಮಶ್ರೀ ಬಿ.ಎಸ್. ರಾಘವೇಂದ್ರ ಭಟ್ ಅವರ ವತಿಯಿಂದ ಪುರೋಹಿತರ ಮಕ್ಕಳಿಗೆ ನೀಡುವ ವಾರ್ಷಿಕ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ನಡೆಯಿತು. ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಶೇ.90ಕ್ಕೂ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ತಲಾ 5,000 ಸಹಾಯಧನದ ಚೆಕ್ ವಿತರಿಸಲಾಯಿತು. ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾದ ಕೋಲಾರ ಜಿಲ್ಲಾ ಚುನಾಯಿತ ಪ್ರತಿನಿಧಿ ಕೆ.ಎನ್. ಆನಂದಮೂರ್ತಿ ಅಧ್ಯಕ್ಷತೆಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಜಿಲ್ಲಾ ಬ್ರಾಹ್ಮಣ ಮಹಾಸಭಾ ಅಧ್ಯಕ್ಷ ಚಂದ್ರಶೇಖರ್, ಕಾರ್ಯದರ್ಶಿ ಸವಿನಯ್, ಖಜಾಂಚಿ ಸಂಧ್ಯಾರಾವ್, ನಿರ್ದೇಶಕ ವೈ.ಎಸ್.ಕೆ. ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಜತ್ತಿ ಜಯಂತಿ: ಬಸವ ಅಂತರರಾಷ್ಟ್ರೀಯ ಮಾಹಿತಿ ಕೇಂದ್ರ ಉದ್ಘಾಟನೆ

● ವಿಕ್ರಮ ವಾಹಿನಿ | ಬೆಂಗಳೂರು

ಬಸವ ಸಮಿತಿಯ ಸಂಸ್ಥಾಪಕ ಹಾಗೂ ಭಾರತದ ಏಕೈಕ ಕನ್ನಡಿಗ ರಾಷ್ಟ್ರಪತಿ ಡಾ. ಬಿ.ಡಿ. ಜತ್ತಿಯವರ 114ನೇ ಜಯಂತ್ಯೋತ್ಸವ ಹಾಗೂ ಬಸವ ಸಮಿತಿಯ 62ನೇ ಸಂಸ್ಥಾಪನಾ ದಿನಾಚರಣೆ ಸೆ.10ರಂದು ಬೆಂಗಳೂರಿನ ಬಸವ ಸಮಿತಿ ಆವರಣದ ಅನುಭವ ಮಂಟಪದಲ್ಲಿ ನಡೆಯಲಿದೆ.

ಕಾರ್ಯಕ್ರಮದಲ್ಲಿ ‘ಬಸವ ಅಂತರರಾಷ್ಟ್ರೀಯ ಮಾಹಿತಿ ಕೇಂದ್ರ’ ಉದ್ಘಾಟನೆ, ‘ದಾಸೋಹ ರತ್ನ’ ಪ್ರಶಸ್ತಿ ಪ್ರದಾನ, ಗಣ್ಯರ ಸನ್ಮಾನ, ಪ್ರತಿಭಾ ಪುರಸ್ಕಾರ ಹಾಗೂ ವಚನ ಸಂಗೀತ ಕಾರ್ಯಕ್ರಮಗಳು ನಡೆಯಲಿವೆ.

ಈ ವರ್ಷದ ‘ದಾಸೋಹ ರತ್ನ’ ಪ್ರಶಸ್ತಿಯನ್ನು ಶಿಕ್ಷಣ, ಆರೋಗ್ಯ, ಪೌಷ್ಟಿಕತೆ ಹಾಗೂ ಮಾನವೀಯ ಸೇವಾ ಕ್ಷೇತ್ರದಲ್ಲಿ ಗಮನಾರ್ಹ ಸೇವೆ ಸಲ್ಲಿಸುತ್ತಿರುವ ಸದ್ಗುರು ಶ್ರೀ ಮಧುಸೂದನ ಸಾಯಿ ಅವರಿಗೆ ಪ್ರದಾನಿಸಲಾಗುವುದು. ಸುಮಾರು 40 ಸಾವಿರಕ್ಕೂ ಅಧಿಕ ಕೃತಿಗಳನ್ನು ಒಳಗೊಂಡಿರುವ ಬಸವ ಅಂತರರಾಷ್ಟ್ರೀಯ ಮಾಹಿತಿ ಕೇಂದ್ರದಲ್ಲಿ ಭಾರತೀಯ ಸಂಸ್ಕೃತಿ, ವೇದ, ಉಪನಿಷತ್ತು, ದರ್ಶನ, ಸಾಹಿತ್ಯ, ಇತಿಹಾಸ, ಕಲೆ, ಸಂಗೀತ, ಜಾನಪದ ಹಾಗೂ ವೈದ್ಯಕೀಯ ಸೇರಿದಂತೆ ವಿವಿಧ ವಿಷಯಗಳ ಅಪರೂಪದ ಗ್ರಂಥಗಳು ಹಲವು ಭಾಷೆಗಳಲ್ಲಿ ಲಭ್ಯವಿರಲಿವೆ. ಸಂಶೋಧನಾ ಕೇಂದ್ರ, ಗ್ರಂಥಾಲಯ ಹಾಗೂ ವಸ್ತುಸಂಗ್ರಹಾಲಯವನ್ನೂ ಇಲ್ಲಿ ಅಭಿವೃದ್ಧಿಪಡಿಸಲಾಗುತ್ತಿದೆ.

ಕಾರ್ಯಕ್ರಮದಲ್ಲಿ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು ಹಾಗೂ ಶ್ರೀ ಶಿವರುದ್ರ ಮಹಾಸ್ವಾಮಿಗಳು ಸಾನ್ನಿಧ್ಯ ವಹಿಸಲಿದ್ದು, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ಗೌರವ ಸನ್ಮಾನ ನಡೆಯಲಿದೆ. ಬಸವ ಸಮಿತಿ ಅಧ್ಯಕ್ಷ ಡಾ. ಅರವಿಂದ ಜತ್ತಿ ಅಧ್ಯಕ್ಷತೆ ವಹಿಸಲಿದ್ದಾರೆ.

ಡಾ. ಬಿ.ಡಿ. ಜತ್ತಿಯವರು 1964ರಲ್ಲಿ ಬಸವ ಸಮಿತಿಯನ್ನು ಸ್ಥಾಪಿಸಿ, ಬಸವಣ್ಣನವರ ಸಮಾನತೆ, ಕಾಯಕ, ದಾಸೋಹ ಹಾಗೂ ಮಾನವೀಯತೆಯ ಸಂದೇಶವನ್ನು ಪ್ರಸಾರ ಮಾಡುವ ಕಾರ್ಯಕ್ಕೆ ಬುನಾದಿ ಹಾಕಿದ್ದರು.

# 6ಜಿ ಅಭಿವೃದ್ಧಿಗೆ 25 ರಾಷ್ಟ್ರಗಳ ಮೈತ್ರಿಕೂಟಕ್ಕೆ ಭಾರತ

● ವಿಕ್ರಮ ವಾಹಿನಿ | ನವದೆಹಲಿ

ಮುಂದಿನ ಪೀಳಿಗೆಯ ಅತ್ಯಾಧುನಿಕ 6ಜಿ ವೈರ್‌ಲೆಸ್ ನೆಟ್‌ವರ್ಕ್ ಹಾಗೂ ಸಂವಹನ ತಂತ್ರಜ್ಞಾನ ಅಭಿವೃದ್ಧಿಪಡಿಸುವ ಉದ್ದೇಶದಿಂದ ಅಮೆರಿಕ ನೇತೃತ್ವದಲ್ಲಿ ರಚಿಸಲಾಗಿರುವ 25 ರಾಷ್ಟ್ರಗಳ ಜಾಗತಿಕ ಮೈತ್ರಿಕೂಟಕ್ಕೆ ಭಾರತ ಅಧಿಕೃತವಾಗಿ ಸೇರ್ಪಡೆಯಾಗಿದೆ. ಈ ಮೂಲಕ ಜಾಗತಿಕ 6ಜಿ ತಂತ್ರಜ್ಞಾನ ಅಭಿವೃದ್ಧಿ ಮತ್ತು ಮಾನದಂಡ ರೂಪಿಸುವ ಪ್ರಕ್ರಿಯೆಯಲ್ಲಿ ಭಾರತವೂ ಪ್ರಮುಖ ಪಾತ್ರ ವಹಿಸಲಿದೆ.

ಭಾರತದ ‘ಭಾರತ್ 6ಜಿ ಮಿಷನ್’ಗೆ ಉತ್ತೇಜನ ನೀಡುವ ಜತೆಗೆ, ಭವಿಷ್ಯದ ನೆಟ್‌ವರ್ಕ್ ವ್ಯವಸ್ಥೆಗಳಿಗೆ ಅಗತ್ಯವಿರುವ ತಾಂತ್ರಿಕ ಮಾನದಂಡಗಳನ್ನು ರೂಪಿಸುವ ನಿಟ್ಟಿನಲ್ಲಿ ಈ ಮೈತ್ರಿಕೂಟ ಕಾರ್ಯನಿರ್ವಹಿಸಲಿದೆ. ಅಮೆರಿಕ, ಬ್ರಿಟನ್, ಜಪಾನ್, ದಕ್ಷಿಣ ಕೊರಿಯಾ, ಆಸ್ಟ್ರೇಲಿಯಾ ಸೇರಿದಂತೆ ಪ್ರಮುಖ ಪ್ರಜಾಪ್ರಭುತ್ವ ರಾಷ್ಟ್ರಗಳು ಒಕ್ಕೂಟದಲ್ಲಿವೆ.

6ಜಿ ತಂತ್ರಜ್ಞಾನ ಅಭಿವೃದ್ಧಿಯಲ್ಲಿ ಸೈಬರ್ ಭದ್ರತೆ, ದತ್ತಾಂಶದ ಗೌಪ್ಯತೆ, ಮುಕ್ತ ನೆಟ್‌ವರ್ಕ್ ಮೂಲಸೌಕರ್ಯ ಹಾಗೂ ವಿಶ್ವಸನೀಯ ಕೃತಕ ಬುದ್ಧಿಮತ್ತೆ (ಎಐ)ಗೆ ಸಂಬಂಧಿಸಿದ ಮಾನದಂಡಗಳನ್ನು ರೂಪಿಸುವುದು ಮೈತ್ರಿಕೂಟದ ಪ್ರಮುಖ ಉದ್ದೇಶವಾಗಿದೆ. ಸುರಕ್ಷಿತ ಹಾಗೂ ವಿಶ್ವಾಸಾರ್ಹ ಜಾಗತಿಕ ಟೆಲಿಕಾಂ ವ್ಯವಸ್ಥೆ ನಿರ್ಮಾಣಕ್ಕೂ ಒತ್ತು ನೀಡಲಾಗುತ್ತದೆ.

ಈ ಸಹಭಾಗಿತ್ವದಿಂದ ಭಾರತೀಯ ಟೆಲಿಕಾಂ ಕಂಪನಿಗಳು, ಸಂಶೋಧನಾ ಸಂಸ್ಥೆಗಳು ಮತ್ತು ನವೋದ್ಯಮಗಳಿಗೆ 6ಜಿ ತಂತ್ರಜ್ಞಾನ ಕ್ಷೇತ್ರದಲ್ಲಿ ಜಾಗತಿಕ ಮಟ್ಟದ ಸಂಶೋಧನೆ, ಪೇಟೆಂಟ್‌ಗಳು, ಹಾರ್ಡ್‌ವೇರ್ ಮತ್ತು ಸಾಫ್ಟ್‌ವೇರ್ ಅಭಿವೃದ್ಧಿಯಲ್ಲಿ ಹೆಚ್ಚಿನ ಅವಕಾಶಗಳು ದೊರೆಯುವ ನಿರೀಕ್ಷೆಯಿದೆ.

# ಆರೋಗ್ಯ ಸಂದೇಶಕ್ಕೆ ಸಾಹಿತ್ಯದ ಸ್ಪರ್ಶ

● ವಿಕ್ರಮ ವಾಹಿನಿ | ಬೆಂಗಳೂರು

ಆರೋಗ್ಯದ ಕುರಿತ ವೈಜ್ಞಾನಿಕ ಅರಿವು ಹಾಗೂ ಜಾಗೃತಿಯನ್ನು ಜನಸಾಮಾನ್ಯರಿಗೆ ಸರಳವಾಗಿ ತಲುಪಿಸುವಲ್ಲಿ ಸಾಹಿತ್ಯ ಪರಿಣಾಮಕಾರಿ ಮಾಧ್ಯಮವಾಗಿದೆ ಎಂದು ತಜ್ಞರು ಅಭಿಪ್ರಾಯಪಟ್ಟರು.

ಕರ್ನಾಟಕ ಆರೋಗ್ಯ ಸಾಹಿತ್ಯ ಪರಿಷತ್ ಹಾಗೂ ಬೆಂಗಳೂರು ಹೆಲ್ತ್ ಫೌಂಡೇಶನ್ ಉದ್ಘಾಟನೆ ಮತ್ತು *‘ವೈದ್ಯಲೋಕ ಆರೋಗ್ಯ ಕಥೆ ಮತ್ತು ಕವನ ಸ್ಪರ್ಧೆ□2026’*ರ ಪ್ರಶಸ್ತಿ ಪ್ರದಾನ ಸಮಾರಂಭ ನಗರದ ಮಣಿಪಾಲ ಸೆಂಟರ್‌ನ ಮುಳಿಯ ಗೋಲ್ಡ್ ಅಂಡ್ ಡೈಮಂಡ್ಸ್ ಮಳಿಗೆಯಲ್ಲಿ ನಡೆಯಿತು.

ಕಾರ್ಯಕ್ರಮ ಉದ್ಘಾಟಿಸಿದ ಮುಳಿಯ ಗೋಲ್ಡ್ ಅಂಡ್ ಡೈಮಂಡ್ಸ್ ವ್ಯವಸ್ಥಾಪಕ ಎನ್. ಸುಬ್ರಹ್ಮಣ್ಯ ಭಟ್, ಆರೋಗ್ಯದ ಅರಿವು ವೈದ್ಯರ ಕೊಠಡಿಗೆ ಸೀಮಿತವಾಗದೆ ಪ್ರತಿಯೊಂದು ಮನೆಗೂ ತಲುಪಬೇಕು ಎಂದರು. ತತ್‌ಕ್ಷಣ ಆಯುರ್ವೇದ ಹಾಸ್ಪಿಟಲ್‌ನ ವ್ಯವಸ್ಥಾಪಕ ನಿರ್ದೇಶಕ ಡಾ. ಆಶಾಕಿರಣ್ ಅವರು ಕರ್ನಾಟಕ ಆರೋಗ್ಯ ಸಾಹಿತ್ಯ ಪರಿಷತ್ ಹಾಗೂ ಬೆಂಗಳೂರು ಹೆಲ್ತ್ ಫೌಂಡೇಶನ್‌ಗೆ ಚಾಲನೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ‘ವೈದ್ಯಲೋಕ’ ಸಂಪಾದಕಿ ಡಾ. ವಸುಂಧರಾ ಭೂಪತಿ, ಯುವಜನತೆ ಸಾಮಾಜಿಕ ಜಾಲತಾಣಗಳನ್ನು ಆರೋಗ್ಯ ಜಾಗೃತಿ ಮೂಡಿಸುವ ಸಕಾರಾತ್ಮಕ ಕಾರ್ಯಗಳಿಗೆ ಬಳಸಿಕೊಳ್ಳಬೇಕು. ಉತ್ತಮ ಪುಸ್ತಕ




ಮತ್ತು ನಿಯತಕಾಲಿಕೆಗಳನ್ನು ಓದುವ ಅಭ್ಯಾಸ ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ವಿಶೇಷ ಉಪನ್ಯಾಸ ನೀಡಿದ ವೈದ್ಯ-ಸಾಹಿತಿ ಡಾ. ಸುರೇಶ್ ನೆಗಳಗುಳಿ, ಇಂಟರ್‌ನೆಟ್‌ನಲ್ಲಿ ಲಕ್ಷಣಗಳನ್ನು ಹುಡುಕಿ ಸ್ವಯಂ ರೋಗನಿರ್ಣಯ ಮಾಡಿಕೊಳ್ಳುವುದು ಅಪಾಯಕಾರಿ. ಆರೋಗ್ಯ ಸಮಸ್ಯೆ ಎದುರಾದಾಗ ಅರ್ಹ ವೈದ್ಯರ ಸಲಹೆ ಪಡೆಯುವುದು ಅತ್ಯಗತ್ಯ ಎಂದರು.

### ಮೂವರಿಗೆ ‘ಆರೋಗ್ಯ ಸಾಹಿತ್ಯ ರತ್ನ’

ಆರೋಗ್ಯ ಸಾಹಿತ್ಯ ಕ್ಷೇತ್ರದ ಸೇವೆಗಾಗಿ ಡಾ. ಸುರೇಶ್ ನೆಗಳಗುಳಿ, ಡಾ. ವಸುಂಧರಾ ಭೂಪತಿ ಹಾಗೂ ಎನ್.ವಿ. ರಮೇಶ್ ಅವರಿಗೆ ‘ಆರೋಗ್ಯ ಸಾಹಿತ್ಯ ರತ್ನ’ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ನವಕರ್ನಾಟಕ ಪ್ರಕಾಶನದ ಕಾರ್ಯನಿರ್ವಾಹಕ ನಿರ್ದೇಶಕ ಯು. ಪ್ರೇಮಚಂದ್ರ, ಲೇಖಕ-ನಾಟಕಕಾರ ಎನ್.ವಿ. ರಮೇಶ್ ಹಾಗೂ ವೈದ್ಯಲೋಕ-ಹೆಲ್ತ್‌ವಿಷನ್ ವ್ಯವಸ್ಥಾಪಕ ಸಂಪಾದಕ ಶ್ರೀಕೃಷ್ಣ ಮಾಯ್ಲೆಂಗಿ ಮಾತನಾಡಿದರು.

### 500ಕ್ಕೂ ಹೆಚ್ಚು ಮಂದಿ ಸ್ಪಂದನೆ

‘ವೈದ್ಯಲೋಕ ಆರೋಗ್ಯ ಕಥೆ ಮತ್ತು ಕವನ ಸ್ಪರ್ಧೆ-2026’ಕ್ಕೆ ವೈದ್ಯರು, ಆರೋಗ್ಯ ವೃತ್ತಿಪರರು, ವೈದ್ಯಕೀಯ ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರಿಂದ ವ್ಯಾಪಕ ಸ್ಪಂದನೆ ದೊರೆತಿದ್ದು, 500ಕ್ಕೂ ಹೆಚ್ಚು ಮಂದಿ ಭಾಗವಹಿಸಿದ್ದರು. ಆರೋಗ್ಯ ಜಾಗೃತಿ, ಜೀವನಶೈಲಿ, ಆಹಾರ, ಪೌಷ್ಟಿಕತೆ ಹಾಗೂ ಆರೋಗ್ಯಕರ ಬದುಕಿನ ವಿವಿಧ ಆಯಾಮಗಳನ್ನು ಕಥೆ ಮತ್ತು ಕವನಗಳ ಮೂಲಕ ಸ್ಪರ್ಧಿಗಳು ಅಭಿವ್ಯಕ್ತಪಡಿಸಿದರು.

ಮುಂದೆಯೂ ಆರೋಗ್ಯ ಸಾಹಿತ್ಯವನ್ನು ಜನಪ್ರಿಯಗೊಳಿಸುವ ಉದ್ದೇಶದಿಂದ ವೈದ್ಯರು, ವೈದ್ಯಕೀಯ ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರನ್ನು ಒಳಗೊಂಡ ವಿವಿಧ ಸೃಜನಾತ್ಮಕ ಸ್ಪರ್ಧೆಗಳನ್ನು ಆಯೋಜಿಸಲಾಗುವುದು ಎಂದು ಆಯೋಜಕರು ತಿಳಿಸಿದರು.

# 93 ರೈತರ ಬೆಳೆ ವಿಮೆ ತಿರಸ್ಕಾರ; ಯಶವಂತಪುರ ಎಪಿಎಂಸಿಗೆ ಸಿಎಂ ದಿಢೀರ್ ಭೇಟಿ

● ವಿಕ್ರಮ ವಾಹಿನಿ | ಬೆಂಗಳೂರು

ರೈತರು ಬೆಳೆ ವಿಮೆಗೆ ಪಾವತಿಸಿದ್ದ ಹಣವನ್ನು ಡಿಸಿಸಿ ಬ್ಯಾಂಕ್‌ಗೆ ಜಮಾ ಮಾಡದೆ 93 ರೈತರ ವಿಮೆ ತಿರಸ್ಕೃತವಾಗಿರುವ ಪ್ರಕರಣಕ್ಕೆ ಸಂಬಂಧಿಸಿದಂತೆ ನಿರ್ಲಕ್ಷ್ಯ ವಹಿಸಿದ ಸ್ವಸಹಾಯ ಸೊಸೈಟಿ ಕಾರ್ಯದರ್ಶಿಯನ್ನು ವಜಾಗೊಳಿಸುವಂತೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅಧಿಕಾರಿಗಳಿಗೆ ಸೂಚಿಸಿದರು.

ಮಂಗಳವಾರ ಬೆಳಗ್ಗೆ ಯಶವಂತಪುರ ಎಪಿಎಂಸಿಗೆ ದಿಢೀರ್ ಭೇಟಿ ನೀಡಿದ ಅವರು ಈರುಳ್ಳಿ, ಬೆಳ್ಳುಳ್ಳಿ, ಆಲೂಗಡ್ಡೆ ಹಾಗೂ ತೆಂಗು ಬೆಳೆಗಾರರು, ವರ್ತಕರು ಮತ್ತು ಮಂಡಿ ಮಾಲೀಕರೊಂದಿಗೆ ಮಾತುಕತೆ ನಡೆಸಿ ಸಮಸ್ಯೆಗಳನ್ನು ಆಲಿಸಿದರು. ದೇವರಹಿಪ್ಪರಗಿ ತಾಲ್ಲೂಕಿನ ರೈತರೊಬ್ಬರು ವಿಮೆ ಹಣ ಪಾವತಿಸಿದ್ದರೂ ಸೊಸೈಟಿ ಅದನ್ನು ಡಿಸಿಸಿ ಬ್ಯಾಂಕ್‌ಗೆ ಜಮಾ ಮಾಡದ ಕಾರಣ ವಿಮೆ ತಿರಸ್ಕೃತಗೊಂಡಿರುವುದಾಗಿ ತಿಳಿಸಿದರು. ದಾಖಲೆಗಳನ್ನು ಪರಿಶೀಲಿಸಿದ ಸಿಎಂ, ತಪ್ಪಿತಸ್ಥರ ವಿರುದ್ಧ ತಕ್ಷಣ ಕ್ರಮಕ್ಕೆ ಸೂಚಿಸಿದರು.

ಮಾರುಕಟ್ಟೆಯಲ್ಲಿ ಈರುಳ್ಳಿ ತೂಕ, ಕಮಿಷನ್, ರೈತರಿಗೆ ಹಣ ಪಾವತಿ ಹಾಗೂ ಬೆಳೆ ಉತ್ಪಾದನಾ ವೆಚ್ಚದ ಬಗ್ಗೆ ಮಾಹಿತಿ ಪಡೆದ ಶಿವಕುಮಾರ್, ಖುದ್ದಾಗಿ ಈರುಳ್ಳಿ ಚೀಲಗಳ ತೂಕ ಪರಿಶೀಲಿಸಿದರು. ಕಲಬುರಗಿ, ಬೀದರ್ ಹಾಗೂ ವಿಜಯಪುರ ಮಾರುಕಟ್ಟೆಗಳಲ್ಲಿ ರೂ 8ರಿಂದ ರೂ 10ರವರೆಗೆ ಕಮಿಷನ್ ಪಡೆಯಲಾಗುತ್ತಿದ್ದು, ಯಶವಂತಪುರದಲ್ಲಿ ಕಮಿಷನ್ ಪಡೆಯುತ್ತಿಲ್ಲ ಎಂದು ರೈತರು ತಿಳಿಸಿದರು.

ಮಳೆ ಕೊರತೆಯಿಂದ ಈರುಳ್ಳಿ ಇಳುವರಿ ಎಕರೆಗೆ 150-200 ಪ್ಯಾಕೆಟ್‌ನಿಂದ ಸುಮಾರು 50 ಪ್ಯಾಕೆಟ್‌ಗೆ ಕುಸಿದಿದೆ ಎಂದು ರೈತರು ಅಳಲು ತೋಡಿಕೊಂಡರು. ಚಿತ್ರದುರ್ಗದ ಚಳ್ಳಕೆರೆ ರೈತರೊಬ್ಬರು ಹೆಕ್ಟೇರ್‌ಗೆ ರೂ 6,500 ವಿಮೆ ಪಾವತಿಸಿದ್ದರೂ



ಪರಿಹಾರ ದೊರೆತಿಲ್ಲ ಎಂದು ತಿಳಿಸಿದ್ದು, ಪರಿಶೀಲಿಸಿ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸಿಎಂ ಸೂಚಿಸಿದರು.

ಮಾರುಕಟ್ಟೆಯಲ್ಲಿ ಮಕ್ಕಳನ್ನು ಕೆಲಸಕ್ಕೆ ಬಳಸುತ್ತಿರುವುದನ್ನು ಗಮನಿಸಿದ ಸಿಎಂ, ಮಕ್ಕಳನ್ನು ಕೆಲಸಕ್ಕೆ ನೇಮಿಸಿದವರು ಹಾಗೂ ಕಳುಹಿಸಿದವರ ವಿರುದ್ಧ ತಕ್ಷಣ ಕ್ರಮ ಕೈಗೊಳ್ಳುವಂತೆ ಪೊಲೀಸರಿಗೆ ಸೂಚಿಸಿದರು. ಸಂಜೆ ವೇಳೆಗೆ ಬಂಧನವಾಗಬೇಕು; ವಿಫಲರಾದರೆ ಪೊಲೀಸ್ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವುದಾಗಿ ಎಚ್ಚರಿಸಿದರು. ರೈತರಿಂದ ನೇರವಾಗಿ ಉತ್ಪನ್ನ ಖರೀದಿಸುವ ಕೆಲವರು ತೂಕದಲ್ಲಿ ವಂಚನೆ ಮಾಡುತ್ತಿರುವ ದೂರುಗಳ ಬಗ್ಗೆಯೂ ಕ್ರಮಕ್ಕೆ ಸೂಚಿಸಿದ ಸಿಎಂ, ಮಂಡಿ ವರ್ತಕರಿಂದ ಹೆಚ್ಚುವರಿ ಶುಲ್ಕ ವಸೂಲಿ ಮಾಡದಂತೆ ಎಚ್ಚರಿಸಿದರು.

ಇದೇ ವೇಳೆ ಗೃಹಲಕ್ಷ್ಮಿ ಯೋಜನೆಯ ರೂ 2 ಸಾವಿರ ಹಾಗೂ ಅನ್ನಭಾಗ್ಯದ 10 ಕೆ.ಜಿ. ಅಕ್ಕಿ ದೊರೆಯುತ್ತಿದೆಯೇ ಎಂದು ರೈತರನ್ನು ವಿಚಾರಿಸಿದ ಅವರು, ಯೋಜನೆಗಳಿಂದಾಗುತ್ತಿರುವ ಅನುಕೂಲದ ಬಗ್ಗೆ ಮಾಹಿತಿ ಪಡೆದರು. ಮಾರುಕಟ್ಟೆಗೆ ದಿಢೀರ್ ಭೇಟಿ ನೀಡಿ ಸಮಸ್ಯೆಗಳನ್ನು ನೇರವಾಗಿ ಆಲಿಸಿದ ಸಿಎಂ ಕ್ರಮಕ್ಕೆ ರೈತರು ಮೆಚ್ಚುಗೆ ವ್ಯಕ್ತಪಡಿಸಿದರು.

www.VIKRAMAVAHINI.com
ಕನ್ನಡ ದಿನಪತ್ರಿಕೆ
PRGI NO: KARKAN/2018/78481
ವಿಕ್ರಮ ವಾಹಿನಿ

# “ಗ್ಯಾರಂಟಿಯೂ ಜಾರಿ, ರಾಜ್ಯದ ಅಭಿವೃದ್ಧಿಯೂ ಖಾತ್ರಿ”


● ವಿಕ್ರಮ ವಾಹಿನಿ | ಮೆಹಕರ್ (ಬೀದರ್)

ಕೇಂದ್ರ ಸರ್ಕಾರ ಪೆಟ್ರೋಲ್, ಡೀಸೆಲ್ ಸೇರಿದಂತೆ ಅಗತ್ಯ ವಸ್ತುಗಳ ಬೆಲೆ ಹೆಚ್ಚಿಸಿದರೂ ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳಿಂದ ಜನರು ಬೆಲೆ ಏರಿಕೆಯ ಹೊರೆ ತಡೆದುಕೊಳ್ಳಲು ಸಾಧ್ಯವಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಬೀದರ್ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ. ಖಂಡ್ರೆ ಹೇಳಿದರು.

ಭಾಲ್ಕಿ ತಾಲ್ಲೂಕಿನ ಮೆಹಕರ್‌ನಲ್ಲಿ ನಡೆದ ತಾಲೂಕು ಮಟ್ಟದ ಪ್ರಜಾಸೇವೆ ಆಂದೋಲನ ಉದ್ಘಾಟಿಸಿ ಮಾತನಾಡಿದ ಅವರು, ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿದರೆ ರಾಜ್ಯ ದಿವಾಳಿಯಾಗುತ್ತದೆ ಎಂದು ಪ್ರತಿಪಕ್ಷಗಳು ಟೀಕಿಸಿದ್ದವು. ಆದರೆ ಕಾಂಗ್ರೆಸ್ ಸರ್ಕಾರ ಗ್ಯಾರಂಟಿ ಯೋಜನೆಗಳನ್ನು ಯಶಸ್ವಿಯಾಗಿ ಜಾರಿಗೊಳಿಸುವುದರ ಜೊತೆಗೆ ರಾಜ್ಯದ ಅಭಿವೃದ್ಧಿಗೂ ಆದ್ಯತೆ ನೀಡಿದೆ. ಇದಕ್ಕೆ ರೂ 4.5 ಕೋಟಿ ವೆಚ್ಚದಲ್ಲಿ ನಿರ್ಮಿಸಿರುವ ಮೆಹಕರ್ ಸರ್ಕಾರಿ ಪ್ರಾಥಮಿಕ ಶಾಲೆಯ ನೂತನ ಕಟ್ಟಡವೇ ಸಾಕ್ಷಿ ಎಂದರು.

ಚುನಾವಣೆ ಪೂರ್ವದಲ್ಲಿ ನೀಡಿದ್ದ ಐದು ಗ್ಯಾರಂಟಿಗಳನ್ನು ಸರ್ಕಾರ ನುಡಿದಂತೆ ಜಾರಿಗೊಳಿಸಿದೆ. ಗ್ಯಾರಂಟಿ ಯೋಜನೆಗಳ ಜನಪ್ರಿಯತೆಯಿಂದ ಪ್ರತಿಪಕ್ಷಗಳು ಕಂಗೆಟ್ಟಿವೆ ಎಂದು ಅವರು ಟೀಕಿಸಿದರು.

ಬೀದರ್ ಜಿಲ್ಲೆಯಲ್ಲಿ ಗೃಹಲಕ್ಷ್ಮೀ ಯೋಜನೆಯಡಿ 3,64,287 ಫಲಾನುಭವಿಗಳಿಗೆ 2023ರ ಆಗಸ್ಟ್‌ನಿಂದ 2026ರ ಜೂನ್‌ವರೆಗೆ ರೂ 2,092.92 ಕೋಟಿ ಪಾವತಿಸಲಾಗಿದೆ. ಅನ್ನಭಾಗ್ಯ ಯೋಜನೆಯಡಿ 13,13,205 ಫಲಾನುಭವಿಗಳಿಗೆ 2023ರ ಜುಲೈನಿಂದ




2024ರ ಡಿಸೆಂಬರ್‌ವರೆಗೆ ಹೆಚ್ಚುವರಿ ಅಕ್ಕಿಯ ಬದಲಾಗಿ ರೂ 333.28 ಕೋಟಿ ನೀಡಲಾಗಿದೆ ಎಂದರು.

ಅದೇ ರೀತಿ ಗೃಹಜ್ಯೋತಿ ಯೋಜನೆಯಡಿ 3,59,120 ಫಲಾನುಭವಿಗಳಿಗೆ ರೂ 589.23 ಕೋಟಿ ಪಾವತಿಸಲಾಗಿದೆ. ಶಕ್ತಿ ಯೋಜನೆಯಡಿ ಜಿಲ್ಲೆಯಲ್ಲಿ 13.89 ಕೋಟಿ ಮಹಿಳೆಯರು ಉಚಿತ ಬಸ್ ಪ್ರಯಾಣದ ಸೌಲಭ್ಯ ಪಡೆದಿದ್ದು, ನಿರುದ್ಯೋಗಿ ಯುವಜನರಿಗಾಗಿ ರೂ 57.12 ಕೋಟಿ ವೆಚ್ಚ ಮಾಡಲಾಗಿದೆ ಎಂದು ತಿಳಿಸಿದರು.

**ರೂ 5 ಕೋಟಿ ರಸ್ತೆ ಕಾಮಗಾರಿಗೆ ಚಾಲನೆ**

ಸಯಗಾವ್ ಮಾರ್ಗವಾಗಿ ಭಾಲ್ಕಿ-ಮೆಹಕರ್ ರಸ್ತೆ ಅಭಿವೃದ್ಧಿಗೆ ರೂ 5 ಕೋಟಿ ಮಂಜೂರಾಗಿದ್ದು, ಕಾಮಗಾರಿಗೆ ಚಾಲನೆ ನೀಡಲಾಗಿದೆ. ಮೆಹಕರ್‌ನಲ್ಲಿ ಉತ್ತಮ ರಸ್ತೆ, ಆರೋಗ್ಯ ಕೇಂದ್ರ ಹಾಗೂ ಶಾಲಾ ಕಟ್ಟಡ ಸೇರಿದಂತೆ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ ಎಂದು ಸಚಿವರು ಹೇಳಿದರು.

ಮೆಹಕರ್‌ನಲ್ಲಿ ನಡೆಯುತ್ತಿರುವ ಅಭಿವೃದ್ಧಿ ಕಾರ್ಯಗಳನ್ನು ಕಂಡು, ಕರ್ನಾಟಕದಲ್ಲೇ ಉಳಿದಿರುವುದು ಉತ್ತಮವಾಯಿತು ಎಂಬ ಹೆಮ್ಮೆ ಇಲ್ಲಿನ ಜನರಲ್ಲಿ ಮೂಡಿದೆ ಎಂದು ಖಂಡ್ರೆ ಹೇಳಿದರು.

**ಗ್ರಾಮದಲ್ಲೇ ಸಾರ್ವಜನಿಕ ಸೇವೆ**

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ನೇತೃತ್ವದಲ್ಲಿ ಪ್ರಜಾಸೇವೆ ಆಂದೋಲನ ಆರಂಭಿಸಲಾಗಿದ್ದು, ವಿವಿಧ ಇಲಾಖೆಗಳ ಅಧಿಕಾರಿಗಳು ಗ್ರಾಮಗಳಿಗೆ ಆಗಮಿಸಿ ಸಾರ್ವಜನಿಕರ ಅಹವಾಲುಗಳನ್ನು ಸ್ವೀಕರಿಸುತ್ತಿದ್ದಾರೆ. ಪಿಂಚಣಿ, ವಿಧವಾ ವೇತನ, ಸಂಧ್ಯಾ ಸುರಕ್ಷಾ, ಪೋಡಿ, 11ಇ ಸ್ಕೆಚ್, ವಸತಿ, ನಿವೇಶನ, ಅಂಗನವಾಡಿ, ಶಾಲಾ ಕಟ್ಟಡ, ದೇವಾಲಯಗಳ ಜೀರ್ಣೋದ್ಧಾರ, ಉದ್ಯೋಗ ಹಾಗೂ ಪೊಲೀಸ್ ಸೇವೆ ಸೇರಿದಂತೆ ವಿವಿಧ ಸಮಸ್ಯೆಗಳಿಗೆ ಸ್ಥಳದಲ್ಲೇ ಪರಿಹಾರ ಕಲ್ಪಿಸಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದರು.

ತಾವು ಪ್ರತಿ ತಿಂಗಳು ಎರಡು ಶನಿವಾರ ಬೀದರ್ ಜಿಲ್ಲೆಯಲ್ಲಿ ಪ್ರಜಾಸೇವೆ ಆಂದೋಲನದಲ್ಲಿ ಭಾಗವಹಿಸಿ, ದಲ್ಲಾಳಿ ಮತ್ತು ಮಧ್ಯವರ್ತಿಗಳ ಹಾವಳಿ ಇಲ್ಲದೆ ಭ್ರಷ್ಟಾಚಾರಮುಕ್ತವಾಗಿ ಸಾರ್ವಜನಿಕ ಸೇವೆ ದೊರೆಯುವಂತೆ ಕ್ರಮವಹಿಸುವುದಾಗಿ ಭರವಸೆ ನೀಡಿದರು.

**ಮಳೆ ಕೊರತೆ; ಬರ ಘೋಷಣೆ ನಿರೀಕ್ಷೆ**

ಎಲ್‌ನಿನೊ ಪರಿಣಾಮದಿಂದ ಈ ಬಾರಿ ರಾಜ್ಯದಲ್ಲಿ ಮಳೆ ಪ್ರಮಾಣ ಕಡಿಮೆಯಾಗಿದೆ. ಕೇಂದ್ರ ಸರ್ಕಾರದ ನಿಯಮಗಳನ್ವಯ ರಾಜ್ಯದ ಹಲವು ಜಿಲ್ಲೆಗಳನ್ನು ಬರಪೀಡಿತ ಎಂದು ಘೋಷಿಸುವ ಪ್ರಕ್ರಿಯೆ ನಡೆದಿದೆ. ಶೀಘ್ರದಲ್ಲೇ ಭಾಲ್ಕಿ ಪ್ರದೇಶವನ್ನೂ ಬರಪೀಡಿತವೆಂದು ಘೋಷಿಸುವ ನಿರೀಕ್ಷೆಯಿದೆ ಎಂದು ಸಚಿವರು ತಿಳಿಸಿದರು. ಮೆಹಕರ್ ಸರ್ಕಾರಿ ಆಸ್ಪತ್ರೆಗೆ ಪ್ರಸೂತಿ ತಜ್ಞರು ಹಾಗೂ ಮಕ್ಕಳ ತಜ್ಞ ವೈದ್ಯರನ್ನು ನೇಮಕ ಮಾಡಲಾಗಿದೆ. ಸಚಿವನಾಗಿ ವಿವಿಧ ಜಿಲ್ಲೆಗಳಿಗೆ ಪ್ರವಾಸ ಮಾಡಬೇಕಾಗಿರುವುದರಿಂದ ನಿರೀಕ್ಷಿತ ಪ್ರಮಾಣದಲ್ಲಿ ಕ್ಷೇತ್ರಕ್ಕೆ ಭೇಟಿ ನೀಡಲು ಸಾಧ್ಯವಾಗದಿದ್ದರೂ, ಭಾಲ್ಕಿ ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ನಿರಂತರವಾಗಿ ಶ್ರಮಿಸುತ್ತಿರುವುದಾಗಿ ಹೇಳಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಡಿ. ರಂದೀಪ್, ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಗಿತ್ತೆ ವಿಠ್ಠಲ ಮಾಧವರಾವ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ್ ಗುಂಟಿ, ಗ್ಯಾರಂಟಿ ಸಮಿತಿ ಅಧ್ಯಕ್ಷ ಚಿಮಕೋಡ್, ಅರಣ್ಯ ಅಭಿವೃದ್ಧಿ ನಿಗಮದ ಹನುಮಂತರಾವ್ ಚವ್ಹಾಣ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಭ್ರಷ್ಟ ಸರ್ಕಾರ ತೊಲಗಲಿ: ಬಿ.ವೈ. ರಾಘವೇಂದ್ರ



● ವಿಕ್ರಮ ವಾಹಿನಿ | ಸಂಡೂರು

ಸುಳ್ಳು ಭರವಸೆಗಳನ್ನು ನೀಡಿ ಅಧಿಕಾರಕ್ಕೆ ಬಂದಿರುವ ಭ್ರಷ್ಟ ಕಾಂಗ್ರೆಸ್ ಸರ್ಕಾರ ತೊಲಗಬೇಕು ಎಂಬ ಉದ್ದೇಶದಿಂದ ಜನರ ಪರವಾಗಿ ಪಾದಯಾತ್ರೆ ನಡೆಸಲಾಗುತ್ತಿದೆ ಎಂದು ಸಂಸದ ಬಿ.ವೈ. ರಾಘವೇಂದ್ರ ಹೇಳಿದರು.

ಬಳ್ಳಾರಿ ಚಲೋ ಪಾದಯಾತ್ರೆಯ ಏಳನೇ ದಿನದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಕಾಂಗ್ರೆಸ್ ದೀರ್ಘಕಾಲ ಆಡಳಿತ ನಡೆಸಿದ್ದರೂ ಹಿಂದುಳಿದ ವರ್ಗಗಳು, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಭಿವೃದ್ಧಿಗೆ ಅಗತ್ಯವಾದ ಕೆಲಸ ಮಾಡಿಲ್ಲ ಎಂದು ಆರೋಪಿಸಿದರು.

ಬಿ.ಎಸ್. ಯಡಿಯೂರಪ್ಪ ಮುಖ್ಯಮಂತ್ರಿಯಾಗಿದ್ದ ಅವಧಿಯಲ್ಲಿ ಕನಕ ಜಯಂತಿ, ವಾಲ್ಮೀಕಿ ಜಯಂತಿ ಆಚರಣೆ, ಎಸ್‌ಸಿ-ಎಸ್‌ಟಿ ಅಭಿವೃದ್ಧಿ ನಿಗಮಗಳ ಸ್ಥಾಪನೆ, ಭೋವಿ ಅಭಿವೃದ್ಧಿ ನಿಗಮಕ್ಕೆ ಚಾಲನೆ ಹಾಗೂ ಮಠ-ಮಂದಿರಗಳಿಗೆ ಅನುದಾನ ನೀಡಲಾಗಿದೆ. ರೈತರಿಗೆ ಹಾಲಿನ ಪ್ರೋತ್ಸಾಹಧನ ನೀಡುವ ಮೂಲಕ ಜನಪರ ಆಡಳಿತಕ್ಕೆ ಆದ್ಯತೆ ನೀಡಲಾಗಿತ್ತು ಎಂದು ಹೇಳಿದರು.

ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ರೈತರಿಗೆ ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ಯೋಜನೆ ಜಾರಿಗೊಳಿಸಿದ್ದು, ರಸಗೊಬ್ಬರಕ್ಕೆ ಸಹಾಯಧನ ನೀಡುವ ಮೂಲಕ ರೈತರಿಗೆ ನೆರವಾಗಿದೆ ಎಂದು ರಾಘವೇಂದ್ರ ತಿಳಿಸಿದರು.

**ಗ್ಯಾರಂಟಿಗಳ ಜಾರಿಯಲ್ಲಿ ವಿಫಲ: ಆರೋಪ**

ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬರುವ ಮುನ್ನ ಘೋಷಿಸಿದ್ದ ಐದು ಗ್ಯಾರಂಟಿ ಯೋಜನೆಗಳನ್ನು ಸಮರ್ಪಕವಾಗಿ ಜಾರಿಗೊಳಿಸಿಲ್ಲ. ಗೃಹಲಕ್ಷ್ಮಿ, ಶಕ್ತಿ, ಯುವನಿಧಿ ಹಾಗೂ ಅನ್ನಭಾಗ್ಯ ಯೋಜನೆಗಳ ಅನುಷ್ಠಾನದಲ್ಲಿ ಜನರಿಗೆ ತೊಂದರೆಯಾಗುತ್ತಿದೆ ಎಂದು ಆರೋಪಿಸಿದರು. ಕೇಂದ್ರ ಸರ್ಕಾರ ನೀಡುತ್ತಿರುವ ಅಕ್ಕಿಯನ್ನೇ ರಾಜ್ಯ ಸರ್ಕಾರದ ಕೊಡುಗೆ ಎಂಬಂತೆ ಬಿಂಬಿಸಲಾಗುತ್ತಿದೆ ಎಂದು ಟೀಕಿಸಿದರು.

ಭ್ರಷ್ಟಾಚಾರದ ಹಣವನ್ನು ವಾಪಸ್ ಪಡೆದು ಬಡವರ ಕಲ್ಯಾಣ ಹಾಗೂ ರೈತರ ನೆರವಿಗೆ ಬಳಸಬೇಕು ಎಂಬ ಆಗ್ರಹದೊಂದಿಗೆ ಪಾದಯಾತ್ರೆ ನಡೆಸಲಾಗುತ್ತಿದೆ. ವಿಜಯೇಂದ್ರ ಅವರ ನೇತೃತ್ವದಲ್ಲಿ ಪಾದಯಾತ್ರೆ ಯಶಸ್ವಿಯಾಗಿ ಸಾಗುತ್ತಿದ್ದು, ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಉತ್ತಮ ಬೆಂಬಲ ನೀಡುತ್ತಿದ್ದಾರೆ ಎಂದು ಅವರು ಹೇಳಿದರು. ಮುಂದಿನ ದಿನಗಳಲ್ಲಿ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸಿ, ಸರ್ಕಾರದ ವಿರುದ್ಧ ಜನಜಾಗೃತಿ ಮೂಡಿಸಲಾಗುವುದು ಎಂದು ಅವರು ತಿಳಿಸಿದರು.

# ಬೆಂಗಳೂರು ರಸ್ತೆ ಸ್ವಚ್ಛತೆಗೆ ತಂತ್ರಜ್ಞಾನ ಸ್ಪರ್ಶ

● ವಿಕ್ರಮ ವಾಹಿನಿ | ಬೆಂಗಳೂರು

ನಗರದ ಪ್ರಮುಖ ರಸ್ತೆಗಳಲ್ಲಿ ಧೂಳು, ಮಣ್ಣು ಹಾಗೂ ಕಸಕ್ಕೆ ಕಡಿವಾಣ ಹಾಕಲು ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಜಿಬಿಎ) ಅತ್ಯಾಧುನಿಕ ಮೆಕ್ಯಾನಿಕಲ್ ಸ್ವೀಪಿಂಗ್ ಯಂತ್ರಗಳನ್ನು ಬಳಸಲು ಮುಂದಾಗಿದೆ. ದಕ್ಷಿಣ ಹಾಗೂ ಉತ್ತರ ಬೆಂಗಳೂರು ವ್ಯಾಪ್ತಿಯ ಆರ್ಟಿರಿಯಲ್ ಮತ್ತು ಸಬ್‌ಆರ್ಟಿರಿಯಲ್ ರಸ್ತೆಗಳಲ್ಲಿ ಈಗಾಗಲೇ ಯಂತ್ರಗಳ ಪ್ರಾಯೋಗಿಕ ಪರೀಕ್ಷೆ ನಡೆಯುತ್ತಿದೆ.

ಕ್ಯಾಬಿನೆಟ್ ಅನುಮೋದನೆಯಂತೆ ಒಟ್ಟು 48 ಯಂತ್ರಗಳನ್ನು ಖರೀದಿಸಲು ನಿರ್ಧರಿಸಲಾಗಿದ್ದು, ಶೀಘ್ರದಲ್ಲೇ ಟೆಂಡರ್ ಪ್ರಕ್ರಿಯೆ ಆರಂಭವಾಗಲಿದೆ. ಔಟರ್ ರಿಂಗ್ ರೋಡ್, ವೈಟ್‌ಫೀಲ್ಡ್-ಎಲೆಕ್ಟ್ರಾನಿಕ್ ಸಿಟಿ ಮುಖ್ಯ ರಸ್ತೆ ಹಾಗೂ ಕೆಲವು ಮೇಲ್ಸೇತುವೆಗಳಲ್ಲಿ ಯಂತ್ರಗಳ ಕಾರ್ಯಕ್ಷಮತೆ ಪರಿಶೀಲಿಸಲಾಗಿದೆ.

ಐದು ದಿನಗಳ ಟ್ರಯಲ್‌ನಲ್ಲಿ ಯಂತ್ರಗಳ ಸ್ವಚ್ಛತಾ ಸಾಮರ್ಥ್ಯ ಮತ್ತು ಕಾರ್ಯಕ್ಷಮತೆಯನ್ನು ತಾಂತ್ರಿಕ ತಂಡ ಮೌಲ್ಯಮಾಪನ ಮಾಡಲಿದೆ. ವ್ಯವಸ್ಥೆ ಪೂರ್ಣ ಪ್ರಮಾಣದಲ್ಲಿ ಜಾರಿಯಾದರೆ ಪ್ರಮುಖ ರಸ್ತೆಗಳಲ್ಲಿ ಧೂಳಿನ ಪ್ರಮಾಣ ಕಡಿಮೆಯಾಗುವುದರ ಜತೆಗೆ ರಸ್ತೆ ಸ್ವಚ್ಛತೆ ಹಾಗೂ ಸಾರ್ವಜನಿಕರಿಗೆ ಸಂಚಾರ ಅನುಕೂಲತೆ ಸುಧಾರಿಸುವ ನಿರೀಕ್ಷೆಯಿದೆ.

# ಮೊದಲ ಬಾರಿಗೆ ರಾಜ್ಯ ಮಟ್ಟದ ‘ಕರ್ನಾಟಕ ಟೂರಿಸಂ ಅವಾರ್ಡ್ಸ್’



● ವಿಕ್ರಮ ವಾಹಿನಿ | ಬೆಂಗಳೂರು

ರಾಜ್ಯದ ಪ್ರವಾಸೋದ್ಯಮ ಕ್ಷೇತ್ರದಲ್ಲಿ ಅತ್ಯುತ್ತಮ ಸಾಧನೆ ಮಾಡುತ್ತಿರುವ ಸಂಸ್ಥೆಗಳು, ಉದ್ಯಮಿಗಳು ಹಾಗೂ ವ್ಯಕ್ತಿಗಳನ್ನು ಗುರುತಿಸಲು ಪ್ರವಾಸೋದ್ಯಮ ಇಲಾಖೆ ಇದೇ ಮೊದಲ ಬಾರಿಗೆ ರಾಜ್ಯಮಟ್ಟದ ‘ಕರ್ನಾಟಕ ಟೂರಿಸಂ ಅವಾರ್ಡ್ಸ್-2026’ ಆಯೋಜಿಸುತ್ತಿದೆ ಎಂದು ಪ್ರವಾಸೋದ್ಯಮ ಸಚಿವ ಕೆ.ಜೆ. ಜಾರ್ಜ್ ತಿಳಿಸಿದ್ದಾರೆ.

ಕರ್ನಾಟಕ ಪ್ರವಾಸೋದ್ಯಮ ಇಲಾಖೆ ಹಾಗೂ ಕರ್ನಾಟಕ ಟೂರಿಸಂ ಸೊಸೈಟಿ ಸಹಯೋಗದಲ್ಲಿ ನಡೆಯಲಿರುವ ಪ್ರಶಸ್ತಿಗಳು ಸೇವಾ ಗುಣಮಟ್ಟ, ನಾವೀನ್ಯತೆ, ಸುಸ್ಥಿರತೆ ಹಾಗೂ ಸ್ಥಳೀಯ ಸಮುದಾಯದ ಕೊಡುಗೆಯನ್ನು ಗುರುತಿಸುವ ಉದ್ದೇಶ ಹೊಂದಿವೆ. ‘One State, Many World’ ಪರಿಕಲ್ಪನೆಯಡಿ ರಾಜ್ಯದ 31 ಜಿಲ್ಲೆಗಳ ಪ್ರವಾಸೋದ್ಯಮ ಕ್ಷೇತ್ರದ ವೈವಿಧ್ಯಮಯ ಸಾಧನೆಗಳಿಗೆ ವೇದಿಕೆ ಕಲ್ಪಿಸಲಾಗುತ್ತಿದೆ.

**ಐದು ವಿಭಾಗಗಳಲ್ಲಿ 35 ಪ್ರಶಸ್ತಿ**

Accommodation & Hospitality, Tour Operators & Travel Agents, Events, Venues & Infrastructure, Education, Publications & Individuals ಹಾಗೂ Sustainability & Rural Tourism ಎಂಬ ಐದು ಪ್ರಮುಖ ವಿಭಾಗಗಳಲ್ಲಿ ಒಟ್ಟು 35 ಪ್ರಶಸ್ತಿಗಳನ್ನು ನೀಡಲಾಗುವುದು.

ಹೋಟೆಲ್, ರೆಸಾರ್ಟ್, ಪ್ರವಾಸ ನಿರ್ವಹಣಾ ಸಂಸ್ಥೆಗಳು, ಪ್ರವಾಸಿ ಮಾರ್ಗದರ್ಶಕರು, ಸಾಹಸ ಪ್ರವಾಸೋದ್ಯಮ, ಹೋಂಸ್ಟೇ, ಪ್ರವಾಸೋದ್ಯಮ ಸ್ಟಾರ್ಟ್‌ಅಪ್‌ಗಳು, ತಂತ್ರಜ್ಞಾನ ಸಂಸ್ಥೆಗಳು, ಲೇಖಕರು, ಶಿಕ್ಷಣ ಸಂಸ್ಥೆಗಳು ಹಾಗೂ ಸುಸ್ಥಿರ ಮತ್ತು ಗ್ರಾಮೀಣ ಪ್ರವಾಸೋದ್ಯಮ ಕ್ಷೇತ್ರದ ಸಾಧಕರನ್ನು ಪ್ರಶಸ್ತಿಗೆ ಪರಿಗಣಿಸಲಾಗುವುದು.

ಪ್ರವಾಸಿಗರ ಅನುಭವ, ಸೇವಾ ಗುಣಮಟ್ಟ, ನಾವೀನ್ಯತೆ, ಪರಿಸರ ಸಂರಕ್ಷಣೆ ಹಾಗೂ ಸ್ಥಳೀಯ ಸಮುದಾಯದ ಅಭಿವೃದ್ಧಿಗೆ ನೀಡಿರುವ ಕೊಡುಗೆಗಳನ್ನು ಆಧರಿಸಿ ಪ್ರಶಸ್ತಿಗೆ ಆಯ್ಕೆ ಮಾಡಲಾಗುವುದು. ಉದ್ಯಮದ ಹಿರಿಯರು ಹಾಗೂ ವಿಷಯ ತಜ್ಞರನ್ನು ಒಳಗೊಂಡ ಸ್ವತಂತ್ರ ಸ್ಕ್ರೀನಿಂಗ್ ಸಮಿತಿಯು ಅರ್ಹತೆ ಆಧಾರದ ಮೇಲೆ ಆಯ್ಕೆ ಪ್ರಕ್ರಿಯೆ ನಡೆಸಲಿದೆ ಎಂದು ಕರ್ನಾಟಕ ಟೂರಿಸಂ ಸೊಸೈಟಿ ಅಧ್ಯಕ್ಷ ಕೆ. ಶ್ಯಾಮರಾಜು ತಿಳಿಸಿದ್ದಾರೆ.

ಸೆ.17ರವರೆಗೆ ನಾಮನಿರ್ದೇಶನ: ಅರ್ಹ ಸಂಸ್ಥೆಗಳು ಹಾಗೂ ವ್ಯಕ್ತಿಗಳು ಸೆ.17ರ ರಾತ್ರಿ 11.59ರವರೆಗೆ ನಾಮನಿರ್ದೇಶನ ಸಲ್ಲಿಸಬಹುದು. ವಿಶ್ವ ಪ್ರವಾಸೋದ್ಯಮ ದಿನವಾದ ಸೆ.27ರಂದು ಬೆಂಗಳೂರಿನಲ್ಲಿ ಪ್ರಶಸ್ತಿ ಪ್ರದಾನ ಸಮಾರಂಭ ನಡೆಯಲಿದೆ.

# ಪ್ರಜಾಪ್ರಭುತ್ವದಲ್ಲಿ ಹೋರಾಟ ಪ್ರತಿಯೊಬ್ಬರ ಹಕ್ಕು; ಇದು ಜನಪರ ಹೋರಾಟ

● ವಿಕ್ರಮ ವಾಹಿನಿ | ಬಳ್ಳಾರಿ

ರಾಜ್ಯ ಕಾಂಗ್ರೆಸ್ ಸರ್ಕಾರದ ವಿರುದ್ಧ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರ ನೇತೃತ್ವದಲ್ಲಿ ನಡೆಯುತ್ತಿರುವ ‘ಬಳ್ಳಾರಿ ಚಲೋ’ ಪಾದಯಾತ್ರೆ ಇಂದು 8ನೇ ದಿನಕ್ಕೆ ಕಾಲಿಟ್ಟಿದ್ದು, ದಿನದಿಂದ ದಿನಕ್ಕೆ ಜನಸಾಗರದ ಬೆಂಬಲ ಮತ್ತು ಆಶೀರ್ವಾದದೊಂದಿಗೆ ಮತ್ತಷ್ಟು ಪ್ರಬಲ ಜನಾಂದೋಲನವಾಗಿ ರೂಪುಗೊಳ್ಳುತ್ತಿದೆ.

ಹಳೇ ದರೋಜಿಯಿಂದ ಪಾದಯಾತ್ರೆ ಆರಂಭಕ್ಕೂ ಮುನ್ನ ಸಂಡೂರು ತಾಲೂಕಿನ ದರೋಜಿ ಈರಮ್ಮ ಅವರ ಸಮಾಧಿಗೆ ಭೇಟಿ ನೀಡಿ ಗೌರವ ಸಲ್ಲಿಸಿದ ಬಿ.ವೈ. ವಿಜಯೇಂದ್ರ ಅವರು, ಬಳಿಕ ರಾಮಾಯಣ, ಮಹಾಭಾರತ ಹಾಗೂ ವಿವಿಧ ಜಾನಪದ ಕಥೆಗಳನ್ನು ಹಗಲು ವೇಷಗಾರರಾಗಿ ಬಿತ್ತರಿಸುತ್ತಾ ತಮ್ಮ ವೃತ್ತಿಜೀವನ ನಡೆಸುತ್ತಿರುವ ಅಲೆಮಾರಿ ಬುಡ್ಗ ಜಂಗಮ ಸಮುದಾಯದವರನ್ನು ಭೇಟಿ ಮಾಡಿದರು.


ಈ ಸಂದರ್ಭದಲ್ಲಿ ಬುಡ್ಗ ಜಂಗಮ ಸಮುದಾಯ ಎದುರಿಸುತ್ತಿರುವ ಜ್ವಲಂತ ಸಮಸ್ಯೆಗಳು ಹಾಗೂ ಸವಾಲುಗಳ ಕುರಿತು ಆತ್ಮೀಯವಾಗಿ ಚರ್ಚಿಸಿದರು. ವಿಶೇಷವಾಗಿ ಒಳಮೀಸಲಾತಿ, ಉದ್ಯೋಗಾವಕಾಶಗಳು ಸೇರಿದಂತೆ ಅಲೆಮಾರಿ ಜನಾಂಗದ ಆಶೋತ್ತರಗಳನ್ನು ಆಲಿಸಿ, ಅವರ ಬದುಕಿನ ಸಂಕಷ್ಟಗಳನ್ನು ಹತ್ತಿರದಿಂದ ಅರಿತುಕೊಂಡರು.

**ಬಳ್ಳಾರಿ ಸಮಾರೋಪಕ್ಕೆ ಅನುಮತಿ ನೀಡುವ ವಿಚಾರದಲ್ಲಿ ಸರ್ಕಾರದ ಒತ್ತಡ?**

ಪಾದಯಾತ್ರೆಯ 8ನೇ ದಿನದ ಊಟದ ವಿರಾಮದ ಸಂದರ್ಭದಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಬಿ.ವೈ. ವಿಜಯೇಂದ್ರ ಅವರು, ಬಳ್ಳಾರಿಯಲ್ಲಿ ನಡೆಯಲಿರುವ ಪಾದಯಾತ್ರೆಯ ಸಮಾರೋಪ ಕಾರ್ಯಕ್ರಮಕ್ಕೆ ಅನುಮತಿ ನೀಡುವ ವಿಚಾರದಲ್ಲಿ ಜಿಲ್ಲಾಧಿಕಾರಿಗಳು ಮೀನಮೇಷ ಮಾಡುತ್ತಿದ್ದಾರೆ ಎಂಬ ಮಾಹಿತಿ ತಮ್ಮ ಗಮನಕ್ಕೆ ಬಂದಿದೆ ಎಂದು ತಿಳಿಸಿದರು.

“ಜಿಲ್ಲಾಧಿಕಾರಿಗಳು ರಾಜ್ಯ ಕಾಂಗ್ರೆಸ್ ಸರ್ಕಾರದ ಒತ್ತಡದಲ್ಲಿದ್ದಂತೆ ಕಾಣುತ್ತಿದೆ. ಬಳ್ಳಾರಿಯಲ್ಲಿ ಪಾದಯಾತ್ರೆ ಸಮಾರೋಪ ಕಾರ್ಯಕ್ರಮಕ್ಕೆ ಅನುಮತಿ ನೀಡಲು ಮೀನಮೇಷ ಮಾಡುತ್ತಿದ್ದಾರೆ ಎಂಬ ಮಾಹಿತಿ ಸಿಕ್ಕಿದೆ. ನಾನು ಸಂಬಂಧಿತರೊಂದಿಗೆ ಮಾತನಾಡುತ್ತೇನೆ. ಶಾಂತಿಯುತವಾಗಿ ನಡೆಯುತ್ತಿರುವ ಈ ಪಾದಯಾತ್ರೆಯನ್ನು ಇಡೀ ರಾಜ್ಯದ ಹಾಗೂ ದೇಶದ ಜನರು ಗಮನಿಸುತ್ತಿದ್ದಾರೆ,” ಎಂದು ಹೇಳಿದರು.

ಜಿಲ್ಲಾಧಿಕಾರಿಗಳು ಯಾವುದೇ ಸರ್ಕಾರದ ಒತ್ತಡಕ್ಕೆ ಮಣಿಯದೆ ಕಾರ್ಯಕ್ರಮಕ್ಕೆ ಅನುಮತಿ ನೀಡಬೇಕು ಎಂದು ಆಗ್ರಹಿಸಿದ ಅವರು, “ನಾವು ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿದ್ದೇವೆ. ಹೋರಾಟ ಮಾಡುವುದು ಪ್ರತಿಯೊಬ್ಬರ ಹಕ್ಕು. ಇದು ಜನಪರ ಹೋರಾಟ. ಯಾಕೆ ಅನುಮತಿ ನೀಡುವುದಿಲ್ಲ? ನಾನೂ ನೋಡುತ್ತೇನೆ. ಕೊಟ್ಟೇ ಕೊಡುತ್ತಾರೆ,” ಎಂದು ವಿಶ್ವಾಸ ವ್ಯಕ್ತಪಡಿಸಿದರು.



## ಸರಕಾರದ ಒತ್ತಡಕ್ಕೆ ಮಣಿಯದೇ ಅನುಮತಿ ನೀಡಬೇಕು: ಬಿ.ವೈ.ವಿಜಯೇಂದ್ರ

● ವಿಕ್ರಮ ವಾಹಿನಿ | ಹಳೇ ದರೋಜಿ (ಸಂಡೂರು)

ಬಳ್ಳಾರಿ ಜಿಲ್ಲಾಧಿಕಾರಿಗಳು ರಾಜ್ಯದ ಕಾಂಗ್ರೆಸ್ ಸರಕಾರದ ಒತ್ತಡದಲ್ಲಿದ್ದಂತೆ ಕಾಣುತ್ತಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರು ತಿಳಿಸಿದ್ದಾರೆ.

ಮಾಧ್ಯಮಗಳ ಜೊತೆ ಇಂದು ಮಾತನಾಡಿದ ಅವರು, ಬಳ್ಳಾರಿಯಲ್ಲಿ ಪಾದಯಾತ್ರೆ ಸಮಾರೋಪ ಕಾರ್ಯಕ್ರಮಕ್ಕೆ ಅನುಮತಿ ನೀಡಲು ಮೀನಮೇಷ ಮಾಡುತ್ತಿದ್ದಾರೆ ಎಂಬ ಮಾಹಿತಿ ಸಿಕ್ಕಿದೆ. ನಾನು ಸಂಬಂಧಿತರಲ್ಲಿ ಮಾತನಾಡುವೆ. ಶಾಂತಿಯುತವಾಗಿ ನಡೆಯುತ್ತಿರುವ ಪಾದಯಾತ್ರೆಯನ್ನು ಇಡೀ ರಾಜ್ಯ, ದೇಶದ ಜನರು ನೋಡುತ್ತಿದ್ದಾರೆ ಎಂದರು.

ಜಿಲ್ಲಾಧಿಕಾರಿಗಳು ಸರಕಾರದ ಒತ್ತಡಕ್ಕೆ ಮಣಿಯದೇ ಅನುಮತಿ ನೀಡಬೇಕು. ನಾವು ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿದ್ದೇವೆ; ಹೋರಾಟ ಮಾಡಲು ಪ್ರತಿಯೊಬ್ಬರಿಗೂ ಹಕ್ಕಿದೆ. ಇದು ಜನಪರ ಹೋರಾಟ ಎಂದು ತಿಳಿಸಿದರು. ‘ಯಾಕೆ ಅನುಮತಿ ನೀಡುವುದಿಲ್ಲ; ನಾನೂ ನೋಡುವೆ. ಕೊಟ್ಟೇ ಕೊಡುತ್ತಾರೆ’ ಎಂದು ಅವರು ಮಾಧ್ಯಮಗಳ ಪ್ರಶ್ನೆಗೆ ಉತ್ತರ ನೀಡಿದರು.

**ಮಾಧ್ಯಮಗಳ ಸಹಕಾರಕ್ಕೆ ವಿಜಯೇಂದ್ರ ಧನ್ಯವಾದ**

8ನೇ ದಿನದ ಪಾದಯಾತ್ರೆಯ ವೇಳೆ ಪಾದಯಾತ್ರೆಯ ಪ್ರತಿಯೊಂದು ಹೆಜ್ಜೆಯನ್ನೂ ಜನರಿಗೆ ತಲುಪಿಸುವಲ್ಲಿ ನಿರಂತರವಾಗಿ ಶ್ರಮಿಸುತ್ತಿರುವ ಮಾಧ್ಯಮ ಪ್ರತಿನಿಧಿಗಳೊಂದಿಗೆ ವಿಜಯೇಂದ್ರ ಅವರು ಆತ್ಮೀಯವಾಗಿ ಸಂವಾದ ನಡೆಸಿದರು.

ಪಾದಯಾತ್ರೆಯ ಆರಂಭದಿಂದಲೂ ಮಾಧ್ಯಮಗಳು ನೀಡುತ್ತಿರುವ ಸಹಕಾರ ಹಾಗೂ ನಿರಂತರ ಕವರೇಜ್‌ಗೆ ಧನ್ಯವಾದ ಸಲ್ಲಿಸಿದ ಅವರು, ಎಂಟು ದಿನಗಳ ಪಾದಯಾತ್ರೆಯಲ್ಲಿ ಎದುರಾದ ಸವಾಲುಗಳು, ಜನರಿಂದ ದೊರೆತ ಸ್ಪಂದನೆ ಹಾಗೂ ಈ ಪಾದಯಾತ್ರೆಯಿಂದ ಕಲಿತ ಪಾಠಗಳ ಕುರಿತು ಮಾಧ್ಯಮ ಪ್ರತಿನಿಧಿಗಳೊಂದಿಗೆ ಆತ್ಮೀಯವಾಗಿ ಚರ್ಚಿಸಿದರು.

ಪಾದಯಾತ್ರೆ ಕೇವಲ ರಾಜಕೀಯ ಕಾರ್ಯಕ್ರಮವಾಗಿ ಉಳಿಯದೆ, ಜನರ ಬದುಕನ್ನು ಹತ್ತಿರದಿಂದ ನೋಡುವ, ಅವರ ನೋವು-ನಲಿವುಗಳನ್ನು ಆಲಿಸುವ ಹಾಗೂ ಸಮಾಜದ ವಿವಿಧ ವರ್ಗಗಳ ಸಮಸ್ಯೆಗಳಿಗೆ ಧ್ವನಿಯಾಗುವ ವೇದಿಕೆಯಾಗಿ ರೂಪುಗೊಂಡಿದೆ ಎಂಬುದು ಇಂದಿನ ದಿನದ ವಿಶೇಷವಾಗಿತ್ತು.

**14 ಕಿ.ಮೀ. ನಡಿಗೆ; ಕುಡಿತಿನಿ ಬಳಿ 8ನೇ ದಿನದ ಸಮಾಪ್ತಿ**

ಬೆಳಗ್ಗೆಯಿಂದ ಆರಂಭವಾದ 8ನೇ ದಿನದ ಪಾದಯಾತ್ರೆಗೆ ಮಾರ್ಗದುದ್ದಕ್ಕೂ ಜನರು ಅಪಾರ ಬೆಂಬಲ ವ್ಯಕ್ತಪಡಿಸಿದರು. ಕಾರ್ಯಕರ್ತರು, ಅಭಿಮಾನಿಗಳು ಹಾಗೂ ಸಾರ್ವಜನಿಕರು ಹೆಜ್ಜೆ ಹೆಜ್ಜೆಗೂ ಸಾಥ್ ನೀಡಿದರು. ಎಂಟು ದಿನಗಳ ಕಾಲ ನಿರಂತರವಾಗಿ ಸಾಗಿದ ಈ ಪಾದಯಾತ್ರೆ ಇದೀಗ ಬಳ್ಳಾರಿಯತ್ತ ಅಂತಿಮ ಹಂತಕ್ಕೆ ತಲುಪಿದ್ದು, ಸಮಾರೋಪ ಸಮಾವೇಶದತ್ತ ರಾಜ್ಯದ ಬಿಜೆಪಿ ಕಾರ್ಯಕರ್ತರು ಹಾಗೂ ಸಾರ್ವಜನಿಕರ ನಿರೀಕ್ಷೆ ಹೆಚ್ಚಾಗಿದೆ. ಜನರ ಸಮಸ್ಯೆಗಳನ್ನು ಆಲಿಸುತ್ತಾ, ಅವರ ನೋವಿಗೆ ಧ್ವನಿಯಾಗುತ್ತಾ ಸಾಗುತ್ತಿರುವ ‘ಬಳ್ಳಾರಿ ಚಲೋ’ ದಿನದಿಂದ ದಿನಕ್ಕೆ ಜನಾಂದೋಲನದ ಸ್ವರೂಪ ಪಡೆದುಕೊಳ್ಳುತ್ತಿದ್ದು, ಬಳ್ಳಾರಿಯತ್ತ ಸಾಗುತ್ತಿರುವ ಪ್ರತಿಯೊಂದು ಹೆಜ್ಜೆಯೂ ಸರ್ಕಾರದ ವಿರುದ್ಧದ ಜನಾಕ್ರೋಶದ ಪ್ರತಿಧ್ವನಿಯಾಗುತ್ತಿದೆ.

## ಪಾದಯಾತ್ರೆಯ ಪ್ರಮುಖ ಹೈಲೈಟ್ಸ್

- ಕಂಪ್ಲಿಯಲ್ಲಿ ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮೂಲಕ 7ನೇ ದಿನದ ಪಾದಯಾತ್ರೆ ಆರಂಭ.
- 20 ಕಿ.ಮೀ. ಪಾದಯಾತ್ರೆ; ಸಂಡೂರಿನ ಹಳೇದಾರೋಜಿಯಲ್ಲಿ ಸಮಾಪ್ತಿ.
- ಪ್ರತಿಯೊಂದು ಊರಿನಲ್ಲೂ ಅದ್ದೂರಿ ಜನಸ್ವಾಗತ.
- ಪಾದಯಾತ್ರೆಯಲ್ಲಿ ಶಿವಮೊಗ್ಗ ಸಂಸದ ಬಿ.ವೈ. ರಾಘವೇಂದ್ರ ಭಾಗಿ.
- “ಬಳ್ಳಾರಿ ಚಲೋ ಜನರ ಸಮಸ್ಯೆಗಳಿಗಾಗಿ ನಡೆಯುತ್ತಿರುವ ಜನಾಂದೋಲನ” – ರಾಘವೇಂದ್ರ.
- “ವಿಜಯೇಂದ್ರ ಅವರ ಹೋರಾಟ ಅಧಿಕಾರಕ್ಕಾಗಿ ಅಲ್ಲ; ಜನರ ಹಿತಕ್ಕಾಗಿ” – ರಾಘವೇಂದ್ರ.
- ಯುವಕರೊಂದಿಗೆ ಉದ್ಯೋಗ, ಶಿಕ್ಷಣ, KPSC, AI ಕುರಿತು ಮುಕ್ತ ಸಂವಾದ.
- KPSCಗೆ ಹೊಸ ಕಾಯಕಲ್ಪ ನೀಡುವ ಭರವಸೆ.
- ಕಲ್ಯಾಣ ಕರ್ನಾಟಕಕ್ಕೆ ವಿಶೇಷ ಆದ್ಯತೆ ನೀಡುವ ಘೋಷಣೆ.
- ಗ್ರಾಮೀಣ ವಿದ್ಯಾರ್ಥಿಗಳಿಗಾಗಿ ಸೈಕಲ್ ಸೇರಿದಂತೆ ವಿದ್ಯಾರ್ಥಿ ಕಲ್ಯಾಣ ಯೋಜನೆಗಳಿಗೆ ಒತ್ತು.
- ಉತ್ತರ ಕರ್ನಾಟಕದಲ್ಲಿ ಪ್ರವಾಸೋದ್ಯಮದ ಮೂಲಕ ಉದ್ಯೋಗ ಸೃಷ್ಟಿಗೆ ಆದ್ಯತೆ.
- ಪಾದಯಾತ್ರೆ ವೇಳೆ 95 ವರ್ಷದ ಅಜ್ಜಿಯ ಭಾವುಕ ಆಶೀರ್ವಾದ.
- ಅಭಿಮಾನಿ ನೀಡಿದ ಎಳೆನೀರು ಕುಡಿದು ವಿಜಯೇಂದ್ರ ಧಣಿವಾರಿಸಿಕೊಂಡರು.

## ‘ಸಚಿವ ಮಲ್ಲಿಕಾರ್ಜುನ್ ಬಹಿರಂಗ ಕ್ಷಮೆ ಯಾಚಿಸಲಿ’

● ವಿಕ್ರಮ ವಾಹಿನಿ | ಕುಡತಿನಿ

ಪ್ರಜಾಪ್ರಭುತ್ವದಲ್ಲಿ ಜನಪರವಾದ ನ್ಯಾಯಯುತ ಹೋರಾಟಗಳನ್ನು ಸರ್ಕಾರ ಅಥವಾ ಮುಖ್ಯಮಂತ್ರಿ ಹತ್ತಿಕ್ಕಲು ಮುಂದಾಗಬಾರದು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಹೇಳಿದರು.

ಬಳ್ಳಾರಿ ಚಲೋ ಪಾದಯಾತ್ರೆಯ ಸಮಾರೋಪಕ್ಕೆ ಬಳ್ಳಾರಿ ಮುನ್ಸಿಪಲ್ ಮೈದಾನದಲ್ಲಿ ಮೊದಲು ಅನುಮತಿ ನಿರಾಕರಿಸಲಾಗಿತ್ತು. ಇದೀಗ ಬಿಜೆಪಿ ಹೋರಾಟಕ್ಕೆ ಮಣಿದು ಸರ್ಕಾರ ಅನುಮತಿ ನೀಡಿದೆ. ಶಾಂತಿಯುತವಾಗಿ ನಡೆಯುವ ಕಾರ್ಯಕ್ರಮಕ್ಕೆ ವಿರೋಧಿಸುವುದು ಪ್ರಜಾಪ್ರಭುತ್ವ ವಿರೋಧಿ ನಡೆ ಎಂದು ಅವರು ಮಾಧ್ಯಮಗಳೊಂದಿಗೆ ಮಾತನಾಡಿ ಆರೋಪಿಸಿದರು.

ಸಮಾವೇಶಕ್ಕೆ ಅನುಮತಿ ನೀಡದಂತೆ ಜಿಲ್ಲಾಧಿಕಾರಿಗಳ ಮೇಲೆ ಸರ್ಕಾರದ ಒತ್ತಡವಿತ್ತು. ಜನಪರ ಹೋರಾಟಗಳಿಗೆ ಅನಗತ್ಯ ಷರತ್ತು ವಿಧಿಸುವುದು ಸರಿಯಲ್ಲ. ಸರ್ಕಾರ ಹಾಗೂ ಮುಖ್ಯಮಂತ್ರಿ ಇಂತಹ ಧೋರಣೆಯನ್ನು ಕೈಬಿಡಬೇಕು ಎಂದು ವಿಜಯೇಂದ್ರ ಆಗ್ರಹಿಸಿದರು.

ದಾವಣಗೆರೆ ಉಸ್ತುವಾರಿ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್ ಅವರು ಹರಿಹರ ಶಾಸಕ ಬಿ.ಪಿ. ಹರೀಶ್ ಕುರಿತು ಅವಾಚ್ಯವಾಗಿ ಮಾತನಾಡಿರುವುದು ಖಂಡನೀಯ. ಇದು ಶಾಸಕರಿಗೆ ಮಾತ್ರವಲ್ಲ, ಇಡೀ ಕ್ಷೇತ್ರದ ಜನರಿಗೆ ಮಾಡಿದ ಅವಮಾನ. ಹೀಗಾಗಿ ಸಚಿವರು ಶಾಸಕರು ಹಾಗೂ ಕ್ಷೇತ್ರದ ಜನರ ಕ್ಷಮೆ ಕೋರಬೇಕು ಎಂದು ಒತ್ತಾಯಿಸಿದರು.

ರಾಜಕಾರಣದಲ್ಲಿ ಟೀಕೆ ಸಹಜವಾದರೂ ಚುನಾಯಿತ ಪ್ರತಿನಿಧಿಗಳ ಬಗ್ಗೆ ತುಚ್ಛವಾಗಿ ಮಾತನಾಡುವುದು ಸರಿಯಲ್ಲ. ಇದೇ ವರಸೆ ಮುಂದುವರಿಸಿದರೆ ರಾಜ್ಯದ ಜನರು ತಕ್ಕ ಪಾಠ ಕಲಿಸಲಿದ್ದಾರೆ ಎಂದು ವಿಜಯೇಂದ್ರ ಎಚ್ಚರಿಸಿದರು.

Vikrama Vahini Kannada Daily, #204, Forest Layout, Jnanabharathi, Bangalore-560095
PRGI NO: KARKAN/2018/78481
vikramavahini@gmail.com
93535 91145
Printed by B.N. Murali Prasad, Published by Swarna Latha B.N., and Printed at Swarna Graphics, Forest Layout, Jnanabharathi, Bangalore -560059 and Published at Bangalore, Editor: B.N. Murali Prasad., Volume:9, Issue : 159,